ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 145
19–11–2025 ಬುಧವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 145

## ಮೆಕ್ಕೆಜೋಳ ಹಾಗೂ ಭತ್ತಕ್ಕೆ ಬೆಂಬಲ ಬೆಲೆ, ಅವಳಿ ತಾಲ್ಲೂಕಿನಲ್ಲಿ ರಸ್ತೆಗಳಲ್ಲಿ ಗುಂಡಿಗಳನ್ನು ಮುಚ್ಚಿಸುವಂತೆ ಒತ್ತಾಯಿಸಿ ಹೊನ್ನಾಳಿ ಬಂದ್ ಯಶಸ್ವಿ

**ಹೊನ್ನಾಳಿ :** ಮೆಕ್ಕೆಜೋಳ ಹಾಗೂ ಭತ್ತಕ್ಕೆ ಬೆಂಬಲ ಬೆಲೆಗೆ ಅಗ್ರಹಿಸಿ ಹಾಗೂ ಅವಳಿ ತಾಲ್ಲೂಕಿನಲ್ಲಿ ರಸ್ತೆಗಳಲ್ಲಿ ಬಿದ್ದಿರುವ ಗುಂಡಿಗಳನ್ನು ಮುಚ್ಚಿಸುವಂತೆ ಒತ್ತಾಯಿಸಿ ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ನೇತೃತ್ವದಲ್ಲಿ ಮಂಗಳವಾರ ಕರೆಯಲಾಗಿದ್ದ ಹೊನ್ನಾಳಿ ಬಂದ್ ಬೆಳಿಗ್ಗೆ 6 ರಿಂದ ಮದ್ಯಾಹ್ನ 12 ರವರೆಗೆ ಯಶಸ್ವಿಯಾಯಿತು.

12 ಗಂಟೆಯ ನಂತರ ಸಾರ್ವಜನಿಕರ ಮನವಿ ಮೇರೆಗೆ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಶಾಸಕ ಡಿ.ಜಿ.ಶಾಂತನಗೌಡ ಹಾಗೂ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಚ್.ಬಿ. ಮಂಜಪ್ಪ ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಸಾರ್ವಜನಿಕ ಸಂಚಾರಕ್ಕೆ ಅಡ್ಡಿಪಡಿಸಿರುವುದನ್ನು ಹಾಗೂ ಶಾಲಾ ಕಾಲೇಜುಗಳನ್ನು ಮುಚ್ಚಿಸಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿ ಪ್ರತಿಭಟನೆ ನಡೆಸಿದರು. ಸಾರ್ವಜನಿಕರಿಗೆ ತೊಂದರೆ ಕೊಡುತ್ತಿರುವ ಎಂ.ಪಿ. ರೇಣುಕಾಚಾರ್ಯ ಹಾಗೂ ಬಿಜೆಪಿ ಕಾರ್ಯಕರ್ತರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಡಿವೈಎಸ್ಪಿ ಸ್ಯಾಮ್ ವರ್ಗೀಸ್ ಅವರಿಗೆ ಆಗ್ರಹಿಸಿದರು. ಈ ನಡುವೆ ಕಾಂಗ್ರೆಸ್ ಹಾಗೂ ಬಿಜೆಪಿ ಕಾರ್ಯಕರ್ತರ ನಡುವೆ ಮಾತಿನ ಚಕಮಕಿ ಹಾಗೂ ನೂಕಾಟ ನಡೆದು





ಪರಿಸ್ಥಿತಿ ವಿಕೋಪಕ್ಕೆ ತಿರುಗಿ ಕೈಕೈ ಮಿಲಾಯಿಸುವ ಹಂತಕ್ಕೆ ಹೋಗಿತ್ತು. ಈ ನಡುವೆ ಪೊಲೀಸರು ಪರಿಸ್ಥಿತಿಯನ್ನು ಶಾಂತಗೊಳಿಸಿದರು.

ಬಂದ್ ಹೆಸರಿನಲ್ಲಿ ಬಿಜೆಪಿಯವರು ಸಾರ್ವಜನಿಕರಿಗೆ ತೊಂದರೆ ನೀಡುತ್ತಿದ್ದಾರೆ ಎಂದು ಶಾಸಕ ಡಿ.ಜಿ.ಶಾಂತನಗೌಡ ಆರೋಪಿಸಿದರೆ, ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಅವರು ನಾವು ನಡೆಸುತ್ತಿರುವ ಶಾಂತಿಯುತ ಬಂದ್ ಗೆ ಕಾಂಗ್ರೆಸ್ ನವರು ಅಡ್ಡಿಪಡಿಸುತ್ತಿದ್ದಾರೆ, ತಕ್ಷಣ ಶಾಸಕ ಹಾಗೂ ಎಚ್.ಬಿ. ಮಂಜಪ್ಪ ಅವರ ಬಂಧಿಸಬೇಕು ಎಂದು ಒತ್ತಾಯಿಸಿದರು. ಶಾಸಕ ಡಿ.ಜಿ. ಶಾಂತನಗೌಡ ಅವರು ಬಸ್‌ಗಳನ್ನು ಹೊನ್ನಾಳಿ ಪಟ್ಟಣದ ಒಳಗೆ ಬರಲು ಅನುಕೂಲ ಮಾಡಿಕೊಡುತ್ತಿದ್ದಂತೆ ಬಿಜೆಪಿ ಮುಖಂಡರು ಕೆರಳಿ ಬಸ್‌ಗಳನ್ನು ಒಳಗೆ ಬರದಂತೆ ತಡೆಯುವ ಪ್ರಯತ್ನ ಮಾಡಿದರು.

ಬಂದ್ ವೇಳೆ ಉಂಟಾದ ಉದ್ವಿಗ್ನ ಪರಿಸ್ಥಿತಿಯಿಂದಾಗಿ ಉಭಯ ಪಕ್ಷದ ಕಾರ್ಯಕರ್ತರು ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ಜಮಾಯಿಸತೊಡಗಿದರು. ಆಗ ಸಿಪಿಐ ಸುನೀಲ್‌ಕುಮಾರ್ ಅವರು ಶಾಸಕ ಡಿ.ಜಿ.ಶಾಂತನಗೌಡ ಹಾಗೂ ಎಚ್.ಬಿ.ಮಂಜಪ್ಪ ಅವರನ್ನು ಸಮಾಧಾನಪಡಿಸಿ ಸ್ಥಳದಿಂದ ಹೊರ ಕಳುಹಿಸುವ ಪ್ರಯತ್ನ ಮಾಡಿದರು. ಇತ್ತ ಎಎಸ್‌ಪಿ ಸ್ಯಾಮ್ ವರ್ಗೀಸ್ ಅವರು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಹಾಗೂ ಕಾರ್ಯಕರ್ತರನ್ನು ಸ್ಥಳದಿಂದ ಹೊರಹೋಗುವಂತೆ ಮನವಿ ಮಾಡಿದರು.

ಅನಂತರ ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಹಾಗೂ ಬಿಜೆಪಿ ಕಾರ್ಯಕರ್ತರು ಟ್ರ್ಯಾಕ್ಟರ್‌ನಲ್ಲಿದ್ದ ತಂದಿದ್ದ ಮೆಕ್ಕೆಜೋಳವನ್ನು ರಸ್ತೆಗೆ ಹಾಕಿ ಬೆಂಬಲ ಬೆಲೆ ನೀಡುವಂತೆ ಸರ್ಕಾರಕ್ಕೆ ಆಗ್ರಹಿಸಿದರು.

ಧರಣಿ ಕುಳಿತ ರೇಣುಕಾಚಾರ್ಯ ; ನಾವು ರೈತರಿಗೆ ಆಗಿರುವ ಅನ್ಯಾಯದ ವಿರುದ್ಧ ಶಾಂತಿಯುತವಾಗಿ ಬಂದ್ ಮಾಡುತ್ತಿದ್ದರೆ, ಕಾಂಗ್ರೆಸ್‌ನವರು ವಿನಾಕಾರಣ ಸ್ಥಳಕ್ಕೆ ಬಂದು ಅಡ್ಡಿಪಡಿಸಿದರು, ಇವರ ದೌರ್ಜನ್ಯ ಹಾಗೂ ದಬ್ಬಾಳಿಕೆಯನ್ನು ನಾವು ಸಹಿಸುವುದಿಲ್ಲ ಎಂದು ರೇಣುಕಾಚಾರ್ಯ ಆಕ್ರೋಶ ವ್ಯಕ್ತಪಡಿಸಿ ಸ್ಥಳದಲ್ಲೇ ಧರಣಿ ಆರಂಭಿಸಿದರು. ಎಎಸ್‌ಪಿ ಸ್ಯಾಮ್ ವರ್ಗೀಸ್ ಅವರು ಮಾಜಿ ಸಚಿವರನ್ನು ಸಮಧಾನಪಡಿಸಿ ಧರಣಿ ವಾಪಸ್ ಪಡೆಯುವಂತೆ ಮನವೊಲಿಸಿದರು.

ಬಿಜೆಪಿ ಹಾಗೂ ಕಾಂಗ್ರೆಸ್ ಕಾರ್ಯಕರ್ತರ ನಡುವೆ ನೂಕಾಟ ಮಾತಿನ ಚಕಮಕಿ ನಡೆದ ನಡುವೆಯೇ ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ನೇತೃತ್ವದಲ್ಲಿ ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್ ವಿರುದ್ಧ ದಿಕ್ಕಾರ ಕೂಗಿ ಪ್ರತಿಭಟನೆ ನಡೆಸಿದರೆ, ಶಾಸಕ ಡಿ.ಜಿ.ಶಾಂತನಗೌಡ ಹಾಗೂ ಎಚ್.ಬಿ.ಮಂಜಪ್ಪ ನೇತೃತ್ವದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ವಿರುದ್ದ ದಿಕ್ಕಾರ ಕೂಗಿ ಪ್ರತಿಭಟನೆ ನಡೆಸಿದರು.

**ಪ್ರಯಾಣಿಕರ ಪರದಾಟ ;** ಹೊನ್ನಾಳಿ, ನ್ಯಾಮತಿ ಬಂದ್ ಗೆ ಕರೆ ಕೊಟ್ಟ ಹಿನ್ನೆಲೆಯಲ್ಲಿ ಯಾವುದೇ ಹೋಟೆಲ್ ಗಳನ್ನು ತೆಗೆದಿರಲಿಲ್ಲ. ಇದರಿಂದ ಪ್ರಯಾಣಿಕರು ಖಾಸಗಿ ಬಸ್ ನಿಲ್ದಾಣದಲ್ಲಿ ಉಳಿಯುವ ಸ್ಥಿತಿ ಉಂಟಾಯಿತು. ಮದ್ಯಾಹ್ನ 12 ಗಂಟೆ ನಂತರ ಕೆಎಸ್‌ಆರ್‌ಟಿಸಿ ಬಸ್‌ಗಳು ಹೊನ್ನಾಳಿ ಪಟ್ಟಣಕ್ಕೆ ಬರಲಾರಂಭಿಸಿದವು, ದೂರದಿಂದ ಆಗಮಿಸಿದ ಪ್ರಯಾಣಿಕರು ಊಟ ತಿಂಡಿಗೆ ಪರದಾಡುವಂತಾಯಿತು. ಶಾಲಾ ಕಾಲೇಜುಗಳು ಮುಚ್ಚಲ್ಪಟ್ಟಿದ್ದವು. ಸರ್ಕಾರಿ ಕಚೇರಿಗಳು, ಬ್ಯಾಂಕ್‌ಗಳು ಎಂದಿನಂತೆ ಕಾರ್ಯನಿರ್ವಹಿಸಿದರು. ಬಂದ್ ವೇಳೆ ತಹಶೀಲ್ದಾರ್ ರಾಜೇಶ್‌ಕುಮಾರ್ ಹಾಗೂ ಅಧಿಕಾರಿ ವರ್ಗ, ಪೊಲೀಸರು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಿದ್ದರು.

## ಪ್ರಜಾಪ್ರಭುತ್ವದಲ್ಲಿ ಪ್ರತಿಭಟನೆ ಮಾಡುವ ಹಕ್ಕು ಎಲ್ಲರಿಗೂ ಇದೆ: ಡಿ.ಜಿ.ಶಾಂತನಗೌಡ



**ಹೊನ್ನಾಳಿ :** ಪ್ರಜಾಪ್ರಭುತ್ವದಲ್ಲಿ ಪ್ರತಿಭಟನೆ ಮಾಡುವ ಹಕ್ಕು ಎಲ್ಲರಿಗೂ ಇದೆ, ಸಾರ್ವಜನಿಕರಿಗೆತೊಂದರೆಯಾಗದಂತೆ ಮಾಡಬೇಕು ಆದರೆ ಬಿಜೆಪಿಯವರು ಇದನ್ನು ಮೀರಿ ವಿದ್ಯಾರ್ಥಿಗಳು, ಯುವಕರನ್ನು ಪ್ರಚೋದನೆ ಮಾಡುವರೀತಿಯಲ್ಲಿ, ಸಾರ್ವಜನಿಕರಿಗೆತೊಂದರೆಯಾಗುವಂತೆ ಪ್ರತಿಭಟನೆ ನಡೆಸುವುದು ಸರಿಯಲ್ಲಎಂದು ಶಾಸಕ ಡಿ.ಜಿ.ಶಾಂತನಗೌಡ ಹೇಳಿದರು.

ಮಂಗಳವಾರ ತಾಲೂಕು ಬಿಜೆಪಿ ಪಕ್ಷದವತಿಯಂದ ಹೊನ್ನಾಳಿ ಮತ್ತು ನ್ಯಾಮತಿ ಅವಳಿ ತಾಲೂಕುಗಳಲ್ಲಿ ಸಕಾರದ ವೈಫಲ್ಯ ಖಂಡಿಸಿ ಪ್ರತಿಭಟನೆ ಹಾಗೂ ಬಂದ್‌ಕಾರ್ಯಕ್ರಮ ನಡೆಸಿದ ಸಂದರ್ಭದಲ್ಲಿ ಹೊನ್ನಾಳಿಯಲ್ಲಿ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಹಾಗೂ ಬಯಲು ಸೀಮೆ ಪ್ರದೇಶಾಭಿವೃದ್ದಿ ಮಂಡಳಿ ಅಧ್ಯಕ್ಷಎಚ್.ಬಿ.ಮಂಜಪ್ಪಅವರು ಬಂದ್ ನಿಂದ ಒಂದು ಊರಿನಿಂದ ಇನ್ನೊಂದು ಊರಿಗೆ ಹೋಗುವ ಪ್ರಯಾಣಿಕರು, ಮಹಿಳೆಯರು, ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತದೆಎಂದು ಅವಳಿ ಬಸ್ ಗಳನ್ನು ಹೋಗಲು ಬಿಡುವಂತೆ ಹೇಳಿ, ಹೊಟೇಲ್, ಅಂಗಡಿಗಳನ್ನು ತೆರೆಯುವಂತೆ ಹೇಳುತ್ತಿದ್ದಾರೆ ಮುಖಂಡಎಂ.ಎಸ್. ಫಾಲಾಕ್ಷಪ್ಪ ಹಾಗೂ ಎಚ್.ಬಿ.ಮಂಜಪ್ಪನವರ ನಡುವೆತೀವ್ರ ವಾಗ್ವಾಳಿ, ತಳ್ಳಾಟ ನಡೆದು, ಪಾಲಾಕ್ಷಪ್ಪಅವರುತನ್ನ ಮೇಲೆ ಎಚ್.ಬಿ.ಮಂಜಪ್ಪ ಹಲ್ಲೆ ಮಾಡಿದ್ದಾರೆಎಂದು ಆರೋಪಿಸಿದ್ದರಿಂದ, ಈ ಕುರಿತು ಶಾಸಕ ಡಿ.ಜಿ.ಶಾಂತನಗೌಡಅವರ ನೇತೃತ್ವದಲ್ಲಿ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿನಡೆಸಿ ಮಾತನಾಡಿದರು.

ಬಿಜೆಪಿ ಯವರು ಕೇವಲ ಪ್ರಚಾರಕ್ಕಾಗಿ ಈ ರೀತಿಇಲ್ಲಸಲ್ಲದ ಆರೋಪಗಳನ್ನು ಮಾಡುತ್ತಿದ್ದು, ಕೇವಲ ಹೊನ್ನಾಳಿ, ನ್ಯಾಮತಿ ಮಾತ್ರವಲ್ಲಇಡೀರಾಜ್ಯದಲ್ಲಿ ರಸ್ತೆಗಳು ಗುಂಡಿಗಳಿಂದ ಕೊಡಿವೆ, ಶಿವಮೊಗ್ಗ ಮುಖ್ಯರಸ್ತೆಗೆ 40 ಕೋಟಿ ಹಾಕಲಾಗಿದೆ ಇದೀಗ ಮಳೆಗಾಳ ಮುಗಿದಿದ್ದು ಈಗ ತಾತ್ಕಲಿಕವಾಗಿರಸ್ತೆ ಗುಂಡಿಗಳನ್ನು ಮುಚ್ಚಲು ಕ್ರಮಕೈಗೊಳ್ಳಲಾಗಿದೆ ಇದಕ್ಕೆ 5 ಕೋಟಿ ಹಣ ಬಿಡುಗಡೆಕೂಡಆಗಿದೆ–ಎಂದು ಸ್ಪಷ್ಟ ಪಡಿಸಿದರು.

ಇದೇ ರೇಣುಕಾಚಾರ್ಯ ಅವರ ಅಧಿಕಾರವಾಧಿಯಲ್ಲಿ ಕೂಲಂಬಿ, ಕರ್ಕಿರಸ್ತೆ, ಸಾಸ್ವೇಹಳ್ಳಿ ಯಿಂದ ನಲ್ಲೂರು ರಸ್ತೆಗಳು ಕಳಪೆ ಕಾಮಗಾರಿಯ ಫಲವಾಗಿ ಇಂದಿಗೂ ಗುಂಡಿಗಳಿಂದ ತುಂಬಿವೆ ಇದನ್ನು ಕೇಳುವವರು ಯಾರುಎಂದು ಶಾಸಕ ಶಾಂತನಗೌಡ ಪ್ರಶ್ನೆ ಮಾಡಿದರು.

ಸಚಿವ ಸ್ಥಾನದಅಕಾಂಕ್ಷಿಯಲ್ಲಃಃತಾವು ಸಚಿವ ಸ್ಥಾನದಆಕಾಂಕ್ಷಿಯೇಎಂದು ಮಾದ್ಯಮದವರು ಪ್ರಶ್ನೆಮಾಡಿದಾಗ, ಶಾಸಕ ಡಿ.ಜಿ.ಶಾಂತನಗೌಡಅವರು ಮಾತನಾಡಿತಾನು ಸಚಿವ ಸ್ಥಾನದಅಕಾಂಕ್ಷಿಯಲ್ಲಒಂದು ವೇಳೆ ಪಕ್ಷದ ವರಿಷ್ಠರುಆವರಾಗಿಯೇಮಂತ್ರಿ ಸ್ಥಾನ ಕೊಟ್ಟರೆಇದು ಅವಳಿ ತಾಲೂಕಿನಜನರ ಆಸೆ, ನನ್ನ ಭಾಗ್ಯಎಂದಅವರು ಸಚಿವ ಸ್ಥಾನ ನಿಭಾಯಿಸುವಎಲ್ಲಾ ಶಕ್ತಿ ನನಗೆ ಇದೆಎಂದು ಹೇಳಿದರು.

ಕಾಂಗ್ರೆಸ್‌ಜಿಲ್ಲಾಧ್ಯಕ್ಷ ಹಾಗೂ ಬಯಲು ಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ಆಧ್ಯಕ್ಷಎಚ್.ಬಿ.ಮಂಜಪ್ಪಅವರು ಮಾತನಾಡಿ, ಎಂ.ಪಿ.ರೇಣುಕಾಚಾರ್ಯಅವರು ಕೇವಲ ಪ್ರಚಾರಕ್ಕಾಗಿ ಪ್ರತಿಭಟನೆ, ಬಂದ್ ನಂತಹ ಕಾರ್ಯಕ್ರಮಗಳನ್ನು ನಡೆಸುತ್ತಾರೆಯೇ ಹೊರತು ,ಜನರ ಒಳಿತಿಗಾಗಿ ಅಲ್ಲ. ಇದು ಹಲವಾರು ವರ್ಷಗಳಿಂದ ನಡೆದುಕೊಂಡು ಬರುತ್ತಿದ್ದು, ಕಾಂಗ್ರೆಸ್ ಪಕ್ಷವುಕೂಡ ಕೆಲವೇ ಬಾರಿ ಸೈದ್ದಾಂತಿಕೆ ಹಿನ್ನಲೆಯಲ್ಲಿ ಪ್ರತಿಭಟನೆ ನಡೆಸಿದೆ ಆದರೆ ಸಾರ್ವಜನಿಕರಿಗೆ ಹಾಗೂ ಇತರರಿಗೆತೊಂದರೆಯಾಗದಂತೆ ಕೆಲ ಗಂಟೆಗಳ ಕಾಲ ಪ್ರತಿಭಟನೆ ನಡೆಸಿ ಸಂಬಂಧಿಸಿದವರಿಗೆ ಮನವಿ ಪತ್ರ ನೀಡಿ ಮುಕ್ತಾಯ ಮಾಡುತ್ತಿದ್ದೇವು.

ಆದರೆ ಬಿಜೆಪಿಯುವರು ಬೆಳಗ್ಗೆ 6 ರಿದ ಸಂಜೆ 6ರವಗೆ ಬಂದ್ ಮಾಡಿ ಬೇರೆ ಬೇರೆ ಊರುಗಳಿಗೆ ತೆರಳುವ ಬಸ್ ಹಾಗೂ ಇತರೆ ವಾಹಗಳನ್ನು ತಡೆದು ನಿಲ್ಲಿಸಿದರೆ ಅನೇಕ ತುರ್ತುಕೆಲಸಗಳಿಗೆ ಹೋಗುತ್ತಿರುವಜನರಿಗೆ, ಮಹಿಳೆಯರ ಪಾಡೇನುಅವರ ಪರಿಸ್ಥಿತಿ ಏನಾಗಬೇಕು, ಎಲ್ಲವೂ ಬಂದ್‌ಆದಕಾರಣಅವರಿಗೆ ನೀರು,ಉಪಹಾರ ಸೇರಿದಂತೆ ಏನೂ ಕೂಡ ಸಿಗದಿರುವ ಪರಿಸ್ಥಿತಿಯಾಗುತ್ತದೆ, ಈ ಹಿನ್ನಲೆಯಲ್ಲಿತಾನು ಹಾಗೂ ಶಾಸಕ ಡಿ.ಜಿ.ಶಾಂತನಗೌಡಅವರೊಂದಿಗೆ ಬಸ್ ಗಳನ್ನು ಹೋಗಲು ಬಿಡುವಂತೆ ಹೇಳುತ್ತಿದ್ದಾಗ ಈ ಹಿಂದೆಕಾಂಗ್ರೆಸ್ ನಲ್ಲಿದ್ದುಅಧಿಕಾರ ಅನುಭವಿಸಿ ಇದೀಗ ಬಿಜೆಪಿಯಲ್ಲಿರುವಎಂ.ಎಸ್ ಪಾಲಾಕ್ಷಪ್ಪಅವರುತನ್ನನ್ನುಏಕವಚನದಲ್ಲಿ ನಿಂದಿಸಿದಾಗ ಇಬ್ಬರ ನಡೆಣಟಿಜಜಜಿಟಿಜಜವ ಪರಸ್ಪರ ವಾಗ್ವಾಳಿ ನಡೆದು ಪರಸ್ಪರ ತಳ್ಳಾಡಿದ್ದೇವೆ ಆದರೆತಾನು ಹಲ್ಲೆ ಮಾಡಿಲ್ಲಅವರು ಸುಳ್ಳು ಆರೋಪ ಮಾಡುತ್ತಿದ್ದಾರೆಅವರು ಬೇಕಾದರೆ ಪೊಲೀಸ್‌ಠಾಣೆಗೆದೂರು ನೀಡಲಿ ತಾನೂಕೂಡಅವರ ಮೇಲೆ ದೂರು ನೀಡಲು ಸಿದ್ದನಿದ್ದೇನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಟಿ.ಎಂ..ಪಿ.ಸಿ.ಎಂ.ಎಸ್. ಮಾಜಿಅಧ್ಯಕ್ಷ ಕುಳ್ಳಗಟ್ಟೆ ಶೇಖರಪ್ಪ, ಸಾಸ್ವೇಹಳ್ಳಿ ಎ.ಜಿ, ಚಂದ್ರಶೇಖರಪ್ಪ, ಮಧುಗೌಡ, ಹಾಗೂ ಪಕ್ಷದಇತರೆ ಮುಖಂಡರು ಹಾಗೂ ಕಾರ್ಯಕರ್ತರುಇದ್ದರು.

## ತಂತ್ರಜ್ಞಾನ ಅಭಿವೃದ್ಧಿಗೆ ಪೂರಕ ನೀತಿ: ಸಿಎಂ

**ಬೆಂಗಳೂರು:** ತಂತ್ರಜ್ಞಾನ ನೀತಿ ಸ್ಪೇಸ್‌ಟೆಕ್ ನೀತಿ ಮತ್ತು ಸ್ಟಾರ್ಟ್‌ಅಪ್ ನೀತಿ ಸರ್ಕಾರ ಜಾರಿ ಮಾಡಿದ್ದು ತಂತ್ರಜ್ಞಾನ ಕ್ಷೇತ್ರದ ಅಭಿವೃದ್ಧಿಗೆ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು .

ಬೆಂಗಳೂರಿನ ಬಿಐಇಸಿಯಲ್ಲಿ ಇಂದಿನಿಂದ ಆರಂಭಗೊಂಡಿರುವ ಮೂರು ದಿನಗಳ ಬೆಂಗಳೂರು ತಂತ್ರಜ್ಞಾನ ಶೃಂಗಸಭೆಯ 28 ನೇ ಆವೃತ್ತಿಯ ಉದ್ಘಾಟಿಸಿ ಅವರು ಮಾತನಾಡಿ. ಈ ಡೇಟಾ–ಚಾಲಿತ, ಉದಯೋನ್ಮುಖ ತಂತ್ರಜ್ಞಾನ–ಸಿದ್ಧ ಕರ್ನಾಟಕ ಮಾಹಿತಿ ತಂತ್ರಜ್ಞಾನ ನೀತಿಯಯೊಂದಿಗೆ ನಾವು ರಾಜ್ಯವನ್ನು ನಾವೀನ್ಯತೆ ಮತ್ತು ಆಳವಾದ ತಂತ್ರಜ್ಞಾನಕ್ಕಾಗಿ ಜಾಗತಿಕ ತಾಣವಾಗಿ ಪರಿವರ್ತಿಸುವ ಗುರಿಯನ್ನು ಹೊಂದಿದ್ದೇವೆ ಎಂದು ಹೇಳಿದರು.

ತಂತ್ರಜ್ಞಾನ ಶಕ್ತಿ ಕೇಂದ್ರವಾಗಿ ಕರ್ನಾಟಕದ



ಏರಿಕೆ ಆಕಸ್ಮಿಕವಲ್ಲ; ಇದು ದೂರದೃಷ್ಟಿಯ ನೀತಿಗಳು, ಆಳವಾದ ಸಾಂಸ್ಥಿಕ ಶಕ್ತಿ ಮತ್ತು ಪ್ರತಿ ಹಂತದಲ್ಲೂ ಸೃಜನಶೀಲತೆ ಮತ್ತು ಶ್ರೇಷ್ಠತೆಯನ್ನು ಪೋಷಿಸುವ ಪರಿಸರ ವ್ಯವಸ್ಥೆಯ ಪರಿಣಾಮವಾಗಿದೆ ಎಂದರು

ಬೆಂಗಳೂರು ಟೆಕ್ ಶೃಂಗಸಭೆ 2025 ಒಂದು ಕಾರ್ಯಕ್ರಮಕ್ಕಿಂತ ಹೆಚ್ಚಿನದಾಗಿದೆ, ಇದು ಕಲ್ಪನೆಗಳು, ಹೂಡಿಕೆ, ನಾವೀನ್ಯತೆ ಮತ್ತು ರೂಪಾಂತರಕ್ಕಾಗಿ ಜಾಗತಿಕ ವೇದಿಕೆಯಾಗಿದೆ. ನವೆಂಬರ್ 18–20 ರವರೆಗೆ ವಿಸ್ತಾರವಾದ ಬೆಂಗಳೂರು ಅಂತರರಾಷ್ಟ್ರೀಯ ಪ್ರದರ್ಶನ ಕೇಂದ್ರದಲ್ಲಿ ಆಯೋಜಿಸಲಾದ ಈ ಆವೃತ್ತಿಯು ಹೊಸ ಅಧ್ಯಾಯವನ್ನು ಪ್ರಾರಂಭಿಸುತ್ತದೆ ಎಂದು ಮುಖ್ಯಮಂತ್ರಿ ಅಭಿಪ್ರಾಯಪಟ್ಟರು.

ಈ ವರ್ಷದ ಥೀಮ್: ಭವಿಷ್ಯೀಕರಣ: ಅಜ್ಞಾತವನ್ನು ರೂಪಿಸುವುದು, ಊಹಿಸಲಾಗದದನ್ನು ಅಳೆಯುವುದು ಮತ್ತು ಜಗತ್ತನ್ನು ಮುಂದಕ್ಕೆ ಬದಲಾಯಿಸುವುದು?, ನಮ್ಮ ಸಾಮೂಹಿಕ ಧ್ಯೇಯದ ಸಾರವನ್ನು ಸೆರೆಹಿಡಿಯುತ್ತದೆ ಎಂದ ಸಿದ್ದರಾಮಯ್ಯ, ಈ ಥೀಮ್ ಅಡಿಯಲ್ಲಿ, ಬೆಂಗಳೂರು ಟೆಕ್ ಶೃಂಗಸಭೆ 2025 ಜಾಗತಿಕ ನಾವೀನ್ಯತೆಯ ಗಡಿಯನ್ನು ಪ್ರತಿನಿಧಿಸುವ ಒಂಬತ್ತು ನಿರ್ಣಾಯಕ ಹಾದಿಗಳನ್ನು ಒಟ್ಟುಗೂಡಿಸುತ್ತದೆ. ಈ ಹಾದಿಗಳಲ್ಲಿ, 600 ಕ್ಕೂ ಹೆಚ್ಚು ಜಾಗತಿಕ ಭಾಷಣಕಾರರು, 1,200+ ಪ್ರದರ್ಶಕರು, 60+ ದೇಶದ ನಿಯೋಗಗಳು ಮತ್ತು ಸಾವಿರಾರು ನಾವೀನ್ಯಕಾರರು ಕರ್ನಾಟಕ ಅಥವಾ ಭಾರತಕ್ಕೆ ಮಾತ್ರವಲ್ಲದೆ ಇಡೀ ಜಗತ್ತಿಗೆ ಮುಂದಿನ ದಶಕ ತಂತ್ರಜ್ಞಾನ ಹೇಗಿರುತ್ತದೆ ಎಂಬುದನ್ನು ವ್ಯಾಖ್ಯಾನಿಸುತ್ತಾರೆ ಎಂದರು.

## ಅಮಾಯಕ ಬಾಲಕನ ಸಾವಿನ ತನಿಖೆಗೆ ಆಗ್ರಹಿಸಿ ದಸಂಸ ಪ್ರತಿಭಟನೆ

**ಚಿಕ್ಕಮಗಳೂರು:** ಬಾನಳ್ಳಿ ಬಗ್ಗಸಗೋಡು ಗ್ರಾಮದ ಪ್ರೀತಂ ಸಾವಿನ ತನಿಖೆಯನ್ನು ನ್ಯಾಯಾಂಗಕ್ಕೆ ಒಳಪಡಿಸಿ ಕುಟುಂಬಸ್ಥರಿಗೆ ಸೂಕ್ತ ನ್ಯಾಯ ಒದಗಿಸಿಕೊಡಬೇಕು ಎಂದು ದಸಂಸ ಮುಖಂಡರುಗಳು ನಗರದ ಆಜಾದ್‌ಪಾರ್ಕ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.

ಈ ವೇಳೆ ದಸಂಸ ರಾಜ್ಯ ಸಮಿತಿ ಸದಸ್ಯ ಮರ್ಲೆ ಅಣ್ಣಯ್ಯ ಮಾತನಾಡಿ, ಮೂಡಿಗೆರೆ ತಾಲ್ಲೂಕಿನ ಬಾನಳ್ಳಿ ಬಗ್ಗಸಗೋಡು ಗ್ರಾಮದ ಪ.ಜಾತಿ ಜನಾಂಗದ ಶಿವಣ್ಣ ಎಂಬುವವರ ಪುತ್ರ ಪ್ರೀತಂ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದನು. ಆದರೆ, ಕಳೆದ 15 ದಿನಗಳಿಂದ ಶಾಲೆಗೆ ಗೈರಾಗಿದ್ದು ಮನಗಂಡ ಪಾಲಕರು ತೀವ್ರ ಗಾಬರಿಗೊಂಡಿದ್ದಾರೆ ಎಂದರು.

ಪ್ರೀತಂ ಎಂಬ ಬಾಲಕನನ್ನು ಭಾರತಿ ಬೈಲ್ ಗ್ರಾಮದ ವ್ಯಕ್ತಿಯೊರ್ವರು ಪಾಲಕರು ಇಲ್ಲದ ಸಮಯದಲ್ಲಿ




ಬಲವಂತವಾಗಿ ಟಿಂಬರ್ ಕೆಲಸಕ್ಕೆ ಕರೆದೊಯ್ದಿದ್ದಾರೆ. ಕೆಲ ಗಂಟೆ ನಂತರ ಮನೆಗೆ ಹಿಂತಿರುಗಿದಾಗ ಶಿವಣ್ಣ, ಕೆಲಸದಾಳಿನ ಮೂಲಕ ಪ್ರೀತಂ ತಲೆಸುತ್ತಿ ಬಿದ್ದಿರುವುದಾಗಿ ತಿಳಿಸಿದ್ದು, ಕೂಡಲೇ ತೆರಳಿದಾಗ ಬಿದ್ದಿರುವ ಜಾಗ ಬದಲಿಸಿ, ಬೇರೆ ಸಮತಟ್ಟಾದ ಜಾಗದಲ್ಲಿ ಪ್ರೀತಂನನ್ನು ಇರಿಸಿದ್ದಾರೆ ಎಂದು ಹೇಳಿದರು.

ಗಾಬರಿಗೊಂಡ ಪಾಲಕರು ಶೀಘ್ರವೇ ಮೂಡಿಗೆರೆ ಸಾರ್ವಜನಿಕ ಆಸ್ಪತ್ರೆಗೆ ಕರೆದೊಯ್ದು, ವೈದ್ಯರು ಪರೀಕ್ಷಿಸಿದಾಗ ಮೃತರಾಗಿದ್ದಾರೆ ಎಂದು ದೃಢಪಡಿಸಿದ್ದಾರೆ. ಈ ವಿಚಾರ ತಿಳಿದ ಭಾರತಿ ಬೈಲ್ ಗ್ರಾಮದ ವ್ಯಕ್ತಿ ಶಿವಣ್ಣ ಎಂಬುವವರನ್ನು ಬಲವಂತದಿಂದ ಬಣಕಲ್ ಪೊಲೀಸ್ ಠಾಣೆಗೆ ಕರೆದುಕೊಂಡು ಅವರೇ ಹೇಳಿಕೆ ಯಂತೆ ಪ್ರಕರಣ ದಾಖಲಿಸಿದ್ದಾರೆ ಎಂದರು.

ಪ್ರೀತಂ ಸಾವು ಹೆಚ್ಚು ಭಾರ ಹೊರೆಸಿದ ಕಾರಣ ಕುಸಿದು ಬಿದ್ದಿರುವ ಸಾಧ್ಯತೆಯಿದೆ. ಹಾಗೂ ಬಾಲ ಅಪರಾಧ ಕಾಯ್ದೆಯ ನಿಯಮದಂತೆ ಮಕ್ಕಳನ್ನು ಯಾವುದೇ ಕೆಲಸಕ್ಕೆ ಕರೆದುಕೊಂಡು ಹೋಗುವಂತಿಲ್ಲ. ಇದು ಪೊಲೀಸ್ ಇಲಾಖೆಗೆ ತಿಳಿದಿದ್ದರೂ ಸಹ ಪ್ರೀತಂ ಬಾಲಕನ ಸಾವನ್ನು ಮುಚ್ಚಿಹಾಕಲಾಗಿದೆ ಎಂದು ದೂರಿದರು.

ಈ ಪ್ರಕರಣದ ಸಂಬಂಧ ಶಿವಣ್ಣ ಎಂಬುವವರು ಅನೇಕ ತಿಂಗಳು ಕಾಲ ಪೊಲೀಸ್ ಇಲಾಖೆಗೆ ತೆರಳಿದರೂ ನ್ಯಾಯ ದೊರಕಿಲ್ಲ. ಅಲ್ಲದೇ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ನೇರ ಗಮನಕ್ಕೆ ತಂದರೂ ಯಾವುದೇ ರೀತಿ ಕ್ರಮ ಕೈಗೊಂಡಿರುವುದಿಲ್ಲ ಎಂದರು.

ಕೂಡಲೇ ಪ್ರೀತಂ ಸಾವಿನ ತನಿಖೆಯನ್ನು ನ್ಯಾಯಾಂಗ ತನಿಖೆಗೆ ಒಳಪಡಿಸಿ ಕುಟುಂಬಸ್ಥರ ನ್ಯಾಯ ಒದಗಿಸಿಕೊಡಬೇಕು ಎಂದು ಒತ್ತಾಯಿಸಿದರು.

### ವಂದೇ ಮಾತರಂ, ವಿಶ್ವಮಾನವ ಇಂಟರ್‌ಸಿಟಿ ನಿಲುಗಡೆಗೆ ಆಗ್ರಹ

## ಮಾಯಕೊಂಡದಲ್ಲಿ ಎಕ್ಸ್‌ಪ್ರೆಸ್ ರೈಲು ನಿಲ್ಲಿಸ್ತಿಲ್ಲ; ಪರದಾಟ ತಪ್ಪಿಲ್ಲ

**–ಜಿ.ಜಗದೀಶ್, ಮಾಯಕೊಂಡ**

**ಮಾಯಕೊಂಡ :** ಎಕ್ಸ್‌ಪ್ರೆಸ್ ರೈಲು ನಿಲುಗಡೆಯಾಗದೇ ಓಡುತ್ತಿರುವುದರಿಂದ ಮಾಯಕೊಂಡ ಸುತ್ತಮುತ್ತಲ ಜನ ಬೆಂಗಳೂರು, ಹುಬ್ಬಳ್ಳಿಗೆ ತೆರಳಲು ದಾವಣಗೆರೆ, ಚಿಕ್ಕಜಾಜೂರು ನಿಲ್ದಾಣಗಳಿಗೆ ಅಲೆಯುವಂತಾಗಿದೆ.

ದಶಕಗಳ ಕೂಗಿಗೆ ಸ್ಪಂದಿಸದ ಜನಪ್ರತಿನಿಧಿಗಳ, ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಮಾಯಕೊಂಡ ಸುತ್ತಮುತ್ತಲಿನ ಜನ ಹಿಡಿಶಾಪ ಹಾಕುತ್ತಿದ್ದಾರೆ.

ದಾವಣಗೆರೆ ತಾಲ್ಲೂಕಿನ ತೋಳಹುಣಸೆ, ಹನುಮನಹಳ್ಳಿ, ಕೊಡಗನೂರು ಮತ್ತು ಮಾಯಕೊಂಡದಲ್ಲಿ ರೈಲ್ವೆ ನಿಲ್ದಾಣಗಳಿವೆ. ಬೆಂಗಳೂರು– ಹುಬ್ಬಳ್ಳಿ, ಬೆಳಗಾಮ್, ಮೈಸೂರು, ಶಿವಮೊಗ್ಗ ರೈಲ್ವೆ ಮಾರ್ಗದ ಸಂಪರ್ಕ ಕಲ್ಪಿಸುವ ಮಾರ್ಗ ಇಲ್ಲಿಂದಲೇ ಹಾದುಹೋಗಿವೆ.

ವಿಶ್ವ ಮಾನವ, ಸಿದ್ದಗಂಗಾ, ವಂದೇ ಮಾತರಮ್, ಸಂಪರ್ಕ ಕ್ರಾಂತಿ ಸೇರಿ ವಿವಿಧ ಎಕ್ಸ್ ಪ್ರೆಸ್ ಮಾಯಕೊಂಡ ರೈಲು ಮಾರ್ಗದಲ್ಲಿಯೇ ಸಂಚರಿಸುತ್ತಿದ್ದರೂ, ಯಾವುದೇ ಎಕ್ಸ್‌ಪ್ರೆಸ್ ರೈಲುಗಳು ನಿಲ್ಲುವುದಿಲ್ಲ. ಬೆಂಗಳೂರು, ಹುಬ್ಬಳ್ಳಿ ಓಡಾಡುವ ಪ್ರಯಾಣಿಕರು ನಿತ್ಯ ತೊಂದರೆ ಅನುಭವಿಸುತ್ತಿದ್ದಾರೆ. ಬೆಂಗಳೂರು, ಹುಬ್ಬಳ್ಳಿ ರೈಲು ಏರಲು ದಾವಣಗೆರೆ ಅಥವಾ ಚಿಕ್ಕಜಾಜೂರಿಗೇ ಹೋಗಲೇಬೇಕಿದೆ.

ಕೊರೊನಾ ಎಫೆಕ್ಟ್:ನಿಂತು ಹೋದ ರೈಲುಗಳು

ಕೊರೊನಾ ಮಹಾಮಾರಿ ದಾಳಿಗೆ ಮುಂಚೆ ಮಾಯಕೊಂಡದಿಂದ ಬೆಂಗಳೂರಿಗೆ ಹೋಗಲು ಮೂರು, ಹುಬ್ಬಳ್ಳಿಗೆ ಹೋಗಲು ಐದು ರೈಲುಗಳಿದ್ದು, ಈಗ ಅವೆಲ್ಲ ರದ್ದಾಗಿವೆ. ‘ಬೆಂಗಳೂರಿಗೆ ಹೋಗಲು ರಾತ್ರಿ ತೆರಳುವ ಒಂದೇ ರೈಲನ್ನು ಕಾಯಬೇಕಿದೆ. ಮಾಯಕೊಂಡ ಸುತ್ತಮುತ್ತಲಿನ ಸಾವಿರಾರು ಪ್ರಯಾಣಿಕರು ರೈಲು ಸಂಚಾರದಿಂದ ವಂಚಿತರಾಗಿದ್ದೇವೆ, ಎಂಬುದು ನಾಗರಿಕರ ಅಳಲು.

ಮಾಯಕೊಂಡ ನಿಲ್ದಾಣದಿಂದ ಸಂಚರಿಸುವ ರೈಲುಗಳು ಮಾಯಕೊಂಡದಲ್ಲಿ 5 ರೈಲುಗಳು, ಮಾತ್ರ ನಿಲುಗಡೆ ಕೊಡುತ್ತವೆ.




ಬೆಳಗಿನ ಜಾವ 5–00, ಬೆಳಿಗ್ಗೆ 8–00ಕ್ಕೆ ಮತ್ತು ಮಧ್ಯಾಹ್ನ 3ಕ್ಕೆ ಮಾತ್ರ ಹುಬ್ಬಳ್ಳಿ ಕಡೆ ಸಂಚರಿಸುತ್ತವೆ. ಸಂಜೆ 6ಕ್ಕೆ ಹೊರಡುವ ಅರಸೀಕೆರೆ– ಹುಬ್ಬಳ್ಳಿ, ರಾತ್ರಿ 10ಕ್ಕೆ ಮಾಯಕೊಂಡದಿಂದ ನಿರ್ಗಮಿಸುವ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಫಾಸ್ಟ್ ಪ್ಯಾಸೆಂಜರ್ ಅವಲಂಭಿಸಬೇಕಿದೆ.

ಹಲವಾರು ಹಳ್ಳಿಗಳ ಕೇಂದ್ರಸ್ಥಾನ ಮಾಯಕೊಂಡಕ್ಕೆ ಸೂಕ್ತ ರೈಲು ಸಂಚಾರ ವ್ಯವಸ್ಥೆ ಇಲ್ಲದೇ, ಅನೇಕ ಬಾರಿ ಮನವಿ




ಮಾಡಿದರೂ ಪ್ರಯೋಜನವಾಗಿಲ್ಲ. ಸಿದ್ದಗಂಗಾ ಎಕ್ಸ್‌ಪ್ರೆಸ್ ಮತ್ತು ವಿಶ್ವಮಾನವ ಎಕ್ಸ್‌ಪ್ರೆಸ್ ನಿಲುಗಡೆ ಮಾಡಲು ಸಂಸತ್ ಸದಸ್ಯರು ಕ್ರಮಕೈಗೊಳ್ಳಬೇಕು. ಸಂಸದರು ರೈಲ್ವೆ ಸಚಿವರೊಂದಿಗೆ ಚರ್ಚಿಸಿ, ಎಕ್ಸ್‌ಪ್ರೆಸ್ ರೈಲು ನಿಲುಗಡೆಗೆ ಮುಂದಾಗಬೇಕು, ಎಂದು ಮಾಯಕೊಂಡದ ರೈತ ಮುಖಂಡ ಪ್ರತಾಪ್, ಸಿ.ಟಿ. ನಿಂಗಪ್ಪ, ತೋಳಜ್ಜರ ಶಿವಕುಮಾರ್, ಬೀರಗೊಂಡರ ಬಾಬೂ, ಮೊಬೈಲ್ ಪ್ರವೀಣ್ ಆಗ್ರಹಿಸಿದ್ದಾರೆ.

### ಆದಾಯದ ಬರಲ್ಲ ಅಂಥಾ ನೆಪ ಹೇಳಬೇಡಿ

ರೈಲ್ವೇ ಇಲಾಖೆ ಮಾಯಕೊಂಡ ನಿಲ್ದಾಣದಲ್ಲಿ ನಿಗದಿತ ಆದಾಯದಷ್ಟು ಟಿಕೆಟ್ ಖರೀದಿಯಾಗುವುದಿಲ್ಲ ಎಂಬ ನೆಪ ಹೇಳಿ, ನಿಲುಗಡೆ ನಿರಾಕರಿಸುವುದು ಸರಿಯಲ್ಲ. ರೈಲ್ವೇ ಇಲಾಖೆ ನಮಗೆ ಸೇವೆ ಒದಗಿಸಬೇಕು, ಆದಾಯ ಲೆಕ್ಕಿಸಬಾರದು. ಪ್ರಯಾಣಿಕರಿಗೆ ಅನ್ಯಾಯ. ಸಂಸದೆ ಡಾ. ಪ್ರಭಾ ಅವರೊಂದಿಗೆ ರೈಲ್ವೆ ಸಚಿವ ಸೋಮಣ್ಣ ಬಳಿ ನಿಯೋಗ ಹೋಗಿ ಮನವರಿಕೆ ಮಾಡುತ್ತೇವೆ, ಇಲಾಖೆ ಎಕ್ಸ್‌ಪ್ರೆಸ್ ಗಳ ಸ್ಟಾಪ್ ಕೊಡಿಸಿ, ಸುತ್ತಮುತ್ತಲಿನ ನಾಗರಿಕರಿಗೆ ಅನುಕೂಲ ಕಲ್ಪಿಸಬೇಕು, ಎಂದು ಮುಖಂಡರಾದ ವಂದೇ?ಂಡದ ಎಂ.ಜಿ. ಗುರುನಾಥ, ಜಿ.ಬಿ.ಮಲ್ಲೇಶ್, ಮಾದಪ್ಪರ ಟೈಲ್ಸ್ ರೇವಣ್ಣ, ಹೆದ್ನೆ ದಿನೇಶ್, ಹುಚ್ಚವನಹಳ್ಳಿ ಆರ್..ಸಿ. ಗಣೇಶ್, ಮಹೇಶ್, ಅಣ್ಣಾಪುರ ಪರುಶುರಾಮ್, ಅಣಬೇಕರು ಅನಿಲ್ ಕುಮಾರ್, ಜಾಫರ್ ಷರೀಪ್, ಬಾವಿಹಾಳ್ ಸಂದೀಪ್ ಒತ್ತಾಯಿಸುತ್ತಾರೆ.

## ರಾಶಿ ಭವಿಷ್ಯ

### ಮೇಷ ರಾಶಿ

ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ಹಣದ ಕೊರತೆ ಇಂದು ನಿಮ್ಮ ಮನೆಯಲ್ಲಿ ಅಪಶ್ರುತಿಗೆ ಕಾರಣವಾಗಬಹುದು. ಅಂತಹ ಪರಿಸ್ಥಿತಿಯಲ್ಲಿ ನೀವು ನಿಮ್ಮ ಮನೆಯವರೊಂದಿಗೆ ಯೋಚಿಸಿ ಅರ್ಥಮಾಡಿಕೊಂಡು ಮಾತನಾಡಿ ಮತ್ತು ಅವರಿಂದ ಸಲಹೆಯನ್ನು ತೆಗೆದುಕೊಳ್ಳಿ. ನಿಮ್ಮ ಕುಟುಂಬದ ಸದಸ್ಯರ ಅಗತ್ಯಗಳ ಮೇಲೆ ಗಮನ ಹರಿಸುವುದು ಇಂದು ನಿಮ್ಮ ಆದ್ಯತೆಯಾಗಿರಬೇಕು. ಇಡೀ ಬ್ರಹ್ಮಾಂಡದ ಭಾವಪರವಶತೆ ಪ್ರೀತಿಯಲ್ಲಿರುವವರ ನಡುವೆ ನಡೆಯುತ್ತದೆ.

### ವೃಷಭ ರಾಶಿ

ನೀವು ಇತರರೊಡನೆ ನಿಮ್ಮ ಖುಷಿಯ ಕ್ಷಣಗಳನ್ನು ಹಂಚಿಕೊಳ್ಳುತ್ತಿದ್ದಂತೆ ನಿಮ್ಮ ಆರೋಗ್ಯ ಅರಳುತ್ತದೆ. ಆದರೆ ಇದನ್ನು ನಿರ್ಲಕ್ಷಿಸುವುದು ನಿಮಗೆ ತೊಂದರೆ ತರುತ್ತದೆ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ಭೇಟಿ ನೀಡುವ ಸಂಬಂಧಿಗಳು ನೀವು ಅಂದುಕೊಂಡಿದ್ದಕ್ಕಿಂತ ಚೆನ್ನಾಗಿರಬಹುದು.

### ಮಿಥುನ ರಾಶಿ

ನೀವು ಇಂದು ನಿಮಗಾಗಿ ಸಾಕಷ್ಟು ಸಮಯ ಹೊಂದಿರುವುದರಿಂದ ನಿಮ್ಮ ಒಳ್ಳೆಯ ಆರೋಗ್ಯದ ಸಲುವಾಗಿ ಒಂದು ಧೀರ್ಘ ನಡಿಗೆಗೆ ಹೋಗಿ. ಆಲೋಚಿಸದೆ ನೀವು ಯಾರಿಗೂ ತಮ್ಮ ಹಣವನ್ನು ಕೊಡಬಾರದು, ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ದೊಡ್ಡ ತೊದರೆಗೊಳಗಾಗಬಹುದು. ದಿನದ ಉತ್ತರಾರ್ಧದಲ್ಲಿ ನೀವು ವಿಶ್ರಾಂತಿ ತೆಗೆದುಕೊಳ್ಳಬಯಸುತ್ತೀರಿ ಮತ್ತು ನಿಮ್ಮ ಕುಟುಂಬದ ಸದಸ್ಯರೊಡನೆ ಸಮಯ ಕಳೆಯಬಯಸುತ್ತೀರಿ.

### ಕರ್ಕ ರಾಶಿ

ವಿಶ್ರಾಂತಿ ಪ್ರಮುಖವಾದ ಒಂದು ದಿನ ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ – ಮನೋಲ್ಲಾಸ ಮತ್ತು ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ. ಇಲ್ಲಿಯವರೆಗೆ ಅನಗತ್ಯವಾಗಿ ಹಣವನ್ನು ಖರ್ಚು ಮಾಡುತ್ತಿದ್ದವರು ಜೀವನದಲ್ಲಿ ಹಣದ ಪ್ರಾಮುಖ್ಯತೆ ಏನು ಎಂಬುದನ್ನು ಅರ್ಥಮಾಡಿಕೊಳ್ಳಬಹುದು ಏಕೆಂದರೆ ಇಂದು ಇದ್ದಕ್ಕಿದ್ದಂತೆ ನಿಮಗೆ ಹಣದ ಅಗತ್ಯವಿರುತ್ತದೆ ಮತ್ತು ನಿಮಗೆ ಸಾಕಷ್ಟು ಹಣವಿರುವುದಿಲ್ಲ.

### ಸಿಂಹ ರಾಶಿ

ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ಮನೆಯ ಸಣ್ಣ ವಸ್ತುಗಳ ಮೇಲೆ ನಿಮ್ಮ ಸಾಕಷ್ಟು ಹಣ ಹಾಳಾಗಬಹುದು, ಇದರ ಕಾರಣದಿಂದ ನೀವು ಮಾನಸಿಕ ಒತ್ತಡಗೊಳಗಾಗಬಹುದು. ನಿಮ್ಮ ಸಂಗಾತಿಯ ಜೊತೆಗಿನ ಸಂಬಂಧ ನಿಮ್ಮ ಕಚೇರಿ ಕೆಲಸದ ಕಾರಣ ಹಾಳಾಗಬಹುದು.

### ಕನ್ಯಾ ರಾಶಿ

ಕೆಲವರು ನಿಮಗೆ ಏನನ್ನಾದರೂ ಕಲಿಯಲು ಬಹಳ ವಯಸ್ಸಾಗಿದೆಯೆಂದು ಭಾವಿಸಬಹುದು ಆದರೆ ಅದು ನಿಜವಲ್ಲ – ನಿಮ್ಮ ಪ್ರಖರ ಮತ್ತು ಸಕ್ರಿಯ ಮನಸ್ಸಿನಿಂದ ನೀವು ಹೆಣಟಿಜಜಜಿಟಿಜಜಸ ವಿಷಯಗಳನ್ನು ಸುಲಭವಾಗಿ ಕಲಿಯುವಿರಿ. ವ್ಯಾಪಾರವನ್ನು ಬಲಪಡಿಸಲು ಇಂದು ನೀವು ಯಾವುದೇ ಪ್ರಮುಖ ಕ್ರಮಗಳನ್ನು ತೆಗೆದುಕೊಳ್ಳಬಹುದು. ಇದಕ್ಕಾಗಿ ನಿಮ್ಮ ಆಪ್ತ ನಿಮಗೆ ಆರ್ಥಿಕವಾಗಿ ಸಹಾಯ ಮಾಡಬಹುದು. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ.

### ತುಲಾ ರಾಶಿ

ನೀವು ಪ್ರಯಾಣಿಸಲು ತುಂಬಾ ದುರ್ಬಲರಾಗಿದ್ದರಿಂದ ದೀರ್ಘ ಪ್ರಯಾಣವನ್ನು ತಪ್ಪಿಸಲು ಪ್ರಯತ್ನಿಸಿ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ಇಂದು ಪ್ರೇಮನಿವೇದನೆ ತಿರುಗೇಟು ನೀಡಬಹುದಾದ್ದರಿಂದ ನಿಮ್ಮ ಸೋಲುಗಳಿಂದ ನೀವು ಪಾಠ ಕಲಿಯಬೇಕು ವ್ಯಾಪಾರ ಸಹವರ್ತಿಗಳು ಬೆಂಬಲ ನೀಡುತ್ತಾರೆ ಮತ್ತು ನೀವು ಬಾಕಿಯಿರುವ ಕೆಲಸಗಳನ್ನು ಪೂರ್ಣಗೊಳಿಸಲು ಒಟ್ಟಿಗೆ ಕೆಲಸ ಮಾಡುತ್ತೀರಿ.

### ವೃಶ್ಚಿಕ ರಾಶಿ

ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ.

### ಧನು ರಾಶಿ

ಒಬ್ಬ ಸ್ನೇಹಿತ ನಿಮ್ಮ ಮುಕ್ತ ಮನಸ್ಸು ಮತ್ತು ಸಹಿಷ್ಣುತೆಯ ಪರಮಾವಧಿಯನ್ನು ಪರೀಕ್ಷಿಸಬಹುದು. ನೀವು ನಿಮ್ಮ ಮೌಲ್ಯಗಳೋಂದಿಗೆ ರಾಜಿಯಾಗದಿರುವಂತೆ ಮತ್ತು ಸಕಾರಣವಾದ ನಿರ್ಧಾರಗಳನ್ನು ಕೈಗೊಳ್ಳುವಂತೆ ಎಚ್ಚರಿಕೆ ವಹಿಸಬೇಕು. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ.

### ಮಕರ ರಾಶಿ

ನೀವು ಇಂದು ನಿಮಗಾಗಿ ಸಾಕಷ್ಟು ಸಮಯ ಹೊಂದಿರುವುದರಿಂದ ನಿಮ್ಮ ಒಳ್ಳೆಯ ಆರೋಗ್ಯದ ಸಲುವಾಗಿ ಒಂದು ಧೀರ್ಘ ನಡಿಗೆಗೆ ಹೋಗಿ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು. ಇಂದು ನೀವು ಸೂಕ್ತವಾಗಿ ಉಳಿಸಲು ಸಾಧ್ಯವಾಗುತ್ತದೆ. ಸ್ನೇಹಿತರು ಮತ್ತು ಸಂಬಂಧಿಗಳೊಡನೆ ಆನಂದಿಸಿ.


### ಕುಂಭ ರಾಶಿ

ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ಇಂವು ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ನಿಮ್ಮ ಸಂಗಾತಿಯ ಕೆಟ್ಟ ಆರೋಗ್ಯದಿಂದಾಗಿ ಇಂದು ಪ್ರಣಯಕ್ಕೆ ಧಕ್ಕೆಯಾಗುತ್ತದೆ. ಉದ್ಯಮಿಗಳು ಕೆಲವು ಹಠಾತ್ ಅನಿರೀಕ್ಷಿತ ಲಾಭ ಅಥವಾ ಆದಾಯದ ಒಳ್ಳೆಯ ದಿನವನ್ನು ಹೊಂದಬಹುದಾದ್ದರಿಂದ ಅವರಿಗೆ ಒಳ್ಳೆಯ ದಿನ.

### ಮೀನ ರಾಶಿ

ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸಗಳನ್ನು ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ. ಸ್ನೇಹಿತರು ಸಂತೋಷದ ಸಂಜೆಗಾಗಿ ನಿಮ್ಮನ್ನು ಅವರ ಸ್ಥಳಕ್ಕೆ ಆಮಂತ್ರಿಸುತ್ತಾರೆ. ಪ್ರೀತಿ ದೇವರ ಪೂಜೆಗೆ ಪರ್ಯಾಯವಾಗಿದೆ;

# ನಿಮಿಷಾಂಬ ಜ್ಯೋತಿಶ್ರೀ ನಾಟ್ಯ ಅಕಾಡೆಮಿಯ ವಿದ್ಯಾರ್ಥಿಗಳ ಸಾಧನೆ



ಗದಗ: ಮೈಸೂರಿನ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲೆ ವಿಶ್ವವಿದ್ಯಾಲಯ ಇವರು 2025 ಏಪ್ರಿಲ್ ಮೇ ನಲ್ಲಿ ನಡೆಸಿದ ಭರತನಾಟ್ಯ ಜೂನಿಯರ್ ಹಾಗೂ ಸೀನಿಯರ್ ಪರೀಕ್ಷೆಯಲ್ಲಿ ನಗರದ ನಿಮಿಷಾಂಬ ಜ್ಯೋತಿಶ್ರೀ ನಾಟ್ಯ ಅಕಾಡೆಮಿಯ ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ಜೂನಿಯರ್ ಪರೀಕ್ಷೆಯಲ್ಲಿ ಈಶ್ವರಿ ಷಡಕ್ಷರಿ (76.5%) ಮತ್ತು ಸೀನಿಯರ್ ಪರೀಕ್ಷೆಯಲ್ಲಿ ವೈಷ್ಣವಿ ಷಡಾಕ್ಷರಿ (73.4%) ಪ್ರಥಮ ಶ್ರೇಣಿಯಲ್ಲಿ ಪ್ರಗತಿ ಸಾಧಿಸಿದ್ದಾರೆ. ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಅಕಾಡೆಮಿಯ ಅಧ್ಯಕ್ಷೆ ರಾಘವಿ ಜ್ಯೋತಿಶ್ರೀ ಹಾಗೂ ಆಡಳಿತ ಮಂಡಳಿ ಅಭಿನಂಧಿಸಿದ್ದಾರೆ.

# ವಿವಿಧ ಬೇಡಿಕೆ ಈಡೇರಿಕೆಗೆ ಸರ್ಕಾರದ ಗಮನ ಸೆಳೆಯುವಂತೆ ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ್ ಗೆ ಮನವಿ

**ದಾವಣಗೆರೆ:** ಇಂಡಸ್ ಟವರ್ಸ್ ಸಂಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ನೂರಾರು ತಂತ್ರಜ್ಞರು ಹಾಗೂ ಭಾರತೀಯ ಪ್ರವೀಟ್ ಟೆಲಿಕಾಂ ಮಜ್ದೂರ್ ಸಂಘ ಹಾಗೂ ಭಾರತೀಯ ಮಜ್ದೂರ್ ಸಂಘದ ಸಹಯೋಗದಲ್ಲಿ ಉಭಯ ಸಂಘಟನೆಗಳ ಪದಾಧಿಕಾರಿಗಳು ಸೋಮವಾರ ವಿಧಾನ ಪರಿಷತ್ ಸದ್ಯಸ ಎನ್.ರವಿಕುಮಾರ್‌ರನ್ನು ದಾವಣಗೆರೆಯ ಹಳೇ ಪ್ರವಾಸಿ ಮಂದಿರದಲ್ಲಿ ಭೇಟಿ ಮಾಡಿ, ಇಂಡಸ್ ಟವರ್ಸ್ ಸಂಸ್ಥೆಯಡಿ ಕೆಲಸ ಮಾಡುತ್ತಿರುವ 140ಕ್ಕೂ ಕಾರ್ಮಿಕರನ್ನು ವಜಾಗೊಳಿಸಿರುವ ಕಾರ್ಮಿಕರನ್ನು ಪುನಃ ಕೆಲಸಕ್ಕೆ ಮರುಸ್ಥಾಪಿಸುವಂತೆ ಹಾಗು ಮುಖ್ಯ ಬೇಡಿಕೆಗಳ ಈಡೇರಿಕೆಗೆ ಸರ್ಕಾರದ ಗಮನ ಸೆಳೆಯುವಂತೆ ಮನವಿ ಸಲ್ಲಿಸಿದರು.

ಈ ವೇಳೆ ಪದಾಧಿಕಾರಿಗಳು ಮಾತನಾಡಿ, ಆಡಳಿತ ಮಂಡಳಿಯು ಕಾರ್ಮಿಕ ವಿರೋಧಿ ನೀತಿ ಅನುಸರಿಸುತ್ತಿದೆ. ಇಂಡಸ್ ಟವರ್ಸ್ ಗುತ್ತಿಗೆಯನ್ನು ಹೊಸದಾಗಿ ಪಡೆದವರು ಏಕಾಏಕಿ ಅನೇಕ ವರ್ಷಗಳಿಂದ ಕೆಲಸ ಮಾಡುತ್ತಿದ್ದ ಕಾರ್ಮಿಕರನ್ನು ಕೆಲಸದಿಂದ ತೆಗೆದು ಹಾಕಿದ್ದು, ಇಂತಹ ಕ್ರಮದಿಂದಾಗಿ ಕಾರ್ಮಿಕರು ಮತ್ತು ಕುಟುಂಬಗಳು ಬೀದಿ ಪಾಲಾಗುವ ಸ್ಥಿತಿ ನಿರ್ಮಾಣವಾಗಿದೆ ಎಂದರು.

. ಕಾರ್ಮಿಕರು ಒತ್ತಾಯಿಸುತ್ತಿರುವ ನ್ಯಾಯಯುವತವಾದ ವೇತನ ಪರಿಷ್ಕರಣೆ ಮತ್ತು ಎಲ್ಲರಿಗೂ ಸಮಾನ ವೇತನದ ವ್ಯವಸ್ಥೆ ಕೂಡಲೇ ಜಾರಿಗೊಳಿಸಲಿ ಎಂದು ಹೇಳದರು.

ಕಾರ್ಮಿಕರು ತಮ್ಮ ಹಕ್ಕುಗಳ ಮರುಸ್ಥಾಪನೆ ಮತ್ತು ನ್ಯಾಯಯುತ ಕಾರ್ಮಿಕ ವ್ಯವಸ್ಥೆ ಜಾರಿಗೆ ತರಬೇಕು. ಎಲ್ಲಾ ಕಾರ್ಮಿಕರಿಗೆ ವೈದ್ಯಕೀಯ ಮತ್ತು ಅಪಘಾತ ವಿಮೆ ನೀಡಬೇಕು. ಕರ್ತವ್ಯ ದ ವೇಳೆ ಸಾವನ್ನಪ್ಪಿದರೆ ಮೃತನ ಕುಟುಂಬಕ್ಕೆ 25 ಲಕ್ಷ ರು. ಪರಿಹಾರ ನೀಡಬೇಕು.

ಎಲ್ಲಾ ಫೀಲ್ಡ್ ಸಿಬ್ಬಂದಿಗೆ ಗತ್ಯ ಸುರಕ್ಷತಾ ಉಪಕರಣ(ಪಿಪಿಇ) ಸಮಯಕ್ಕೆ ಸರಿಯಾಗಿ ನೀಡಬೇಕು ಎಂದು ಮನವಿ ಮಾಡಿದರು.

ಇದರೊಂದಿಗೆ ಇಂಡಸ್ ಟವರ್ಸ್ ತನ್ನ ಎಲ್ಲಾ ಕಾಂಟ್ರ್ಯಾಕ್ಟರ್‌ಗಳ ಕಾರ್ಮಿಕರಿಗೂ ಕಾನೂನುಬದ್ಧ ರಕ್ಷಣೆ ನೀಡಬೇಕು. ಕಂಪನಿಯು ತಕ್ಷಣವೇ ಬಿಪಿಟಿಎಂಎಸ್ ಸಂಘಟನೆಯೊಂದಿಗೆ ಚರ್ಚೆ ಆರಂಭಿಸಬೇಕು ಎನ್ನುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತರುವಂತೆ ಒತ್ತಾಯಿಸಿದರು

.ಈ ವೇಳೆ ಪಾಲಿಕೆಯ ಮಾಜಿ ಸದಸ್ಯ ಪ್ರಸನ್ನಕುಮಾರ್, ಸಂಘಟನೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜೆ.ಜಯೇಶ, ಜಿಲ್ಲಾ ಸಂಚಾಲಕ ನಾಗರಾಜ ಸುರ್ವೆ, ಎಂ.ಶಿವಕುಮಾರ, ಬಿ.ನಾಗರಾಜ, ಎಚ್.ನಂದೇಶ, ಎಚ್.ಎಲ್.ಮಂಜಪ್ಪ ಇತರರು ಇದ್ದರು.

# ಬಾರ್ ಮತ್ತು ರೆಸ್ಟೋರೆಂಟ್‌ನ್ನು ಸ್ಥಳಾಂತರಿಸುವಂತೆ ಆಗ್ರಹಿಸಿ ಪ್ರತಿಭಟನೆ

**ಚನ್ನಗಿರಿ:** ತಾಲೂಕಿನ ಹಿರೇಮಳಲಿ ಗ್ರಾಮದ ನಲ್ಲೂರು ರಸ್ತೆಯಲ್ಲಿರುವಂತಹ ಬಾರ್ ಮತ್ತು ರೆಸ್ಟೋರೆಂಟ್‌ನ್ನು ಆ ಸ್ಥಳದಿಂದ ತಕ್ಷಣವೇ ಬೇರಡೆಗೆ ಸ್ಥಳಾಂತರಿಸುವಂತೆ ಆಗ್ರಹಿಸಿ ಕನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಕಾರ್ಯಕರ್ತರು ಸೋಮವಾರ ಅಬಕಾರಿ ಕಚೇರಿಗೆ ಬೀಗ ಜಡಿದು ಪ್ರತಿಭಟನೆ ನಡೆಸಿದರು.



ರೈತ ಸಂಘದ ರಾಜ್ಯ ಕಾರ್ಯದರ್ಶಿ ಚನ್ನಬಸಪ್ಪ ಮಾತನಾಡಿ ಕಳೆದ 4 ವರ್ಷಗಳ ಹಿಂದೆ ಈ ರಸ್ತೆಯಲ್ಲಿ ಹೊಸದಾಗಿ ಬಾರ್ ನಡೆಸಲು ಅನಮತಿಯನ್ನು ಪಡೆದಿದ್ದಾರೆ. ಆದರೆ ಮೆಳನಾಯ್ಕನ ಕಟ್ಟೆಗೆ ಹೋಗುವ ಸ್ವಲ್ಪ ದೂರವೇ ಈ ಬಾರ್ ಇದ್ದು ಇದರಿಂದ ಗ್ರಾಮೀಣ ಪ್ರದೇಶದ ಯುವಕರು ಮದ್ಯವನ್ನು ಕುಡಿಯಲು ಅಲ್ಲಿಗೆ ತೆರಳುತ್ತಿದ್ದು ಅಲ್ಲಿಂದ ವಾಪಸ್ಸು ಮನೆಗೆ ಬರುವಂತಹ ಸಂದರ್ಭದಲ್ಲಿ ಅಪಘಾತಗಳು ಸಂಭವಿಸುತ್ತಿವೆ.ಕಳೆದ 4 ವರ್ಷದ ಅವಧಿಯಲ್ಲಿ ಸುಮಾರು 20 ಕ್ಕೂ ಹೆಚ್ಚು ಬೈಕ್ ಸವಾರರ ಅಪಘಾತಗಳು ನಡೆದಿದ್ದು ಸುಮಾರು 9 ಜನರು ಈ ಅಪಘಾತದಲ್ಲಿ ಮೃತಪಟ್ಟಿದ್ದಾರೆ. ಇದರಲ್ಲಿ ಕುಡಿದವರು ಇಬ್ಬರು ಆಗಿದ್ದು7 ಜನ ಕುಡಿಯದೇ ಇದ್ದರೂ ತಮ್ಮ ಜೀವವನ್ನು ಬಲಿಕೊಟ್ಟಿದ್ದಾರೆ. ಸರಕಾರ ಬಾರ್‌ಗೆ ಅನುಮತಿಯನ್ನು ನೀಡಿದೆ. ಆದರೆ ಇಂತಹ

ಅಪಘಾತಗಳು ನಡೆಯುವ ಸ್ಥಳಗಳಲ್ಲಿ ಅವಕಾಶ ನೀಡಬಾರದು. ಬಾರ್‌ನ್ನು ಮುಚ್ಚಿ ಎಂದು ನಾವು ಹೇಳುತ್ತಿಲ್ಲ. ಮಾನವೀಯತೆಯಿಂದ ಅಂಗಡಿಯನ್ನ ಬೇರೆಡೆಗೆ ಸ್ಥಳಾಂತರಿಸಿ ಎಂದು ಕೇಳುತ್ತಿದ್ದೇವೆ. ಶುಕ್ರವಾರದವರೆಗೂ ಅಧಿಕಾರಿಗಳಿಗೆ ಗಡುವು ನೀಡಿದ್ದು ಇಲಾಖೆ ಸ್ಥಾಂತರಿಸದೇ ಇದ್ದು ಮತ್ತೆ ಅಬಕಾರಿ ಕಚೇರಿಯ ಎದುರು ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದರು.ಈ ಸಂದರ್ಭದಲ್ಲಿ ರೈತ ಸಂಘದ ಜಿಲೊಲಾ ಕಾರ್ಯದರ್ಶಿ ದಾಗಿನಕಟ್ಟೆ ಬಸವರಾಜಪ್ಪ, ರಾಜ್ಯ ಸಮಿತಿಯ ಸದಸ್ಯ ದೇವರಹಳ್ಳಿ ಶಂಕರ್, ತಾಲೂಕು ಅಧ್ಯಕ್ಷ ಯಲೋದಹಳ್ಳಿ ಕಾಳೇಶ್, ಹೊನ್ನಾಳಿ ರೈತ ಸಂಘದ ಅಧ್ಯಕ್ಷ ಮಾಸಡಿ ಪರಮೇಶ್ವರಪ್ಪ, ಹಿರೇಮಳಲಿ ಓಂಕಾರಪ್ಪ, ನಲ್ಕುದುರೆ ಚನ್ನಬಸಪ್ಪ, ದೇವರಹಳ್ಳಿ ರಂಗನಾಥ್,ಕರೇಕಟ್ಟೆ ಖಲೀಮುಲ್ಲಾ ಇತರರು ಹಾಜರಿದ್ದರು.

# ಕಲ್ಲುಗುಡ್ಡೆ ಶ್ರೀ ಜಟ್ಟಿಗೇಶ್ವರ ಸ್ವಾಮಿ ದೇವಾಲಯದಲ್ಲಿ ಕಾರ್ತಿಕ ದೀಪೋತ್ಸವ ಮತ್ತು ಕೆಂಡಾರ್ಚನೆ

**ಚಿಕ್ಕಮಗಳೂರು** : ತಾಲೂಕಿನ ಆಣೂರು ಸಮೀಪದ ಕಲ್ಲುಗುಡ್ಡೆ ಗ್ರಾಮದಲ್ಲಿ ಕಾರ್ತಿಕ ದೀಪೋತ್ಸವ ಮತ್ತು ಕೆಂಡಾರ್ಚನೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ದೇವಾಲಯದ ಅರ್ಚಕರಾದ ಶ್ರೀ ಮಂಜುನಾಥ್ ತಿಳಿಸಿದ್ದಾರೆ.

ದಿನಾಂಕ 19 ರ ಬುಧವಾರ ಸಂಜೆ ಕಾರ್ತಿಕ ದೀಪೋತ್ಸವ ನಡೆಯಲಿದೆ ಮರುದಿನ ದಿನಾಂಕ 20 ರ ಗುರುವಾರ ಬೆಳಗ್ಗೆ 10 ಗಂಟೆಗೆ ಕೆಂಡಾರ್ಚನೆ ಹಾಗು ಅಂದೆ ಸಂಜೆ ಕೋಲಾ ಕಾರ್ಯಕ್ರಮ ನಡೆಯಲ್ಲಿದೆ. ಈ ಎರಡು ದಿನಗಳು ದೇವಾಲದಲ್ಲಿ ವಿಶೇಷ ಪೂಜೆ. ಪ್ರಸಾದ ವಿನಿಯೋಗ ಅನ್ನಸಂತಾರ್ಪಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು ಭಕ್ತಾಧಿಗಳು ಈ ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಳುವಂತೆ ಮನವಿ ಮಾಡಿದ್ದಾರೆ.

# ಡಿ.07 ರಂದು ಮಾಜಿ ಸೈನಿಕರ ಕುಂದು ಕೊರತೆ ನಿವಾರಣೆ ಸಭೆ

**ಬಳ್ಳಾರಿ:** ಬೆಳಗಾವಿ ನಗರದ ಮರಾಠಾ ಲೈಟ ಇನಫಂಟ್ರಿ, ಶಿವಾಜಿ ಸ್ಟೇಡಿಯಂನಲ್ಲಿ ಡಿ.07 ರಂದು ಬೆಳಿಗ್ಗೆ 06 ರಿಂದ ಸಂಜೆ 06 ಗಂಟೆವರೆಗೆ ಮಾಜಿ ಸೈನಿಕರು ಮತ್ತು ಅವರ ಅವಲಂಬಿತರುಗಳ ಕುಂದು ಕೊರತೆ ನಿವಾರಣಾ ಶಿಬಿರ ಏರ್ಪಡಿಸಲಾಗಿದೆ.

ಶಿಬಿರದಲ್ಲಿ ಮಾಜಿ ಸೈನಿಕರ ನಿವೃತ್ತಿ ಪಿಂಚಣಿ, ಕುಟುಂಬ ಪಿಂಚಣಿ, ಸ್ಪರ್ಶ ಹಾಗೂ ಇಸಿಎಚ್‌ಎಸ್ ಸಂಬಂಧಿಸಿದ ಸಮಸ್ಯೆಗಳು ಕುರಿತು ಸೂಕ್ತ ಪರಿಹಾರ ಕ್ರಮ ಕೈಗೊಳ್ಳಲಾಗುವುದು.

ಶಿಬಿರದಲ್ಲಿ ಪಾಲ್ಗೊಳ್ಳುವ ಫಲಾನುಭವಿಗಳು ತಮ್ಮ ಸಮಸ್ಯೆ ಕುರಿತು ಹೆಸರುಗಳನ್ನು ನೊಂದಾಯಿಸಿಕೊಂಡು, ನೋಂದಣಿ ಸಂಖ್ಯೆಯನ್ನು ಪಡೆಯಬೇಕಾಗಿರುತ್ತದೆ.

ನೊಂದಣಿ ಮಾಡಲು ಬಯಸುವವರು ತಮ್ಮ ಕುಂದು ಕೊರತೆಗಳ ಅರ್ಜಿ ಮತ್ತು ಅದಕ್ಕೆ ಸಂಭಂಧಿಸಿದ ದಾಖಲೆಗಳನ್ನು ಮೊಬೈಲ್ (ವಾಟ್ಸಾಪ್) ಸಂಖ್ಯೆ 8317350584 ಅಥವಾ greatgorill@nic.in ಮೂಲಕ ಅಪ್‌ಲೋಡ್ ಮಾಡಬಹುದು.ಶಿಬಿರದಲ್ಲಿ ಬೆಳಗಾವಿ ಜಿಲ್ಲೆ ಮತ್ತು ಧಾರವಾಡ, ಹಾವೇರಿ, ಗದಗ, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗೆ ಸಂಬಂಧಿಸಿದ ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರುಗಳು ಶಿಬಿರದಲ್ಲಿ ಪಾಲ್ಗೊಂಡು ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬಹುದಾಗಿದೆ.

ಅರ್ಜಿ ಮತ್ತು ಅದಕ್ಕೆ ಸಂಬಂಧಿಸಿದ ದಾಖಲೆಗಳನ್ನು ಮೊಬೈಲ್ (ವಾಟ್ಸಾಪ್) ಸಂಖ್ಯೆ 8317350584 ಗೆ ಅಪ್‌ಲೋಡ್ ಮಾಡಿದ ವಿವರವನ್ನು ತಿಳಿಸಬೇಕು.ಹೆಚ್ಚಿನ ಮಾಹಿತಿಗಾಗಿ ಕಾರ್ಯಾಲಯದ ದೂ.0836–2440176 ಗೆ ಸಂಪರ್ಕಿಸಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಜಂಟಿ ನಿರ್ದೇಶಕ ಅವರು ತಿಳಿಸಿದ್ದಾರೆ.

# ನಗರಸಭೆ ಸೂಚನೆ

**ಚಿಕ್ಕಮಗಳೂರು:** ನಗರಸಭೆಯಿಂದ ಅನುಮತಿ ಪಡೆಯದೆ ಅನಧಿಕೃತವಾಗಿ ನಗರ ವ್ಯಾಪ್ತಿಯಲ್ಲಿ ಸಾರ್ವಜನಿಕ, ಖಾಸಗಿ, ವೈಯಕ್ತಿಕ ಹಾಗೂ ವಿವಿಧ ಕಾರ್ಯಕ್ರಮಗಳ ಫ್ಲೆಕ್ಸ್, ಬ್ಯಾನರ್‌ಗಳನ್ನು ಅಳವಡಿಸಿದ್ದಲ್ಲಿ ಅವುಗಳಿಗೆ ಧಕ್ಕೆ ಅಥವಾ ಹಾನಿ ಮತ್ತಿತರ ಅನಾಹುತಗಳು ಉಂಟಾದಲ್ಲಿ ಅದಕ್ಕೆ ಸಂಬಂಧಪಟ್ಟ ಫ್ಲೆಕ್ಸ್, ಬ್ಯಾನರ್ ಅಳವಡಿಸಿದವರು ಜವಾಬ್ದಾರರಾಗುತ್ತಾರೆಯೇ ವಿನಃ ನಗರಸಭೆ ಹೊಣೆಯಾಗುವುದಿಲ್ಲ ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಂಕದಕಟ್ಟಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಸಚಿವರಾದ ಹೆಚ್ ಕೆ ಪಾಟೀಲ ಭೂಮಿ ಪೂಜೆ

ಗದಗ : ಗದಗ ತಾಲೂಕಿನ ಬಿಂಕದಕಟ್ಟಿ ಗ್ರಾಮದಲ್ಲಿ ಗ್ರಾಮ ಪಂಚಾಯಿತಿಯ ಮುಂಭಾಗದಲ್ಲಿ ಅಂದಾಜು 25 ಲಕ್ಷ ರೂಗಳ ವೆಚ್ಚದಲ್ಲಿ ಸಿಸಿ ರಸ್ತೆ ಕಾಮಗಾರಿ ನಿರ್ಮಾಣ, ತಾರಿಕೊಪ್ಪದವರ ಹೊಲದ ಹತ್ತಿರ 25 ಲಕ್ಷ ರೂಗಳ ವೆಚ್ಚದಲ್ಲಿ ಗಟಾರು ಹಾಗೂ ಸಿಡಿ ನಿರ್ಮಾಣ, 15 ಲಕ್ಷ ರೂಗಳ ವೆಚ್ಚದಲ್ಲಿ ಶಾಂಬರ ರಸ್ತೆಯಲ್ಲಿ ಸೇತುವೆ ನಿರ್ಮಾಣ ಕಾಮಗಾರಿಗೆ ಕಾನೂನು ಹಾಗೂ ಸಂಸರದೀಯ ವ್ಯವಹಾರಗಳ ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್ ಕೆ ಪಾಟೀಲ ಭೂಮಿಪೂಜೆ ನೆರವೇರಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು ಗ್ರಾಮೀಣ ಭಾಗದಲ್ಲಿ ನಿರ್ಮಾಣವಾಗುತ್ತಿರುವ ಅಭಿವೃದ್ಧಿ ಕಾರ್ಮಿಕ ಕಾಮಗಾರಿಗಳಿಂದ ಗ್ರಾಮಗಳು ಸುಂದರ ಹಾಗೂ ಅಭಿವೃದ್ಧಿ ಪಥದತ್ತ ಸಾಗುವ ಲ್ಲಿ ಮಹತ್ವದ ಹೆಜ್ಜೆಗೆ ನೀಡುತ್ತಿವೆ ಆ ನಿಟ್ಟಿನಲ್ಲಿ ರಾಜ್ಯದಲ್ಲಿ ಮಾದರಿಯಾಗಿ ತನ್ನ ವಿನೂತನ ಕಾರ್ಯಕ್ರಮಗಳ

ಮೂಲಕ ವಿಶೇಷತೆಯನ್ನು ಹೊಂದಿರುವ ಬಿಂಕದಕಟ್ಟಿ ಗ್ರಾಮ ಪಂಚಾಯಿತಿ ಇನ್ನು ಹೆಚ್ಚು ಅಭಿವೃದ್ಧಿಗೊಳ್ಳಲು ಎಲ್ಲರೂ ರಚನಾತ್ಮಕ ಕಾರ್ಯಗಳಲ್ಲಿ ಕೈಜೋಡಿಸುವ ಮೂಲಕ ಗ್ರಾಮದ ಬೆಳವಣಿಗೆಗೆ ಸಹಕಾರಿ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಮುಖಂಡರಾದ ಆನಂದಸ್ವಾಮಿ ಗಡ್ಡದ್ದೇವರಮಠ, ರವಿ ಮೂಲಿಮನಿ, ಅಪ್ಪಣ್ಣ ಇನಾಮತಿ, ಸಿಬಿ ದೊಡ್ಡಗೌಡ್ರೆ, ಬಿ ಆರ್ ದೇವರೆಡ್ಡಿ ಗ್ರಾಮ ಪಂಚಾಯಿತಿ ಅಧ್ಯಕ್ಷ ನಿಂಗಪ್ಪ ಪರಪ್ಪನವರ, ಉಪಾಧ್ಯಕ್ಷ ದ್ಯಾಮವ್ವ ಆರಟ್ಟಿ ಸದಸ್ಯರಾದ ತರದರೆಡ್ಡಿ ರಂಗಪ್ಪನವರ, ಪತ್ತೆ ಸಾಬ ನದಾಫ, ವೆಂಕಟೇಶ್ ಕುನಿ, ಮಂಜುನಾಥ ಮಕಳಿ, ಭೀಮವ್ವ ಬೇವಿನಕಟ್ಟಿ, ಲಕ್ಷ್ಮಿ ಮೂಲಿಮನಿ, ತುಳಸ ತಿಮ್ಮನ ಗೌಡ್ರ, ಜೈ ಬುನಬಿ ಸೋನೆ ಖಾನವರ, ಅಶೋಕ ಕರೂರ, ದೇವೇಂದ್ರ ಗೌಡ್ರು ಕರಿ ಗೌಡ್ರ ಗಾಯತ್ರಿ ಖಾನಾಪುರ, ಗಂಗವ್ವ ತಡಿಸಿ ಸೇರಿದಂತೆ ಗ್ರಾಮದ ಮುಖಂಡರು ಜನಪ್ರತಿನಿಧಿಗಳು ಅಧಿಕಾರಿಗಳು ಉಪಸ್ಥಿತರಿದ್ದರು.

# ನಮ್ಮ ದೇಶಕ್ಕಾಗಿ ಶ್ರಮಿಸಿದ ನಾಯಕ ಸರ್ದಾರ್ ವಲ್ಲಭಬಾಯಿ ಪಟೇಲ್

**ಹಾಸನ :** ನಮ್ಮ ದೇಶದಮೊದಲ ಉಪ ಪ್ರಧಾನ ಮಂತ್ರಿಗಳಾಗಿ, ಗೃಹ ಸಚಿವರಾಗಿನಮ್ಮ ದೇಶಕ್ಕಾಗಿ ಶ್ರಮಿಸಿ, ಉತ್ತಮ ಸಂದೇಶಗಳನ್ನು ನೀಡುವ ಮೂಲಕ ಮುಂದಿನ ಪೀಳಿಗೆಗೆ ನಾಂದಿಯನ್ನು ಬರೆದಂತಹ ಮಹಾನ್ ನಾಯಕರು ಸರ್ದಾರ್ ವಲ್ಲಭಬಾಯಿ ಪಟೇಲ್ ಅವರಾಗಿದ್ದಾರೆ ಎಂದು ಬೇಲೂರಿನ ಶಾಸಕರಾದ ಹೆಚ್.ಕೆ ಸುರೇಶ್ ಅವರು ತಿಳಿಸಿದ್ದಾರೆ.

ಭಾರತ ಸರ್ಕಾರ–ಕರ್ನಾಟಕ ಸರ್ಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಸನ, ಮೈ ಭಾರತ್ ಕೇಂದ್ರ, ಹಾಸನ (ಯುವ ವ್ಯವಹಾರಗಳ ಹಾಗೂ ಕ್ರೀಡಾ ಸಚಿವಾಲಯ), ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಹಾಸನ, ಎನ್.ಎಸ್.ಎಸ್ ಘಟಕಗಳು– ಹಾಸನ ವಿಶ್ವವಿದ್ಯಾಲಯ ಸ್ಕೌಟ್ಸ್ & ಗೈಡ್ಸ್, ಎನ್‌ಸಿಸಿ, ಹಾಸನ ಹಾಗೂ ಯುವಕ ಸಂಘ ಮತ್ತು ಯುವತಿ ಮಂಡಳಿಇವರುಗಳ ಸಂಯಕ್ತಾಶ್ರಯದಲ್ಲಿಂದು ಸರ್ದಾರ್ ವಲ್ಲಭಬಾಯಿ ಪಟೇಲ್‌ರವರ 150ನೇ ಜನ್ಮ ದಿನೋತ್ಸವದ ಪ್ರಯುಕ್ತಹಾಸನದ ರೈಲ್ವೆ ಸ್ಟೇಷನ್ ಆವರಣದಿಂದ ಹಾಸನಾಂಬ ಕಲಾಕ್ಷೇತ್ರದ ವರೆಗೆ ಆಯೋಜಿಸಿದ್ದ ಜಿಲ್ಲಾ ಮಟ್ಟದ ಪಾದಯಾತ್ರೆಗೆ ಚಾಲನೆ ನೀಡಿ ಮಾತನಾಡಿದ ಅವರು ಭಾರತ ದೇಶಕ್ಕೆ ವಕೀಲರಾಗಿ ನ್ಯಾಯವನ್ನು ಕೊಟ್ಟಂತಹ ಸರ್ದಾರ್ ವಲ್ಲಭಬಾಯಿ ಪಟೇಲ್ ಅವರ ಜನ್ಮದಿನದಂದು ದೇಶಕ್ಕೆ ಏಕತೆಯ ಸಂದೇಶವನ್ನು ಕೊಡುವ ದೃಷ್ಟಿಯಿಂದ ಹಾಗೂ 150ನೇ ಜನ್ಮದಿನಾಚರಣೆ ಇಡೀ ದೇಶಕ್ಕೆ ಮಾದರಿಯಾಗಬೇಕೆಂದು ಈ ಕಾರ್ಯಕ್ರಮವನ್ನು ದೇಶಾದ್ಯಂತ ಹಮ್ಮಿಕೊಳ್ಳಲಾಗಿದೆಎಂದು ತಿಳಿಸಿದರು.




ಹೊಯ್ಸಳರು ಆಳಿದ ನಾಡು, ಶ್ರವಣಬೆಳಗೊಳದಂತಹ ಅನೇಕ ಐತಿಹಾಸಿಕ ಸ್ಥಳಗಳನ್ನು ಹೊಂದಿರುವ ಸಾವಿರಾರು ವರ್ಷಗಳ ಇತಿಹಾಸ ಇರುವ ಶಿಲ್ಪ ಕಲೆಗಳ ತವರೂರಾದ ನಮ್ಮ ಹಾಸನ ಜಿಲ್ಲೆಯಲ್ಲಿಂದು 150ನೇ ಸರದಾರ್ ವಲ್ಲಬಾಯ್ ಪಟೇಲ್ ರವರ ಜನ್ಮ ದಿನಾಚರಣೆಯನ್ನು ಆಚರಿಸುತ್ತಿರುವುದು ಸಂತಸದ ವಿಷಯವಾಗಿದೆ ಎಂದು ತಿಳಿಸಿದರು.ಈ ಕಾರ್ಯಕ್ರಮದ ರೂವಾರಿ ಮತ್ತು ಏಕತ ನಡಿಗೆಗೆ ಚಾಲನೆ ನೀಡಿದಂತಹ ಈ ದೇಶದ ಪ್ರಧಾನಿ ನರೇಂದ್ರ ಮೋದಿಯವರಿಗೆ ಧನ್ಯವಾದಗಳು ತಿಳಿಸಬೇಕು ಎಂದರು.

ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಮಾತನಾಡಿ 560ಕ್ಕೂ ಹೆಚ್ಚು ಪ್ರಾಂತ್ಯ–ಭಾಗಗಳಾಗಿ ವಿಂಗಡಣೆಯಾಗಿದ್ದ ದೇಶವನ್ನೆಲ್ಲಾ ಒಟ್ಟುಗೂಡಿಸಿ ಸಮಗ್ರ, ಸುಂದರವಾದ ಬಲಿಷ್ಠ ದೇಶ ಉದಯವಾಗುವುದಕ್ಕೆ ಕಾರಣೀಕರ್ತರಾದವರುಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಾಯಿ ಪಟೇಲ್ ಅವರಾಗಿದ್ದಾರೆ ಎಂದು ತಿಳಿಸಿದರು.

ಬಲಿಷ್ಠವಾದ ವ್ಯಕ್ತಿತ್ವ, ನಾಯಕತ್ವ ಗುಣವನ್ನು ಪಟೇಲ್ ಅವರು ಹೊಂದಿದ್ದರು. ಇಂತಹ ಗುಣಗಳನ್ನು ಪ್ರತಿಯೊಬ್ಬರೂ ಅದರಲ್ಲಿಯೂ ಯುವ ಸಮೂಹ ಹೊಂದಿರಲೇಬೇಕು ಎಂದರಲ್ಲದೆ,ನಮ್ಮ ದೇಶವನ್ನು ಕಟ್ಟಿದ್ದಕ್ಕೆ ನಮ್ಮ ದೇಶವನ್ನು ಬಲಿಷ್ಠ ಮಾಡಿದ್ದಕ್ಕೆದೇಶದ ಪ್ರತಿಯೊಬ್ಬರು ಅವರಿಗೆ ಚಿರಋಣಿಯಾಗಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಬಿ.ಆರ್ ಪೂರ್ಣಿಮಾ ಅವರು ಪ್ರಮಾಣ ವಚನವನ್ನು ಬೋಧಿಸಿದರು.

ಕಾರ್ಯಕ್ರಮದಲ್ಲಿ ಹೆಚ್ಚುವರಿ ಪೊಲೀಸ್ ವರೀಷ್ಠಾಧಿಕಾರಿ ತಮ್ಮಯ್ಯ, ಯುವ ಸಬಲೀಕರಣಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಆನಂದ ಮೂರ್ತಿ,ರಾಷ್ಟ್ರ ಪ್ರಶಸ್ತಿ ಪುರಸ್ಕೃತ ರಾದ ಕಲಾವಿದ ಬಿ.ಟಿ ಮಾನವ, ಸಿದ್ದೇಶ್ ನಾಗೇಂದ್ರ, ಅಮಿತ್ ಶೆಟ್ಟಿ, ಗಿರೀಶ್ ಮತ್ತಿತರ ಅಧಿಕಾರಿಗಳು, ಜಿಲ್ಲೆಯ ವಿವಿಧ ಕಾಲೇಜಿನ ವಿದ್ಯಾರ್ಥಿಗಳುಮತ್ತಿತರರು ಭಾಗವಹಿಸಿದ್ದರು.

**ಹೊಯ್ಸಳರು ಆಳಿದ ನಾಡು, ಶ್ರವಣಬೆಳಗೊಳದಂತಹ ಅನೇಕ ಐತಿಹಾಸಿಕ ಸ್ಥಳಗಳನ್ನು ಹೊಂದಿರುವ ಸಾವಿರಾರು ವರ್ಷಗಳ ಇತಿಹಾಸ ಇರುವ ಶಿಲ್ಪ ಕಲೆಗಳ ತವರೂರಾದ ನಮ್ಮ ಹಾಸನ ಜಿಲ್ಲೆಯಲ್ಲಿಂದು 150ನೇ ಸರದಾರ್ ವಲ್ಲಬಾಯ್ ಪಟೇಲ್ ರವರ ಜನ್ಮ ದಿನಾಚರಣೆಯನ್ನು ಆಚರಿಸುತ್ತಿರುವುದು ಸಂತಸದ ವಿಷಯವಾಗಿದೆ**

## ಬಾಬಾಸಾಹೇಬ ಡಾ|| ಅಂಬೇಡ್ಕರ ನ್ಯಾಷನಲ್ ಫೇಲೋಶಿಪ್ ಅವಾರ್ಡ್‌ಗೆ ವಕೀಲ ಮೋಹನ ಎಚ್. ಭಜಂತ್ರಿ ಆಯ್ಕೆ



**ಗದಗ** : 2025ನೇ ಸಾಲಿನ ಬಾಬಾಸಾಹೇಬ ಡಾ. ಅಂಬೇಡ್ಕರ ನ್ಯಾಷನಲ್ ಫೇಲೋಷಿಪ್ ಅವಾರ್ಡ್‌ಗೆ ನಗರದ ಹಿರಿಯ ವಕೀಲ ಮೋಹನ ಎಚ್. ಭಜಂತ್ರಿ ಆಯ್ಕೆಯಾಗಿದ್ದಾರೆ.

ಹುಬ್ಬಳ್ಳಿಯ ಕೆ.ಎಸ್.ಎಲ್. ಯುನ ಸಿಂಡಿಕೇಟ ಸದಸ್ಯರು ಹಾಗೂ ಭಜಂತ್ರಿ(ಕೊರಮ) ಸಮಾಜದ ಗದಗ ಜಿಲ್ಲಾ ಅಧ್ಯಕ್ಷರೂ ಆಗಿರುವ ಮೋಹನ ಎಚ್. ಭಜಂತ್ರಿ ಅವರ ಸಾಮಾಜಿಕ ಸೇವೆ, ಸಮಾಜದಲ್ಲಿ ತುಳಿತಕ್ಕೆ ಒಳಗಾದ ಜನರೊಂದಿಗಿನ ಒಡನಾಟ ಹಾಗೂ ಕಾನೂನು ಸೇವೆಯನ್ನು ಗುರುತಿಸಿ ದೆಹಲಿಯ ಪ್ರತಿಷ್ಠಿತ ಭಾರತೀಯ ದಲಿತ ಅಕಾಡೆಮಿ ಆಯ್ಕೆ ಮಾಡಿದೆ.

ಡಿ. 12ರಂದು ದೆಹಲಿಯಲ್ಲಿ ನಡೆಯುವ 41ನೇ ಭಾರತೀಯ ದಲಿತ ಅಕಾಡೆಮಿ ಕಾರ್ಯಕ್ರಮದಲ್ಲಿ ಗೌರವ ಸ್ವೀಕರಿಸುವರು ಎಂದು ಪ್ರಕಟಣೆ ತಿಳಿಸಿದೆ.

## ಡಿ.12 ರಂದು ಜಿಲ್ಲಾ ಯೋಜನಾ ಸಮಿತಿಗೆ ಚುನಾವಣೆ

**ಚಿಕ್ಕಮಗಳೂರು:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1996 (ಜಿಲ್ಲಾ ಯೋಜನಾ ಸಮಿತಿಯ ಚುನಾವಣೆ) ನಿಯಮಗಳು 1996ರ ನಿಯಮ 8ರ ಪ್ರಕಾರ ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ಮತ ಕ್ಷೇತ್ರದಿಂದ ಚಿಕ್ಕಮಗಳೂರು ಜಿಲ್ಲಾ ಯೋಜನಾ ಸಮಿತಿಗೆ ಡಿಸೆಂಬರ್ 12 ರಂದು ಚುನಾವಣೆಯನ್ನು ನಡೆಸಬೇಕಾಗಿದ್ದು, ಪದನಿಮಿತ್ತ ಚುನಾವಣಾಧಿಕಾರಿಗಳಾದ ಜಿ.ಪಂ. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಹೆಚ್.ಎಸ್.ಕೀರ್ತನಾ ಅವರು ತಮಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ವೇಳಾಪಟ್ಟಿಯನ್ನು ಬಿಡುಗಡೆ ಮಾಡಿದ್ದಾರೆ.ನಗರ ಸ್ಥಳೀಯ ಸಂಸ್ಥೆಗಳಾದ ಚಿಕ್ಕಮಗಳೂರು ನಗರಸಭೆ, ತರೀಕೆರೆ ಪುರಸಭೆ ಮತ್ತು ಅಜ್ಜಂಪುರ ಪಟ್ಟಣ ಪಂಚಾಯಿತಿಗಳಿಂದ 6 ಮಂದಿ ಸದಸ್ಯರನ್ನು ಚುನಾಯಿಸಬೇಕಾಗಿದೆ. ನವೆಂಬರ್ 18 ರಿಂದ 27ರವರೆಗೆ ನಾಮ ನಿರ್ದೇಶನಗಳನ್ನು ಜಿ.ಪಂ. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ನವೆಂಬರ್ 28 ರಂದು ಜಿ.ಪಂ. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳ ಕಚೇರಿಯಲ್ಲಿ ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಡಿಸೆಂಬರ್ 1 ರಂದು ಸಂಜೆ 5 ಗಂಟೆಯವರೆಗೆ ನಾಮಪತ್ರಗಳನ್ನು ಹಿಂತೆಗೆದುಕೊಳ್ಳಲು ಅವಕಾಶ ನೀಡಲಾಗಿದೆ. ಡಿಸೆಂಬರ್ 5 ರಂದು ಜಿ.ಪಂ. ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಚುನಾವಣೆ ನಡೆಯಲಿದ್ದು, ಅಂದೇ ಈ ಸಭಾಂಗಣದಲ್ಲಿ ಮತಗಳ ಎಣಿಕೆ ಕಾರ್ಯ ನಡೆಯಲಿದೆ. ನಗರ ಸ್ಥಳೀಯ ಕ್ಷೇತ್ರದ ಒಟ್ಟು 69 ಮತದಾರರಿಂದ ಮತದಾನ ನಡೆಯಲಿದೆ ಎಂದು ಜಿಲ್ಲಾ ಯೋಜನಾ ಸಮಿತಿ ಚುನಾವಣಾಧಿಕಾರಿಗಳೂ ಆದ ಜಿ.ಪಂ. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

## ಸ್ಪರ್ಧಾತ್ಮಕ ಧಾರಣೆ ಪಡೆಯಿರಿ

**ದಾವಣಗೆರೆ:** ಸುಗ್ಗಿಯ ಕಾಲ ಪ್ರಾರಂಭವಾಗಿದ್ದು, ದಾವಣಗೆರೆ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣದಲ್ಲಿ ಎ ಎಲ್ಲ ಅಧಿಸೂಚಿತ ಕೃಷಿ ಹುಟ್ಟುವಳಿಗಳನ್ನು ಇ-ಟೆಂಡರ್ ಮುಖಾಂತರ ಖರೀದಿ, ಮಾರಾಟ ಮಾಡಲಾಗುತ್ತಿದೆ. ಆದ್ದರಿಂದ ರೈತರು ಬೆಳೆದ ಕೃಷಿ ಉತ್ಪನ್ನಗಳನ್ನು ಇ-ಟೆಂಡರ್ ಮುಖಾಂತರ ಮಾರಾಟ ಮಾಡಿ ಸ್ಪರ್ಧಾತ್ಮಕ ಬೆಲೆ ಪಡೆಯಲು ಕೋರಲಾಗಿದೆ.

ತಮ್ಮ ಉತ್ಪನ್ನ ಮಾರಾಟ ಮಾಡುವ ಮುನ್ನ ಮತ್ತು ನಂತರದಲ್ಲಿ ತಾವು ಬೆಳೆದ ಉತ್ಪನ್ನಗಳನ್ನು ಒಣಗಿಸಿ ಸ್ವಚ್ಛಗೊಳಿಸಿ ಮಾರುಕಟ್ಟೆ ಪ್ರಾಂಗಣಕ್ಕೆ ತಂದು ಇ-ಟೆಂಡರ್ ಮುಖಾಂತರ ಮಾರಾಟ ಮಾಡಿ ಸ್ಪರ್ಧಾತ್ಮಕ ಬೆಲೆ ಪಡೆಯಬೇಕು. ಮಾರಾಟ ಮಾಡಿದ ನಂತರ ಯಾವುದೇ ರೀತಿಯ ಕಮಿಷನ್ ನೀಡಬಾರದು. ಉತ್ಪನ್ನಗಳ ಮಾರಾಟವಾದ ನಂತರ ಪೇಟೆ ಕಾರ್ಯಕರ್ತರಿಂದ ಬಿಳಿ ಚೀಟಿ ತಿರಸ್ಕರಿಸಿ ಅಧಿಕೃತ ಲೆಕ್ಕ ತೀರುವಳಿ ಪಟ್ಟಿ ಕೇಳಿ ಪಡೆಯಬೇಕು.

ವಿದ್ಯುನ್ಮಾನ(ಎಲೆಕ್ಟ್ರಾನಿಕ್)ತೂಕದ ಯಂತ್ರದ ಮೂಲಕವೇ ತೂಕ ಮಾಡಿಸಿ ನಿಖರ ತೂಕ ಖಾತರಿ ಪಡಿಸಿಕೊಳ್ಳಬೇಕು. ರೈತರು ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡುವಾಗ ಯಾವುದೇ ರೀತಿಯ ಶಾಂಪಲ್, ತಳಗಾಳು, ಸೂಟ್, ಫೆಟ್ ನೀಡಬಾರದು. ಯಾರಾದರೂ ಪಡೆದುಕೊಂಡಲ್ಲಿ ಅಂತಹವರ ವಿರುದ್ಧ ಲಿಖಿತವಾಗಿ ಕಚೇರಿಗೆ ದೂರು ನೀಡಬೇಕು ಎಂದು ಜಿಲ್ಲಾಧಿಕಾರಿ ಜಿ. ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ.

## ಸಾರ್ವಜನಿಕರ ಗಮನಕ್ಕೆ

**ಗದಗ** : ಮುಳಗುಂದ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿನ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳ ಮುಖ್ಯಸ್ಥರಿಗೆ ಈ ಮೂಲಕ ತಿಳಿಸುವುದೇನೆಂದರೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸ್ವಯಂ ಪ್ರೇರಿತ ರಿಟ್ ಅರ್ಜಿ ಸಂಖ್ಯೆ 5/2025 ರಲ್ಲಿ ನೀಡಿರುವ ನಿರ್ದೇಶನದಂತೆ ತಮ್ಮ ಸಂಸ್ಥೆಯ ಆವರಣದಲ್ಲಿ ಯಾವುದೇ ಬೀದಿ ನಾಯಿಗಳು ವಾಸವಿದ್ದಲ್ಲಿ ಅದನ್ನು ಪರಿಶೀಲಿಸಿ ಕೂಡಲೇ ಅದರ ಸಂಖ್ಯೆಯನ್ನು ಲೆಕ್ಕ ಮಾಡಿ ಆರೋಗ್ಯ ಶಾಖೆಯ ಮುಖ್ಯಸ್ಥರಿಗೆ/ ಮುಖ್ಯಾಧಿಕಾರಿಗಳಿಗೆ ತಿಳಿಸುವುದು.

ತಮ್ಮ ಸಂಸ್ಥೆಯ ಆವರಣದಲ್ಲಿ ನೀದಿ ನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರದೇಶ ನಿಯಂತ್ರಿಸಲು ಕ್ರಮ ವಹಿಸುವುದು. ನಗರ ಸ್ಥಳೀಯ ಸಂಸ್ಥೆಯಿಂದ ಬೀದಿ ನಾಯಿಗಳನ್ನು ಸ್ಥಳಾಂತರಿಸಲು ಸಹಕರಿಸಲು ಹಾಗು ಅವುಗಳ ಪ್ರವೇಶ ನಿರ್ಭಂದಿಸುವದನ್ನು ಮೇಲ್ವಿಚಾರಣೆ ಮಾಡಲು ತಮ್ಮ ಸಂಸ್ಥೆ ವತಿಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡುವುದು. ಮಾನ್ಯ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ತಮ್ಮ ಸಂಸ್ಥೆಯ ವ್ಯಾಪ್ತಿಯಲ್ಲಿ ಪುನ: ನಾಯಿಗಳು ವಾಸ ಮಾಡಲು ಅವಕಾಶ ಕೊಟ್ಟಲ್ಲಿ ಅವನ್ನು ಸ್ಥಳಾಂತರಿಸುವ ವೆಚ್ಚವನ್ನು ತಮ್ಮ ಸಂಸ್ಥೆಯಿಂದ ವಸೂಲಿ ಮಾಡಲಾಗುವುದು. ಸರ್ವೋಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿದ್ದಲ್ಲಿ ನ್ಯಾಯಾಲಯದ ಆದೇಶದಂತೆ ಕಾನೂನು ಕ್ರಮ ವಹಿಸಲಾಗುವುದು ಎಂದು ಮುಳಗುಂದ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಕೌಂಟಿಂಗ್ ತರಬೇತಿಗೆ ಅರ್ಜಿ ಆಹ್ವಾನ

**ಹಾವೇರಿ:** ದೇವಗಿರಿ ಬ್ಯಾಂಕ್ ಆಫ್ ಬರೋಡಾ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ ವಿಬ್‌ಸೆಟಿಯಲ್ಲಿ ಡಿಸೆಂಬರ್ 4 ರಿಂದ ಜನವರಿ 10 ರವರೆಗೆ 38 ದಿನಗಳ ಉಚಿತ ಕಂಪ್ಯೂಟರ್ ಅಕೌಂಟಿಂಗ್ ತರಬೇತಿ ಆಯೋಜಿಸಲಾಗಿದೆ.

ಜಿಲ್ಲೆಯ 19 ರಿಂದ 50 ವರ್ಷದೊಳಗಿನ ಗ್ರಾಮೀಣ ಭಾಗದ ಅಭ್ಯರ್ಥಿಗಳು ರೇಷನ್ ಕಾರ್ಡ್ ಹೊಂದಿದವರಿಗೆ ಮಾತ್ರ ತರಬೇತಿಗೆ ಅವಕಾಶವಿದೆ ಎಂದು ಸಂಸ್ಥೆಯ ನಿರ್ದೇಶಕರು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮೊ. 8660219375 ಸಂಪರ್ಕಿಸಲು ಕೋರಲಾಗಿದೆ.

## ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

**ಗದಗ** : 2025-26 ನೇ ಸಾಲಿನಲ್ಲಿ ಪಿಯುಸಿ ಹೊರತುಪಡಿಸಿ ಉಳಿದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ -1 ರ ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ ಮೆಟ್ರಿಕ್ ನಂತರ ವಿದ್ಯಾರ್ಥಿ ವೇತನ, ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿವೇತನ ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಮತ್ತು ಶುಲ್ಕ ಮರುಪಾವತಿ ಕಾರ್ಯಕ್ರಮಗಳ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ನವೆಂಬರ್ 25 ರವರೆಗೆ ವಿಸ್ತರಿಸಲಾಗಿದೆ.

## ತೋಟಗಾರಿಕಾ ವಲಯದ ಸಮಸ್ಯೆಗಳ ಬಗ್ಗೆ ಕೆಪಿಎ ಚರ್ಚೆ

# ಪ್ಲಾಂಟೇಶನ್ ನಿರ್ದೇಶನಾಲಯ ಸ್ಥಾಪಿಸಿ




**ಚಿಕ್ಕಮಗಳೂರು:** ಪ್ಲಾಂಟೇಷನ್ ವಲಯ ಪುನಶ್ಚೇತನಗೊಳಿಸಲು ನೀತಿ ಸಮನ್ವಯ ಮತ್ತು ಸಮಯೋಚಿತ ಬೆಂಬಲಕ್ಕಾಗಿ ಮಿಸಲಾದ ಪ್ಲಾಂಟೇಶನ್ ನಿರ್ದೇಶನಾಲಯ ಸ್ಥಾಪಿಸಬೇಕೆಂದು ಕೆಪಿಎ ಅಧ್ಯಕ್ಷ ಎ.ಅರವಿಂದರಾವ್ ಆಗ್ರಹಿಸಿದರು.

ಕರ್ನಾಟಕ ಪ್ಲಾಂಟರ್ಸ್ ಅಸೋಸಿಯೇಷನ್ ತೋಟಗಾರಿಕಾ ವಲಯದ ಸಮಸ್ಯೆಗಳು ಕುರಿತಂತೆ ನಗರದ ದಿ ಸೆರಾಯ್ ಹೋಟೇಲ್ ಸಭಾಂಗಣದಲ್ಲಿ ಇಂದು ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಅಭಿಪ್ರಾಯ ಹಂಚಿಕೊಂಡರು.

ಹವಾಮಾನದಲ್ಲಿ ವೈಪರಿತ್ಯ, ಕಾರ್ಮಿಕರ ಕೊರತೆ, ಮಾನವ-ಪ್ರಾಣಿ ಸಂಘರ್ಷ, ಬ್ರ್ಯಾಂಡಿಂಗ್‌ನಲ್ಲಿ ತೊಡಕು, ಮಾರುಕಟ್ಟೆ ಅಸ್ಥಿರತೆ, ನಿಯಂತ್ರಿತ ಹೊರೆಗಳನ್ನು ನಿಭಾಯಿಸಲು ವಿಶೇಷ ಪರಿಣಿತಿಯನ್ನು ಒದಗಿಸುವಂತೆ ಪ್ಲಾಂಟೇಷನ್ ನಿರ್ದೇಶನಾಲಯ ಕಾರ್ಯನಿರ್ವಹಿಸಬೇಕೆಂದವರು ಆಗ್ರಹಿಸಿದರು. ಕೇರಳ ಮಾದರಿಯ ಪ್ಲಾಂಟೇಶನ್ ಡೈರಕ್ಟರಿ ಅಗತ್ಯವೆಂದು ಪ್ರತಿಪಾದಿಸಿದರು.

ಕಾಫಿ, ಟೀ, ಏಲಕ್ಕಿ, ಮೆಣಸು, ರಬ್ಬರ್ ಮತ್ತಿತರರ ತೋಟಗಾರಿಕಾ ವಲಯದ ವಿವಿಧ ಬೆಳೆಗಳಲ್ಲಿ ತೊಡಗಿರುವ ವೈಯಕ್ತಿಕ ತೋಟಗಾರರು, ಸಂಸ್ಥೆಗಳು, ಕಂಪನಿಗಳನ್ನು ಒಳಗೊಂಡ ಸಂಸ್ಥೆ ಕರ್ನಾಟಕ ಪ್ಲಾಂಟರ್ಸ್ ಅಸೋಸಿಯೇಷನ್ 1958ರಲ್ಲಿ ಸ್ಥಾಪನೆಗೊಂಡಿದೆ. ಚಿಕ್ಕಮಗಳೂರು, ಕೊಡಗು, ಹಾಸನ, ಚಾಮರಾಜನಗರ, ದಕ್ಷಿಣಕನ್ನಡ ಮತ್ತು ಮೈಸೂರು ಸೇರಿದಂತೆ ಪ್ರಮುಖ ತೋಟಗಾರಿಕಾ ಜಿಲ್ಲೆಗಳಲ್ಲಿ ಸದಸ್ಯರನ್ನು ಹೊಂದಿದೆ. ತೋಟಗಾರಿಕೆ-ಕೈಗಾರಿಕೆಯನ್ನು ಸಬಲೀಕರಣಗೊಳಿಸುವ ಉದ್ದೇಶ ಹೊಂದಿದೆ ಎಂದರು.

ಉದ್ಯಮವನ್ನು ಜಾಗತಿಕವಾಗಿ ಸ್ಪರ್ಧಾತ್ಮಕಗೊಳಿಸುವುದು, ತೋಟದಾದ್ಯಂತ ಜೈವಿಕ ವೈವಿಧ್ಯತೆ ಮತ್ತು ಪರಿಸರ ಸಂರಕ್ಷಣೆ ಉತ್ತೇಜಿಸುವುದು, ತೋಟಗಾರಿಕೆ ಸಮಸ್ಯೆ ನಿವಾರಿಸಲು ಸರ್ಕಾರಿ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸುವ ಹಿನ್ನಲೆ ಹೊಂದಿರುವ ಕೆಪಿಎ ತೋಟಗಾರರು ಮತ್ತು ಕಾರ್ಮಿಕರ ಹಿತಾಸಕ್ತಿ ರಕ್ಷಿಸಲು ಬದ್ಧತೆ ಹೊಂದಲಾಗಿದೆ ಎಂದರು.

ಉದ್ಯಮದ ಬೆಳವಣಿಗೆಗೆ ಅನುಕೂಲಕರವಾದ ಪರಿಸರ ನಿರ್ಮಾಣ, ಸರ್ಕಾರಿ ನೀತಿಗಳು ಹಾಗೂ ಶಾಸಕಾಂಗ ಕ್ರಮಗಳ ಮೇಲೆ ಕೆಪಿಎ ಸಕ್ರಿಯವಾದ ಪ್ರಭಾವ ಬೀರುತ್ತಿದೆ. ತೋಟದ ಕಾರ್ಮಿಕರಿಗಾಗಿ ವೇತನ ಮತ್ತು ಕೆಲಸದ ಪರಿಸ್ಥಿತಿಗಳ ಕುರಿತು ಕಾರ್ಮಿಕ ಸಂಘಗಳೊಂದಿಗೆ ಅಗತ್ಯ ಮಾತುಕತೆಗಳನ್ನು ನಡೆಸುತ್ತದೆ. ಸ್ಥಿರತೆಯನ್ನು ಉತ್ತೇಜಿಸುತ್ತದೆ. ಸದಸ್ಯರ ತಿಳುವಳಿಕೆಯುಳ್ಳ ನಿರ್ಧಾರಗಳನ್ನು ಕೈಗೊಳ್ಳಲು ಸಹಾಯ ಮಾಡಲು ಪ್ರಮುಖ ಅಂಕಿ ಅಂಶಗಳನ್ನು ನೀಡುವುದರ ಜೊತೆಗೆ ಉತ್ತಮ ಅಭ್ಯಾಸಗಳನ್ನು ಸಂಗ್ರಹಿಸಿ ಪ್ರಸಾರ ಮಾಡುತ್ತಿದೆ ಎಂದು ಅರವಿಂದರಾವ್ ವಿವರಿಸಿದರು.

ಉತ್ಪಾದಕತೆ ಮತ್ತು ಸುಸ್ಥಿರತೆಯನ್ನು ಹೆಚ್ಚಿಸಲು ಆಧುನಿಕ ಮತ್ತು ವೈಜ್ಞಾನಿಕ ಕೃಷಿ ವಿಧಾನಗಳನ್ನು ಅಳವಡಿಸಿಕೊಳ್ಳುವತ್ತ ಗಮನಹರಿಸುವ ತರಬೇತಿ ಕಾರ್ಯಕ್ರಮಗಳನ್ನು ಉತ್ತೇಜಿಸಲಾಗುತ್ತಿದೆ. ಕೆಪಿಎ ಸಚಿವಾಲಯ ಮತ್ತು ಆಡಳಿತ ಕಛೇರಿಯು ಚಿಕ್ಕಮಗಳೂರಿನಲ್ಲಿ ನೆಲೆಗೊಂಡಿದೆ ಎಂದರು.

ರಾಜ್ಯದ ತೋಟಗಾರಿಕಾ ಉದ್ಯಮದ ಮೇಲೆ ಹವಾಮಾನದ ಬದಲಾವಣೆಯು ಗಣನೀಯ ಮತ್ತು ಗಂಭೀರ ಪರಿಣಾಮ ಬೀರಿದೆ. ಅನಿರೀಕ್ಷಿತ ಮಳೆಯೊಂದಿಗೆ ಜಾಗತಿಕ ತಾಪಮಾನ ಏರಿಕೆಯು ಸಂಕಷ್ಟಕ್ಕೀಡು ಮಾಡಿದೆ. ತೀವ್ರ ಬರ, ಭೂಕುಸಿತ ಮತ್ತು ಮಣ್ಣಿನ ಸವೆತ ಕಾಣುತ್ತಿದ್ದೇವೆ. ಇವೆಲ್ಲ ಮಣ್ಣು ಮತ್ತು ಸಸ್ಯಗಳ ಆರೋಗ್ಯ ಕುಂದಿಸುತ್ತಾ ಬೆಳೆಗಳಿಗೆ ಹಾನಿ ಮಾಡುತ್ತಿದೆ. ಸಸ್ಯಗಳ ಬದುಕುಳಿಯುವಿಕೆಗೆ ಧಕ್ಕೆ ತರುತ್ತಿದ್ದು, ಬೆಳೆ ಇಳುವರಿ ಕುಂದಿಸಿರುವುದು ಸುಸ್ಥಿರತೆಗೆ ಬೆದರಿಕೆಯಾಗಿದೆ ಎಂದರು.

ನುರಿತ ಕಾರ್ಮಿಕರ ಕೊರತೆ ನಿರಂತರವಾಗಿ ಹೆಚ್ಚುತ್ತಿದ್ದು,

ಕಾರ್ಮಿಕರು ಕೃಷಿಯೇತರ ವಲಯಗಳಿಗೆ ವಲಸೆ ಹೋಗುತ್ತಿರುವುದು ಕಾಣುತ್ತಿದ್ದೇವೆ. ತೋಟಗಾರಿಕೆ ನಿರ್ದಿಷ್ಟ ಕಾರ್ಯಾಚರಣೆಗಳಿಗೆ ಅಗತ್ಯ ತರಬೇತಿಗೆ ಒತ್ತು ನೀಡಬೇಕಾಗಿದೆ. ಕಾರ್ಮಿಕರ ಅವಲಂಬನೆ ಮತ್ತು ವೆಚ್ಚಗಳನ್ನು ತಗ್ಗಿಸಲು ಯಾಂತ್ರಿಕರಣಕ್ಕಾಗಿ ಉಪಕರಣಗಳನ್ನು ಅಭಿವೃದ್ಧಿಪಡಿಸಲು ಆಕ್ರಮಣಕಾರಿ ಸಂಶೋಧನೆ ಮತ್ತು ಬೆಂಬಲದೊಂದಿಗೆ ಮಾನವ ಶಕ್ತಿಗೆ ತರಬೇತಿ ನೀಡುವುದರ ಜೊತೆಗೆ ಸಂಬಂಧಪಟ್ಟ ಯಂತ್ರೋಪಕರಣಗಳಿಗೆ ಸರ್ಕಾರ ಅಧಿಕ ಸಹಾಯಧನ ನೀಡಿ ಬೆಂಬಲಿಸಬೇಕೆಂದು ಕೆಪಿಎ ಆಗ್ರಹಿಸಿದೆ.

ತೋಟಗಳಲ್ಲಿ ಮೂಲಭೂತ ಸುಧಾರಣೆ ಸಂಬಂಧಿಸಿದ ಹೂಡಿಕೆಗಳಿಗೆ ತೆರಿಗೆ ವಿನಾಯ್ತಿ, ಪ್ರಧಾನಮಂತ್ರಿ ಫಸಲ್ ಭೀಮಾಯೋಜನೆ ಅಡಿಯಲ್ಲಿ ಕಾಫಿ ಮತ್ತು ಟೀಯನ್ನು ತರಲು ಹವಾಮಾನ ಆಧರಿತ ಬೆಳೆ ವಿಮಾಯೋಜನೆ ಒದಗಿಸಬೇಕು. ಸಿಐಬಿಐಎಲ್‌ನಿಂದ ಕೃಷಿ ಸ್ವರೂಪದ ತೋಟಗಾರಿಕೆಯನ್ನು ಹೊರಗಿಡಬೇಕು. ಭಾರತೀಯ ಕಾಫಿ ಮತ್ತು ಟೀ ಬ್ರ್ಯಾಂಡ್‌ಗಳನ್ನು ಉತ್ತೇಜಿಸಬೇಕು. ಉದ್ಯಮದಲ್ಲಿ ನಾವಿನ್ಯತೆ ಪ್ರೋತ್ಸಾಹಿಸಲು ಸಂಶೋಧನಾ ಸಂಸ್ಥೆಗಳು ಮತ್ತು ವಿಶ್ವ ವಿದ್ಯಾನಿಲಯಗಳೊಂದಿಗೆ ಸಹಕರಿಸಬೇಕೆಂದು ಅವರು ಆಗ್ರಹಿಸಿದರು.

ಪ್ಲಾಂಟೇಶನ್ ಜಿಲ್ಲೆಗಳಲ್ಲಿ ಸಾಗಾಣೆ ಮತ್ತು ಪ್ರಯಾಣಕ್ಕೆ ರಸ್ತೆಗಳ ದುರಸ್ತಿ ಮತ್ತು ನಿರ್ವಹಣೆ ಮಾಡಬೇಕು,

ಬಿಳಿಕಾಂಡಕೊರಕ, ರೋಗನಿರೋಧಕ ತಳಿಗಳ ಮೇಲೆ ಗಮನಕೇಂದ್ರೀಕರಿಸಿ ಹೆಚ್ಚು ಇಳುವರಿ ನೀಡುವ ರೋಗ ಮತ್ತು ಬರನಿರೋಧಕ ಕಾಫಿ ತಳಿಗಳ ಅಭಿವೃದ್ಧಿಪಡಿಸಬೇಕೆಂದು ಆಗ್ರಹಿಸಿದ ಅರವಿಂದರಾವ್,

ಪ್ರಾಣಿ ಮತ್ತು ಮಾನವ ಸಂಘರ್ಷ ತಪ್ಪಿಸಲು ರಾಜ್ಯಸರ್ಕಾರ ವಿಶೇಷ ಗಮನಹರಿಸಬೇಕು. ಕಾಫಿ ಸಂಸ್ಕರಣಾ ಸಂದರ್ಭದಲ್ಲಿ ನಿರಂತರ ವಿದ್ಯುತ್ ಪೂರೈಕೆ, ನೀರು ಸಂಗ್ರಹಣಾ ಟ್ಯಾಂಕ್‌ಗಳ ನಿರ್ಮಾಣಕ್ಕೆ ನೆರವು ನೀಡಬೇಕೆಂದವರು ಆಗ್ರಹಿಸಿದರು.

ಕೆಪಿಎ ಸಹಕಾರ್ಯದರ್ಶಿ ಭವೀಶ್‌ನಾಚಪ್ಪ, ಉಪಾಧ್ಯಕ್ಷ ಸಲ್ಮಾನ್‌ಬಷೀರ್, ಉಪಾಸಿ ಅಧ್ಯಕ್ಷ ಅಜಯ್‌ತಿಪ್ಪಯ್ಯ, ಕಾರ್ಯದರ್ಶಿ ಆರ್.ಸಂಜಿತ್, ಕಾಫಿ ಸಮಿತಿ ಅಧ್ಯಕ್ಷ ಸಹದೇವಬಾಲಕೃಷ್ಣ ವೇದಿಕೆಯಲ್ಲಿದ್ದು ತೋಟಗಾರಿಕಾ ಬೆಳೆಗಳ ಸಮಸ್ಯೆ ಚರ್ಚಿಸಿದರು.

# 14 ಕೋಟಿರೂ ವೆಚ್ಚದಲ್ಲಿ ಸಖರಾಯಪಟ್ಟಣ ಹೋಬಳಿ ರಸ್ತೆಗಳ ಅಭಿವೃದ್ಧಿ



**ಚಿಕ್ಕಮಗಳೂರು:** ಸಮ ಸಮಾಜ ನಿರ್ಮಾಣದ ಕನಸು ಕಂಡು ಶ್ರಮಿಸಲು ಹೋರಾಟ ಮಾಡಿದ ವ್ಹನೀಂ್ರ್ ಆಶ್ಂ್ದ್ಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಚುನಾವಣಾ ಪೂರ್ವದಲ್ಲಿ ಘೋಷಿಸಿದ್ದ ಐದುಗ್ಯಾರಂಟಿ ಯೋಜನೆಗಳ ಅನುಷ್ಠಾನದಜೊತೆಗೆಅಭಿವೃದ್ಧಿಗೂ ಹಣ ಮಂಜೂರು ಮಾಡಿದ್ದಾರೆಎಂದು ಶಾಸಕ ಹೆಚ್.ಡಿ. ತಮ್ಮಯ್ಯ ತಿಳಿಸಿದರು.

ಅವ್ರ್ಇಂದ್ಕ್ಷೇತ್ರ್ದ್ ಹುಲಿಕೆರೆಯಿಂದಕರಡಿಗವಿ ಮಠ ಹಾಗೂ ಸ್ವಾಮಿಕಟ್ಟೆಯಿಂದ ಮಲ್ಲಿಗೆನಹಳ್ಳಿ, ಜೋಡಿಲಿಂಗದಹಳ್ಳಿ ಸಂಪರ್ಕ ಕಲಿಸುವ ರಸ್ತೆ ಸೇರಿದಂತೆ ಸುಮಾರು 14.03 ಕೋಟಿರೂ ವೆಚ್ಚದಲ್ಲಿ ವಿವಿಧ ರಸ್ತೆಗಳ ಅಭಿವೃದ್ಧಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ಬಿಎಸ್‌ರಸ್ತೆಯಿಂದಜೆಎಸ್‌ರಸ್ತೆಗೆ ಸೇರುವ 4 ಕಿ.ಮೀ ರಸ್ತೆಗೆ 1.50 ಕೋಟಿರೂ., ನಾಗೇನಹಳ್ಳಿ ಮಾರ್ಗವಾಗಿ ಸಾಗುವ 5 ಕಿ.ಮೀ ಜಿಲ್ಲಾ ಮುಖ್ಯರಸ್ತೆಗೆ 2.03 ಕೋಟಿರೂ., ಹುಲಿಕೆರೆಗ್ರಾಮದಿಂದಕರಡಿಗವಿ ಮಠಕ್ಕೆ ಹೋಗುವ 2 ಕಿ.ಮೀ ರಸ್ತೆಗೆ 1.50 ಕೋಟಿರೂ., ಎಸ್‌ಜಿರಸ್ತೆಯಿಂದರಾಜ್ಯ ಹೆದ್ದಾರಿ ಮುಖ್ಯರಸ್ತೆಗೆ 5 ಕೋಟಿರೂ. ವೆಚ್ಚದಲ್ಲಿ ಹಾಗೂ ಧರ್ಮಾಪುರದಿಂದ ಬಳ್ಳೆಕೆರೆವರೆಗೆ 4 ಕೋಟಿರೂ ವೆಚ್ಚದಲ್ಲಿ 3 ಕಿ.ಮೀ ರಸ್ತೆಅಭಿವೃದ್ಧಿಪಡಿಸಲಾಗುತ್ತಿದೆ 'ಎಂದರು.

ಒಟ್ಟಾರೆಕ್ಷೇತ್ರದ ರಸ್ತೆಗಳ ಡಾಂಬರೀಕರಣಕ್ಕೆ ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ ಲೋಕೋಪಯೋಗಿ ಇಲಾಖೆಗೆ 20 ಕೋಟಿರೂಅನುದಾನ ಮಂಜೂರಾಗಿದ್ದು, ಇದೂರವೆಗೆ ಮಳೆಗಾಲ ಇದ್ದ ಪರಿಣಾಮ ಈ ಸಂಬಂಧ ಈಗ ಗುದ್ದಲಿ ಪೂಜೆ ನೆರವೇರಿಸುತ್ತಿದ್ದೇವೆಂದು ಹೇಳಿದರು.

ರೈತರಿಗೆಚುನಾವಣಾ ಪೂರ್ವದಲ್ಲಿ ನೀಡಿದ್ದ ಭರವಸೆಯಂತೆಕೆರೆತುಂಬಿಸುವ ಯೋಜನೆ ಪ್ರಗತಿಯಲ್ಲಿದ್ದು, ಎತ್ತಿನಹೊಳೆ ನೀರಾವರಿಯೋಜನೆ ಮೂಲಕ ಬೆಳವಾಡಿ ಕೆರೆ, ಮಾಚೇನಹಳ್ಳಿ, ದೇವನೂರುಕೆರೆತುಂಬಿ ಹರಿಯುತ್ತಿದೆಎಂದು ಹರ್ಷ ವ್ಯಕ್ತಪಡಿಸಿದರು.


ಮೂರನೇ ಹಂತದ ಭದ್ರಾಉಪಕಣಿವೆಯೋಜನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಶೀಘ್ರದಲ್ಲೇ ಶಂಕುಸ್ಥಾಪನೆ ನೆರವೇರಿಸಿ ಶಾಶ್ವತಕುಡಿಯುವ ನೀರಿನಯೋಜನೆಗೆ ಚಾಲನೆ ನೀಡಲಿದ್ದಾರೆಂದು ಹೇಳಿದರು.

ಇಂದು ನ.18 ನಗರದಲ್ಲಿ ಸುಮಾರು 20 ಕೋಟಿರೂ ವೆಚ್ಚದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ನಿರ್ಮಾಣಕಾಮಗಾರಿಗೆಜಿಲ್ಲಾಉಸ್ತುವಾರಿ ಸಚಿವಕೆ.ಜೆಜಾರ್ಜ್ ಹಾಗೂ ಸಾರಿಗೆ ಸಚಿವರಾಮಲಿಂಗಾರೆಡ್ಡಿ ಶಂಕುಸ್ಥಾಪನೆ ನೆರವೇರಿಸಲಿದ್ದು, ಜನೋಪಯೋಗಿ ಕಾರ್ಯಗಳಿಗೆ ರಾಜ್ಯಸರ್ಕಾರ ಮುಂದಾಗಿದೆಎಂದು ತಿಳಿಸಿದರು.

ಸಖರಾಯಪಟ್ಟಣ ಬ್ಲಾಕ್‌ಕಾಂಗ್ರೆಸ್‌ಅಧ್ಯಕ್ಷ ಮಹಡಿಮನೆ ಸತೀಶ್ ಮಾತನಾಡಿ, ಕ್ಷೇತ್ರದ ಪ್ರತಿಗ್ರಾ.ಪಂ ವ್ಯಾಪ್ತಿಯಲ್ಲಿ ಹಲವಾರುಜನಪರ ಯೋಜನೆಗಳನ್ನು ಅಭಿವೃದ್ಧಿಪಡಿಸುವ ಮೂಲಕ ಶಾಸಕ ಹೆಚ್.ಡಿ. ತಮ್ಮಯ್ಯನವರುಜನರ ವಿಶ್ವಾಸ ಗಳಿಸಿದ್ದಾರೆಂದು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಎಪಿಎಂಸಿ ಮಾಜಿ ಸದಸ್ಯ ಲೋಕೇಶ್, ಹುಲಿಕೆರೆಗ್ರಾ.ಪಂ ಸದಸ್ಯ ದಿನೇಶ್, ನಿವೃತ್ತ ಶಿಕ್ಷಕ ಲಕ್ಷ್ಮಪ್ಪ, ಚೆಲುವಪ್ಪ, ಗ್ರಾಮಸ್ಥರಾದಆನಂದ, ದಿನೇಶ್ ಮತ್ತಿತರರು ಉಪಸ್ಥಿತರಿದ್ದರು.

## ರಾಷ್ಟ್ರೀಯ ಸ್ಕೇಟಿಂಗ್‌ನಲ್ಲಿ ನಮ್ಮ ಶಿವಮೊಗ್ಗ ಸ್ಕೇಟಿಂಗ್ ತಂಡದ ಇಬ್ಬರಿಗೆ ಪ್ರಶಸ್ತಿ




**ಶಿವಮೊಗ್ಗ:** ನವದೆಹಲಿಯಲ್ಲಿ ನಡೆಯುತ್ತಿರುವ ಸಿಬಿಎಸ್‌ಸಿ ಸ್ಕೇಟಿಂಗ್ ರಾಷ್ಟ್ರೀಯ ಪಂದ್ಯಾವಳಿಯಲ್ಲಿ ನಮ್ಮ ಶಿವಮೊಗ್ಗ ಸ್ಕೇಟಿಂಗ್ ಅಸೋಸಿಯೇಷನ್‌ನ ಇಬ್ಬರು ಕ್ರೀಡಾಪಟುಗಳು ಬೆಳ್ಳಿ ಹಾಗೂ ಕಂಚಿನ ಪದಕ ಪಡೆಯುವಲ್ಲಿ ಯಶಸ್ವಿಯಾಗಿ, ಸಂಸ್ಥೆಗೆ ಹಾಗೂ ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ನಮ್ಮ ಶಿವಮೊಗ್ಗ ಸ್ಕೇಟಿಂಗ್ ಸಂಸ್ಥೆಯ ಅದ್ವಿಕಾ ನಾಯರ್ ಅವರು 1000 ಮೀಟರ್_ಸ್ಕೇಟಿಂಗ್ ಸ್ಪರ್ಧೆಯಲ್ಲಿ ಬೆಳ್ಳಿ ಪಡೆದಿದ್ದಾರೆ. ಅದ್ವಿಕಾ ಅವರು ಆರ್ ಎಲ್ ರಂಜಿತ್ ಹಾಗೂ ಗಾಯತ್ರಿ ಅವರ ಪುತ್ರಿ.

ಅಂತೆಯೇ ವೇದಾಂಶ್ ಗಣೇಂದ್ರ ಪರಡಿ ಅವರು ಒನ್ ಲ್ಯಾಪ್ ರೋಡ್ ರೇಸ್ ನಲ್ಲಿ ಕಂಚಿನ ಪದಕ ಪಡೆದಿದ್ದಾರೆ. ವೇಧಾಂಶವು ಅವರು ಗಣೇಂದ್ರ ಪರಡಿ ಹಾಗೂ ಶಾಲಿನಿ ಪರಡಿ ಅವರ ಪುತ್ರ.

ಇಬ್ಬರೂ ಕ್ರೀಡಾಪಟುಗಳು ತರಬೇತುದಾರರಾದ ವಿಶ್ವಾಸ್ ಹಾಗೂ ಆತೀಶ್ ಗರಡಿಯಲ್ಲಿ ಕಲಿಯುತ್ತಿದ್ದಾರೆ.

ಈ ಕ್ರೀಡಾಪಟುಗಳು ಶಿವಮೊಗ್ಗದ ಪೋದಾರ ವಿದ್ಯಾ ಸಂಸ್ಥೆಯಲ್ಲಿ ವ್ಯಾಸಂಗ ಮಾಡುತ್ತಿದ್ದು, ನಮ್ಮ ಸಂಸ್ಥೆಯಲ್ಲಿ ಕಲಿಯುತ್ತಿದ್ದಾರೆ.

ಜಿಲ್ಲೆಗೆ ಕೀರ್ತಿ ತಂದುಕೊಟ್ಟ ಕ್ರೀಡಾಪಟುಗಳನ್ನು ಸಂಸ್ಥೆಯ ಅಧ್ಯಕ್ಷ ಮೋಹನ್ ಕುಮಾರ್, ಪದಾಧಿಕಾರಿಗಳಾದ ಎಂ ರವಿ, ಗಜೇಂದ್ರ ಸ್ವಾಮಿ, ಕೆ. ನಾಗರಾಜ ನಾಯ್ಡು ಹಾಗೂ ಇತರರು ಅಭಿನಂದಿಸಿದ್ದಾರೆ.

## ದ ಲೈಫ್ ಸೈನ್ಸ್ ಪರ್ಸ್ ಪೆಕ್ಟೀವ್ ಹೆಸರಿನ ಒಂದು ದಿನದ ಕಾರ್ಯಗಾರ



**ದಾವಣಗೆರೆ** : ದಿನಾಂಕ 18:11: 2025 ರಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ದಾವಣಗೆರೆ ಇಲ್ಲಿ ಪರಿಸರ ವಿಜ್ಞಾನ, ಸಸ್ಯಶಾಸ್ತ್ರ ಹಾಗೂ ಪ್ರಾಣಿಶಾಸ್ತ್ರ ವಿಭಾಗಗಳು ಹಾಗೂ ಕಾಲೇಜಿನ ಐ.ಕ್ಯೂ. ಎ. ಸಿ. ವತಿಯಿಂದ ಕ್ಲೈಮೇಟ್ ಚೇಂಜ್ ಅಂಡ್ ಬಯೋ ಡೈವರ್ಸಿಟಿ: ದ ಲೈಫ್ ಸೈನ್ಸ್ ಪರ್ಸ್ ಪೆಕ್ಟೀವ್ ಹೆಸರಿನ ಒಂದು ದಿನದ ಕಾರ್ಯಗಾರವನ್ನು ಹಮ್ಮಿಕೊಳ್ಳಲಾಯಿತು.

ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಬಸವರಾಜ ಸಿ. ತಹಸಿಲ್ದಾರ್ ಅಧ್ಯಕ್ಷತೆ ವಹಿಸಿದ್ದರು. ದಾವಣಗೆರೆ ವಿಶ್ವವಿದ್ಯಾನಿಲಯದ ಸಸ್ಯಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಪ್ರೊ. ಎಂ. ಗೋವಿಂದಪ್ಪ ರವರು ಕಾರ್ಯಕ್ರಮವನ್ನು ಉದ್ಘಾಟಿಸಿ ಪ್ರತಿಯೊಬ್ಬ ವಿದ್ಯಾರ್ಥಿಗಳು ಗಿಡಮರಗಳನ್ನು ನೆಡುವುದರ ಮೂಲಕ ಪರಿಸರದ ಸಮತೋಲನವನ್ನು ಕಾಪಾಡಲು ಪ್ರಮುಖ ಪಾತ್ರವನ್ನು ವಹಿಸಬೇಕೆಂದು ಕರೆ ನೀಡಿದರು. ವಿಶೇಷ ಆಹ್ವಾನಿತರಾಗಿ ದಾವಣಗೆರೆ ವಿಶ್ವವಿದ್ಯಾಲಯದ ಪ್ರಾಧ್ಯಾಪಕರು ಹಾಗೂ ಪರಿಸರ ವಿಜ್ಞಾನ ವಿಭಾಗದ ಸಂಯೋಜಕರಾದ ಡಾ. ಪ್ರಮೋದ್ ಎಸ್. ಎನ್. ರವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಡಾ. ಗಿರೀಶ್ ಕೆ.ಜಿ. ನಿರ್ದೇಶಕರು ಪ್ರಾಣ ಸಂಸ್ಥೆ ಸಾಗರ ಹಾಗೂ ಡಾ. ನಿಂಗರಾಜ್ ಮಾಕನೂರು ಸಸ್ಯಶಾಸ್ತ್ರ ಸಹಾಯಕ ಪ್ರಾಧ್ಯಾಪಕರು ಆರ್. ಟಿ. ಇ. ಎಸ್. ಕಲಾ ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು ರಾಣೆಬೆನ್ನೂರು ಇವರು ಸಂಪನ್ಮೂಲ ವ್ಯಕ್ತಿಗಳಾಗಿ ವಿಶೇಷ ಉಪನ್ಯಾಸಗಳನ್ನು ನೀಡಿದರು.ಪರಿಸರ ವಿಜ್ಞಾನ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ. ನಾಗೇಂದ್ರ ನಾಯ್ಕ್ ಕೆ., ಪ್ರಾಣಿ ಶಾಸ್ತ್ರ ವಿಭಾಗದ ಸಹ ಪಾಧ್ಯಾಪಕರಾದ ಡಾ. ಉಮಾದೇವಿ ಸಿ.ಜೆ. ಹಾಗೂ ಸಸ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಪ್ರೊ. ತೇಜಸ್ವಿನಿ ರಂಗಪ್ಪ ರೆಡ್ಡಿ ಕಾರ್ಯಗಾರದಲ್ಲಿ ಹಾಜರಿದ್ದರು.

## ಆಂಧ್ರ ಪ್ರದೇಶದಲ್ಲಿ ಆರು ನಕ್ಸಲರ ಎನ್‌ಕೌಂಟರ್

**ಮಾರೇಡುಮಿಲಿ:** ನೆರೆಯ ಆಂಧ್ರ ಪ್ರದೇಶದಲ್ಲಿ ಆರು ನಕ್ಸಲರನ್ನು ಹತ್ಯೆ ಮಾಡಲಾಗಿದೆ.ಇಲ್ಲಿನ ಅಲ್ಲೂರಿ ಸೀತಾರಾಮರಾಜು ಜಿಲ್ಲೆಯಲ್ಲಿ ಭದ್ರತಾ ಸಿಬ್ಬಂದಿಯೊಂದಿಗೆ ನಡೆದ ಎನ್‌ಕೌಂಟರ್‌ನಲ್ಲಿ ಆರು ಮಾವೋವಾದಿಗಳು ಸಾವನ್ನಪ್ಪಿದ್ದಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಮಾರೇಡುಮಿಲ್ಲಿ ಮಂಡಲದ ಅರಣ್ಯ ಪ್ರದೇಶದಲ್ಲಿ ಬೆಳಿಗ್ಗೆ 6.30 ರಿಂದ ಬೆಳಿಗ್ಗೆ 7 ಗಂಟೆಯ ನಡುವೆ ಎನ್‌ಕೌಂಟರ್ ನಡೆಸಲಾಗಿದೆ ಎಂದು ಅಲ್ಲೂರಿ ಸೀತಾರಾಮರಾಜು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಅಮಿತ್ ಬರ್ದಾರ್ ತಿಳಿಸಿದ್ದಾರೆ.

**ಮಾನ್ಯ ಸಿವಿಲ್ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ. ನ್ಯಾಯಾಲಯ ಜಗಳೂರು**

**ಸಿ.ಆರ್ ಮಿಸ್ ನಂ :945/ 2025**

**ಅರ್ಜಿದಾರರು:** 1). ಅಲ್ಲಾಭಕ್ಷಿ ಬಿನ್ ಹುಸೇನ್ ಸಾಬ್ ವಯಸ್ಸು 70 ವರ್ಷ 2) ಹುಸೇನ್ ಮೀಯಾ ಬಿನ್ ಹುಸೇನ್ ಸಾಬ್ ವಯಸ್ಸು 63 ವರ್ಷ3)ಪಕೀರ್ ಸಾಬ್ ಬಿನ್ ಹುಸೇನ್ ಸಾಬ್ ವಯಸ್ಸು 62 ವರ್ಷ4)ಟೀಪುಸಾಬ್ ಬಿನ್ ಹುಸೇನ್ ಸಾಬ್ ವಯಸ್ಸು 58 ವರ್ಷ5)ಪಕೀರಾ ಬೀ ಬಿನ್ ಹುಸೇನ್ ಸಾಬ್ ವಯಸ್ಸು 59 ವರ್ಷ6) ಅನ್ವರ್ ಸಾಬ್ ಬಿನ್ ಅಲ್ಲಾಭಕ್ಷಿ ವಯಸ್ಸು 40 ವರ್ಷ ಎಲ್ಲರೂ ಜಿರಾಯ್ತಿ ವಾಸ:ಜಗಳೂರು ಟೌನ್ ದಾವಣಗೆರೆ ಜಿಲ್ಲೆ.

**ವಿರುದ್ಧ**

**ಎದುರುದಾರರು:** ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯ್ತಿ ಕಾರ್ಯಾಲಯ ಜಗಳೂರು

**ಸಾರ್ವಜನಿಕ ನೋಟೀಸ್**

ಮೇಲ್ಕಂಡ ಪ್ರಕರಣದಲ್ಲಿನ 1ರಿಂದ 5ನೇ ಅರ್ಜಿದಾರರ ತಾಯಿ ಹಾಗೂ 6ನೇ ಅರ್ಜಿದಾರರ ಅಜ್ಜಿಯವರಾದ ಪಕೀರಾ ಭೀ ಕೋಂ ಹುಸೇನ್ ಸಾಬ್, ಇವರು ದಿನಾಂಕ 25-05-2009 ರಂದು ಜಗಳೂರು ತಾಲ್ಲೂಕು, ಜಗಳೂರು ಟೌನಿನಲ್ಲಿ ಮರಣ ಹೊಂದಿದ್ದು, ಸದರಿ ದಿನಾಂಕವನ್ನು ಎದುರುದಾರರು ಸಂಬಂಧಪಟ್ಟ ದಾಖಲೆಯಲ್ಲಿ ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರ ನೀಡುವಂತೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ಘನ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ 23-12-2025 ರಂದು ಬೆಳಿಗ್ಗೆ 11-00 ಗಂಟೆಗೆ ವಿಚಾರಣೆಗಾಗಿ ನಿಗಧಿಪಡಿಸಿದ್ದು, ಅರ್ಜಿದಾರರ ಅರ್ಜಿಗೆ ಯಾರದಾದರೂ ತಕರಾರು ಇದ್ದಲ್ಲಿ ತಾವಾಗಲೀ, ಅಥವಾ ತಮ್ಮ ಪರ ವಕೀಲರ ಮುಖಾಂತರವಾಗಲೀ, ನಿಗಧಿತ ದಿನಾಂಕದ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ 17-11/ -2025 ರಂದು ನೀಡಲಾಗಿದೆ.

**ನ್ಯಾಯಾಲಯದ ಅಪ್ಪಣೆ ಮೇರೆಗೆ**

ಸಹಿ/-
ಅರ್ಜಿದಾರರ ಪರ ವಕೀಲರು
(ಹೆಚ್.ಪಿ. ಮಲ್ಲಿಕಾರ್ಜುನ)

ಸಹಿ/-
ಶಿರಸ್ತೆದಾರರು
ಸಿವಿಲ್ ಮತ್ತು ಜೆ.ಎಂ .ಎ.ಎಫ್. ಸಿ ನ್ಯಾಯಾಲಯ
ಜಗಳೂರು

# ಶಾಸಕ ಬಸವರಾಜು ಶಿವಗಂಗಾ ಅಧ್ಯಕ್ಷತೆಯಲ್ಲಿ ನಡೆದ ತಾಲೂಕು ಯೋಜನಾ ಸಮಿತಿ ಸಭೆ



**ಚನ್ನಗಿರಿ :** ತಾಲೂಕು ಪಂಚಾಯ್ತಿ ವ್ಯಾಪ್ತಿಯ ಎಲ್ಲಾ ಸರಕಾರಿಗಳು ಇಲಾಖೆ ಮುಂದಿನ ವರ್ಷದ ಅಭಿವೃದ್ಧಿ ಕಾಮಗಾರಿಗಳ ಕರಡು ಯೋಜನೆ ಕ್ರಿಯಾಯೋಜನೆಯನ್ನು ಸಿದ್ದಪಡಿಸಿದ್ದು ಒಟ್ಟು 221.48.37.000 ರೂಗಳ ಕರಡನ್ನು ತಾಲೂಕು ಮಟ್ಟದ ಎಲ್ಲಾ ಇಲಾಖೆಯ ಅಧಿಕಾರಿಗಳು ನೀಡಿದ್ದಾರೆ ಎಂದು ಜಿ.ಪಂ.ಯೋಜನಾಧಿಕಾರಿ ರೇಷ್ಮಾ ಕೌಸರ್ ಹೇಳಿದರು.

ಸೋಮವಾರ ಶಾಸಕ ಬಸವರಾಜು ಶಿವಗಂಗಾ ಅಧ್ಯಕ್ಷತೆಯಲ್ಲಿ ನಡೆದ ತಾಲೂಕು ಯೋಜನಾ ಸಮಿತಿ ಸಭೆಯಲ್ಲಿ ಬಾಗವಹಿಸಿ ಮಾತನಾಡಿ ತಾಲೂಕು ಯೋಜನಾ ಸಮಿತಿಯಲ್ಲಿ ಅಂಗೀಕಾರವಾದ ಕರಡು ಅಭಿವೃದ್ದಿ ಯೋಜನೆ, ಜಿಲ್ಲಾ ಹಂತಕ್ಕೆ ಮತ್ತು ರಾಜ್ಯ ಹಂತಕ್ಕೆ ತೆರಳಿ ರಾಜ್ಯ ಯೋಜನಾ ಸಮಿತಿಯ ಸದಸ್ಯರು ಮಂಜೂರಾತಿ ನೀಡಲಿದ್ದಾರೆ ಎಂದರು.

ಶಾಸಕ ಬಸವರಾಜು ಶಿವಗಂಗಾ ಮಾತನಾಡಿ ಈ ಕ್ರಿಯಾಯೋಜನೆಯನ್ನು ಮತ್ತೊಮ್ಮೆ ಪರಿಶೀಲನೆ ಮಾಡಿ ಕ್ರಮವನ್ನು ಕೈಗೊಳ್ಳುವಂತೆ ಸೂಚನೆ ನೀಡಿದರು. ಇಲಾಖೆಯ ಅಧಿಕಾರಿಗಳು ತಮ್ಮ ಇಲಾಖಾವಾರು ಅಗತ್ಯ ಕಾಮಗಾರಿಗಳ ಕುರಿತು ವಿಷಯಗಳನ್ನು ಮಂಡನೆ ಮಾಡಿದರು. ತಾ.ಪಂ. ಇ.ಓ.ಪ್ರಕಾಶ್, ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಹಾಜರಿದ್ದರು.

ಬಾಕ್ಸ್ ಕಾಲಂ: ಚನ್ನಗಿರಿ ತಾ.ಪಂ.ನಲ್ಲಿ ತಾಲೂಕು ಯೋಜನಾ ಸಮಿತಿ ಸಭೆಯನ್ನು ಮದ್ಯಾಹ್ನ 3 ಗಂಟೆಗೆ ಕರೆಯಲಾಗಿದ್ದು ಮತ್ತೊಂದು ಕಾರ್ಯಕ್ರಮಕ್ಕೆ ತೆರಳಿದ್ದ ಶಾಸಕರುಎರಡು ಗಂಟೆ ತಡವಾಗಿ ಸಭೆಗೆ ಆಗಮಿಸಿ ಸಭೆಯನ್ನು ಪ್ರಾರಂಭಿಸಿದರು.3 ಗಂಟೆಗೆ ಆಗಮಿಸಿದ್ದ ತಾಲೂಕು ಮಟ್ಟದ ಅಧಿಕಾರಿಗಳು ಶಾಸಕರನ್ನು ಕಾಯುತ್ತಿದ್ದ ದೃಷ್ಯ ಕಂಡುಬರುತ್ತಿತ್ತು.

ಸಭೆ ಅರಂಭವಾದ ನಂತರ ಕಳೆದ ಬಾರಿ ಸಭೆಯಲ್ಲಿ ಮಾಹಿತಿ ನೀಡದ ಮಹಿಳಾ ಅಧಿಕಾರಿಗೆ ರಜೆ ಹಾಕಿ ಹೋಗಿ ಎಂದಿದ್ದಕ್ಕೆ ಮಾಧ್ಯಮಗಳು ಸಾಕಷ್ಟು ಬಿಂಬಿಸಿದ್ದು ಅಧಿಕಾರಿಗಳಿಗೆ ಏನೂ ಹೇಳಬಾರದೇ ಎಂದು ಬೇಸರ ವ್ಯಕ್ತಪಡಿಸಿ ಮೊದಲ ಹಂತದ ಸಭೆಯಲ್ಲಿ ಮಾಧ್ಯಮದವರು ಮಾಹಿತಿ ಪಡೆದ ನಂತರ ಮತ್ತೇನಾದರೂ ವಿಷಯವಿದ್ದರೆ ಕೇಳಿ ಎಂದು ತಿಳಿಸಿ ಮಾಧ್ಯಮದವರು ಸಭೆಯಿಂದ ನಿರ್ಗಮಿಸಿದರೆ ಮುಂದಿನ ಸಭೆ ಮುಂದುವರೆಸುತ್ತವೆ ಎಂದು ತಿಳಿಸಿದ್ದರಿಂದ ಎಲ್ಲಾ ಮಾಧ್ಯಮದವರು ಸಭೆಯಿಂದ ಹೊರನಡೆದರು. ಮತ್ತೆ ಅಭಿವೃದ್ಧಿಯ ಯೋಜನಾ ಸಮಿತಿ ಸಭೆ ಅರಂಭವಾಯಿತು.

# ಪಂಚ ಗ್ಯಾರಂಟಿ ಯೋಜನೆಗಳ ಜಾಗೃತಿಯ ಸಂಚಾರಿ ವಾಹನಕ್ಕೆ ಸಚಿವರಿಂದ ಚಾಲನೆ




**ಗದಗ :** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳ ಕುರಿತು ಜಾಗೃತಿ ಮೂಡಿಸುವ ಎಲ್‌ಇಡಿ ಸಂಚಾರ ವಾಹನಕ್ಕೆ ಬಿಂಕದಕಟ್ಟಿಯಲ್ಲಿ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್ ಕೆ ಪಾಟೀಲ ಅವರು ಚಾಲನೆ ನೀಡಿದರು.

ರಾಜ್ಯ ಸರಕಾರವು ಸಾಮಾನ್ಯ ಜನರ ಜೀವನಮಟ್ಟ ಸುಧಾರಣೆಗಾಗಿ ಪಂಚ ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮೀ, ಶಕ್ತಿ ಯೋಜನೆ, ಯುವನಿಧಿ, ಗೃಹಜ್ಯೋತಿ, ಅನ್ನಭಾಗ್ಯ ಬಗ್ಗೆ ಎಲ್‌ಇಡಿ ವಾಹನ ಹಾಗೂ ಬೀದಿ ನಾಟಕ ತಂಡಗಳು ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ.

ಸರ್ಕಾರದ ಯೋಜನೆಗಳ ಲಾಭ ನೇರವಾಗಿ ಜನರಿಗೆ ತಲುಪಬೇಕೆಂಬ ಉದ್ದೇಶದಿಂದ ಎಲ್‌ಇಡಿ ವಾಹನದ ಮೂಲಕ ಅರಿವು ಮೂಡಿಸಲಾಗುತ್ತದ್ದು, ಅರ್ಹ ಫಲಾನುಭವಿಗಳು ಇದರ ಸದುಪಯೋಗಪಡೆಯುವಂತೆ ಕೋರಲಾಗಿದೆ.

ಈ ವಾಹನಗಳು ಜಿಲ್ಲೆಯ ಗದಗ ತಾಲೂಕಿನ ಗ್ರಾಮಗಳಲ್ಲಿ ಸಂಚರಿಸಿ ಜಾಗೃತಿ ಮೂಡಿಸಲಿದೆ, ಬೀದಿ ನಾಟಕ ತಂಡಗಳು, ದಿನಕ್ಕೆ 2 ರಂತೆ ಬೀದಿ ನಾಟಕಗಳ ಮೂಲಕ ಅರಿವು ಮೂಡಿಸಲಿವೆ, ಅದರಂತೆ ಎಲ್‌ಇಡಿ ಮೂಲಕವು ಜನರಿಗೆ ಯೋಜನೆಗಳ ವನವರಿಕೆ ಮಾಡಲಾಗುತ್ತದೆ.

ಈ ಸಂದರ್ಭದಲ್ಲಿ ಪ್ರಮುಖರಾದ ಆನಂದಸ್ವಾಮಿ ಗಡ್ಡದೇವರಮಠ, ರವಿ ಮೂಲಿಮನಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕರ ವಸಂತ ಮಡ್ಲೂರ, ಡಾ. ಶರಣು ಗೋಗೇರಿ, ಕೊಟ್ರೇಶ್ ವಿಭೂತಿ, ಕಲಾವಿಧರಾದ ವೀರಣ್ಣ ಅಂಗಡಿ ಹಾಗೂ ಸಂಗಡಿಗರು ಇನ್ನಿತರರು ಉಪಸ್ಥಿತರಿದ್ದರು.

## ಮಾಜಿ ಸೈನಿಕರ ಮಕ್ಕಳಿಗೆ ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

**ಚಿಕ್ಕಮಗಳೂರು:** 2025-26ನೇ ಸಾಲಿಗಾಗಿ ವೃತ್ತಿಪರ ಪದವಿಗಳಾದ ಬಿಇ, ಬಿಇ (ಲಿಟರಲ್ ಎಂಟ್ರಿ), ಬಿ.ಟೆಕ್, ಬಿಡಿಎಸ್, ಎಂಬಿಬಿಎಸ್, ಬಿಬಿಎ, ಬಿಸಿಎ, ಬಿಎಸ್‌ಸಿ(ಎಜಿ), ಬಿ ಫಾರ್ಮಾ, ಎಂಬಿಎ, ಎಂಸಿಎ, ಬಿಎಡ್, ಎಲ್‌ಎಲ್‌ಬಿ ಇತ್ಯಾದಿ ಕೋರ್ಸುಗಳಲ್ಲಿ ಪ್ರಸಕ್ತ ವರ್ಷ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ಮಾಜಿ ಸೈನಿಕರ ಮಕ್ಕಳಿಗೆ ಪ್ರಧಾನ ಮಂತ್ರಿಗಳ ಶಿಷ್ಯವೇತನಕ್ಕಾಗಿ ವೆಬ್‌ಸೈಟ್ (https://ksb.gov.in/index.htm) ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿ ದಾಖಲಾತಿಗಳ ನೈಜತೆಯನ್ನು ಉಪ ನಿರ್ದೇಶಕರ ಕಾರ್ಯಾಲಯ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಂಕರೀಪುರಂ, ಹಾಸನ ಇವರಲ್ಲಿ ಪರಿಶೀಲನೆಗಾಗಿ ಸಲ್ಲಿಸುವಂತೆ ಸೂಚಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ಡಿಸೆಂಬರ್ 31 ಎಂದು ಹಾಸನ ಜಿಲ್ಲಾ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಪ್ರಕಟಣೆ ತಿಳಿಸಿದೆ.

## ಕುರುವಂಗಿಯಲ್ಲಿ ಶೀತಲ ಸರಪಳಿ ಘಟಕ ಸ್ಥಾಪನೆ

**ಚಿಕ್ಕಮಗಳೂರು:** ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತುನಿಗಮದಿಂದ ಜಿಲ್ಲೆಯ ಕಸಬಾ ಹೋಬಳಿ, ಕುರುವಂಗಿ ಗ್ರಾಮದ ಸ.ನಂ. 41ರಲ್ಲಿ ಸುಮಾರು 3 ಎಕರೆ ಜಾಗವನ್ನು ಗುರುತಿಸಿದ್ದು, ಈ ಜಾಗದಲ್ಲಿ ಕೆಪೆಕ್ ವತಿಯಿಂದ ಶೀತಲ ಸರಪಳಿ ಘಟಕ, ಶೀತಲ ಗೃಹವನ್ನು ನಿರ್ಮಿಸಲು ಉದ್ದೇಶಿಸಲಾಗಿದೆ.

ಈ ಜಾಗಕ್ಕೆ ಭೂ ಪರಿವರ್ತನೆ ಹಾಗೂ ಇನ್ನಿತರೆ ಸೇರಿದಂತೆ ರೂ. 21,02,335 ಗಳನ್ನು ಸರ್ಕಾರಕ್ಕೆ ಪಾವತಿಸಲಾಗಿದೆ. ಚಿಕ್ಕಮಗಳೂರು ಹಾಗೂ ಸಮೀಪದ ರೈತರ ಹಿತದೃಷ್ಟಿಯಿಂದ ಶೀತಲ ಸರಪಳಿ ಘಟಕವನ್ನು ಸ್ಥಾಪಿಸಿ, ಚಿಕ್ಕಮಗಳೂರು ಸುತ್ತಮುತ್ತಲ ರೈತರಿಗೆ ಅನುಕೂಲವಾಗುವಂತೆ ಅತೀ ಶೀಘ್ರದಲ್ಲಿ ಕಾಮಗಾರಿಯನ್ನು ಪ್ರಾರಂಭಿಸಲು ಯೋಜಿಸಲಾಗಿದೆ ಎಂದು ರಾಜ್ಯ ಕೃಷಿ ಉತ್ಪನ್ನ ಸಂಸ್ಕರಣೆ ಹಾಗೂ ನಿಗಮದ ಅಧ್ಯಕ್ಷ ಬಿ.ಹೆಚ್.ಹರೀಶ್ ತಿಳಿಸಿದ್ದಾರೆ.

## ಸ್ಪರ್ಶ್ ಔಟ್‌ರೀಚ್ ಕಾರ್ಯಕ್ರಮ

**ದಾವಣಗೆರೆ :** ಡಿಸೆಂಬರ್ 7 ರಂದು ಬೆಳಗಾವಿಯಲ್ಲಿ ನಡೆಯಲಿರುವ ಮಾಜಿ ಸೈನಿಕರ ರ್ಯಾಲಿಯಲ್ಲಿ ಪಿಸಿಡಿಎ ಬೆಂಗಳೂರು ಇವರಿಂದ ಸ್ಪರ್ಶ್ ಔಟ್‌ರೀಚ್ ಕಾರ್ಯಕ್ರಮ ವನ್ನು ಆಯೋಜಿಸಲಾಗಿದೆ.

ವೀರ ನಾರಿಯರು, ಮಾಜಿ ಸೈನಿಕರು ಮತ್ತು ಅವಲಂಬಿತರುಗಳು ಸ್ಪರ್ಶ್ ಪಿಂಚಣಿ ಮತ್ತು ಡಿಜಿಟಲ್ ಜೀವಿತ ಪ್ರಮಾಣ ಪತ್ರಗಳ ಕುರಿತು ಯಾವುದೇ ಸಮಸ್ಯೆಗಳಿದ್ದರೆ, ಈ ಕಾರ್ಯಕ್ರಮದಲ್ಲಿ ಪೂರಕ ದಾಖಲೆಗಳೊಂದಿಗೆ ಭಾಗವಹಿಸಿ ತಮ್ಮ ಕುಂದು-ಕೊರತೆಗಳನ್ನು ಬಗೆಹರಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ- 080-29710474/29710475 ಮತ್ತು ಫ್ಯಾಕ್ಸ್ 080-29710132 ಮೂಲಕ ಪಿಸಿಡಿಎ ಬೆಂಗಳೂರು ಇವರನ್ನು ಸಂಪರ್ಕಿಸಬಹುದೆಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರು(ಪ್ರಭಾರ) ತಿಳಿಸಿದ್ದಾರೆ.

## ತಾಲ್ಲೂಕು ಪಂಚಾಯತ್ ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆ

**ದಾವಣಗೆರೆ :** ದಾವಣಗೆರೆ ತಾಲ್ಲೂಕು ಪಂಚಾಯತ್ ಪ್ರಸಕ್ತ ಸಾಲಿನ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯನ್ನು ಮಾಯಕೊಂಡ ಶಾಸಕರಾದ ಕೆ.ಎಸ್ ಬಸವಂತಪ್ಪನವರ ಅಧ್ಯಕ್ಷತೆಯಲ್ಲಿ ನವಂಬರ್ 19 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರಾಮಭೋವಿ ತಿಳಿಸಿದ್ದಾರೆ.

## ವಂಶವೃಕ್ಷದಲ್ಲಿ ಪೌತಿ ವಾರಸುದಾರರ ಹೆಸರನ್ನು ಕೈಬಿಟ್ಟರೆ ಕಾನೂನು ಕ್ರಮ

**ಶಿವಮೊಗ್ಗ:** ಶಿವಮೊಗ್ಗ ತಾಲೂಕಿನಲ್ಲಿ ಇ-ಪೌತಿ ಖಾತೆ ಬದಲಾವಣೆಯು ನಡೆಯುತ್ತಿದ್ದು, ಅದರಲ್ಲಿ ವಂಶವೃಕ್ಷ ಮಾಡುವ ಸಂದರ್ಭದಲ್ಲಿ ಖಾತೆದಾರರು ಪೌತಿಯಾದ ವಾರಸುದಾರರ ಹೆಸರನ್ನು ಕೈಬಿಟ್ಟು ವಂಶವೃಕ್ಷ ಪ್ರಮಾಣಪತ್ರಕ್ಕೆ ಅರ್ಜಿ ಸಲ್ಲಿಸುತ್ತಿರುವುದು ಕಂಡುಬಂದಿದೆ. ಈಗಾಗಲೇ ವಾರಸುದಾರರ ಹೆಸರನ್ನು ಕೈಬಿಟ್ಟು ವಂಶವೃಕ್ಷ ಕೋರಿ ಸಲ್ಲಿಸಿರುವ ಅರ್ಜಿದಾರರ ವಿರುದ್ಧ ಭಾರತೀಯ ನಾಗರೀಕ ಸುರಕ್ಷ ಸಂಹಿತ ಕಾಯ್ದೆಯ ಅಡಿಯಲ್ಲಿ ಕ್ರಮ ಕೈಗೊಳ್ಳಲಾಗಿರುತ್ತದೆ.ಇನ್ನು ಮುಂದೆ ಯಾರಾದರೂ ಪೌತಿ ವಾರಸುದಾರರ ಹೆಸರನ್ನು ಕೈಬಿಟ್ಟು ವಂಶವೃಕ್ಷಕ್ಕೆ ಅರ್ಜಿಯನ್ನು ಸಲ್ಲಿಸಿರುವುದು ಹಾಗೂ ಸರ್ಕಾರಕ್ಕೆ ತಪ್ಪು ಮಾಹಿತಿ ನೀಡಿ ದಾಖಲಾತಿಯನ್ನು ಪಡೆಯುವುದು ಕಂಡುಬಂದಲ್ಲಿ ಭಾರತೀಯ ನಾಗರೀಕ ಸುರಕ್ಷಾ ಸಂಹಿತಾ ಕಾಯ್ದೆಯ ಹಾಗೂ ಚಾಲ್ತಿಯಲ್ಲಿರುವ ಇತರೆ ಅಧಿನಿಯಮಗಳ ಅಡಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಶಿವಮೊಗ್ಗ ತಾಲೂಕು ತಹಶೀಲ್ದಾರ್ ರಾಜೀವ್ ವಿ.ಎಸ್. ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ನಂದನಕೋವಿ, ಅಣಜಿ ಗ್ರಾಮಗಳಿಗೆ ಜಿ.ಪಂ. ಸಿಇಓ ಭೇಟಿ, ಅಭಿವೃದ್ಧಿ, ಮೂಲಭೂತ ಸೌಕರ್ಯಗಳ ಪರಿಶೀಲನೆ



**ದಾವಣಗೆರೆ:** ಸೋಮವಾರ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ ವಿಠ್ಠಲರಾವ್ ಮುಂಜಾನೆ ಕಂದನಕೋವಿ ಮತ್ತು ಅಣಜಿ ಗ್ರಾಮಗಳಿಗೆ ಭೇಟಿ ನೀಡಿ ವಿವಿಧ ಸಾರ್ವಜನಿಕ ಸೌಲಭ್ಯಗಳು ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿದರು.

**ಅಂಗನವಾಡಿ ಕೇಂದ್ರ ಮತ್ತು ನ್ಯಾಯಬೆಲೆ ಅಂಗಡಿಗಳಲ್ಲಿ ಧಾನ್ಯಗಳ ಗುಣಮಟ್ಟವನ್ನು ಪರಿಶೀಲಿಸಿದರು. ನಂತರ ಘನ ತ್ಯಾಜ್ಯ ವಿಲೇವಾರಿ ಘಟಕಕ್ಕೆ ಭೇಟಿ ನೀಡಿ, ಕಸ ಸಂಗ್ರಹಣೆ ಮತ್ತು ಬೇರ್ಪಡಿಸುವಿಕೆ ಕುರಿತು ಪರಿಶೀಲನೆ**

ಕಂದನಕೋವಿ : ಕಂದನಕೋವಿ ಗ್ರಾಮದಲ್ಲಿ ಹಾಲಿನ ಡೈರಿ ಮತ್ತು ನ್ಯಾಯಬೆಲೆ ಅಂಗಡಿಗಳನ್ನು ಪರಿಶೀಲಿಸಿ, ವಿತರಣೆ ಕ್ರಮ ಹಾಗೂ ದಾಖಲೆಗಳ ಪರಿಶುದ್ಧತೆಯನ್ನು ಪರಿಶೀಲಿಸಿದರು. ಬಳಿಕ ರೈತರೊಂದಿಗೆ ಸಂವಾದ ನಡೆಸಿ ಅವರ ಕುಂದು-ಕೊರತೆಗಳನ್ನು ಆಲಿಸಿದರು. ಹೊಸವಾಗಿ ನಿರ್ಮಿಸಿರುವ ಅಂಗನವಾಡಿ ಕಟ್ಟಡಕ್ಕೆ ಭೇಟಿ ನೀಡಿ, ಮಕ್ಕಳ ಸ್ನೇಹಿ ವಾತಾವರಣ ಒದಗಿಸುವ ಉದ್ದೇಶದಿಂದ ಕಟ್ಟಡದ ಗೋಡೆಗಳಲ್ಲಿ ಆಕರ್ಷಕ ಚಿತ್ತಾರ ಮತ್ತು ಬರಹಗಳನ್ನು ನಿರ್ಮಿಸಲು ಸೂಚನೆ ನೀಡಿದರು. ಗ್ರಾಮದಲ್ಲಿ ಜಲ ಜೀವನ್ ಮಿಷನ್ ಅಡಿಯಲ್ಲಿ ನಡೆಯುತ್ತಿರುವ ಕಾಮಗಾರಿ ಪರಿಶೀಲಿಸಿ, ಸಮರ್ಪಕ ನೀರಿನ ಹಂಚಿಕೆ ಗ್ರಾಮದ ಜನರಿಗೆ ಲಭ್ಯವಾಗುವಂತೆ ಅಧಿಕಾರಿಗಳಿಗೆ ಅಗತ್ಯ ಸೂಚನೆ ನೀಡಿದರು. ಜೊತೆಗೆ, ಗ್ರಾಮ ಸ್ವಚ್ಛತೆ ಕುರಿತು ಗ್ರಾಮಸ್ಥರಿಂದ ನೇರವಾಗಿ ಮಾಹಿತಿಯನ್ನು ಪಡೆದುಕೊಂಡರು.

ಅಣಜಿ ಗ್ರಾಮದಲ್ಲಿ ಪರಿಶೀಲನೆ: ಅಣಜಿ ಗ್ರಾಮದಲ್ಲಿ ಗ್ರಾಮ ಪಂಚಾಯಿತಿ ಕಟ್ಟಡವು ಸಂಪೂರ್ಣವಾಗಿ ಶಿಥಿಲಗೊಂಡಿರುವುದು ಗಮನಿಸಿ ಹೊಸ ಕಟ್ಟಡ ನಿರ್ಮಾಣಕ್ಕೆ ತಕ್ಷಣದ ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಗ್ರಾಮೀಣ ಸಂತೆ ಪ್ರದೇಶಕ್ಕೆ ಭೇಟಿ ನೀಡಿ ಕಸ ವಿಲೇವಾರಿ ವ್ಯವಸ್ಥೆಯ ಕುರಿತು ಚರ್ಚಿಸಿ, ಕಸವನ್ನು ಸೂಕ್ತ ರೀತಿಯಲ್ಲಿ ಸಂಗ್ರಹಿಸಿ ವಿಲೇವಾರಿ ಮಾಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಅಂಗನವಾಡಿ ಕೇಂದ್ರ ಮತ್ತು ನ್ಯಾಯಬೆಲೆ ಅಂಗಡಿಗಳಲ್ಲಿ ಧಾನ್ಯಗಳ ಗುಣಮಟ್ಟವನ್ನು ಪರಿಶೀಲಿಸಿದರು. ನಂತರ ಘನ ತ್ಯಾಜ್ಯ ವಿಲೇವಾರಿ ಘಟಕಕ್ಕೆ ಭೇಟಿ ನೀಡಿ, ಕಸ ಸಂಗ್ರಹಣೆ ಮತ್ತು ಬೇರ್ಪಡಿಸುವಿಕೆ ಕುರಿತು ಪರಿಶೀಲನೆ ನಡೆಸಿದರು. ಗ್ರಾಮಗಳಲ್ಲಿ ಇನ್ನೂ ಕೆಲವು ಕಡೆ ಕಸ ಸುಡುವುದು ಗಮನಕ್ಕೆ ಬಂದಿದ್ದು ಇದನ್ನು ತಕ್ಷಣ ನಿಲ್ಲಿಸಿ ಎಲ್ಲ ಕಸದನ್ನೂ ವಿಲೇವಾರಿ ಘಟಕಕ್ಕೆ ಸಾಗಿಸಿ ಸರಿಯಾದ ವಿಧಾನದಲ್ಲಿ ಸಂಸ್ಕರಿಸುವಂತೆ ನಿರ್ದೇಶನ ನೀಡಿದರು.

ಗ್ರಾಮಗಳ ಭೇಟಿಯಿಂದ ಅಭಿವೃದ್ಧಿ, ಸ್ವಚ್ಛತೆ ಮತ್ತು ಸಾರ್ವಜನಿಕ ಸೌಲಭ್ಯಗಳ ಸುಧಾರಣೆಗೆ ಮಹತ್ವದ ಉತ್ತೇಜನ ಸಿಗಲಿದೆ ಎಂಬುದು ಗ್ರಾಮಸ್ಥರ ಅಭಿಪ್ರಾಯ

# ದತ್ತ ಜಯಂತಿ: ಅಂಗಡಿ ಮುಂಗಟ್ಟು ಮುಚ್ಚಲು ಜಿಲ್ಲಾಧಿಕಾರಿ ಆದೇಶ

**ಚಿಕ್ಕಮಗಳೂರು:** ಭಜರಂಗದಳ, ವಿಶ್ವ ಹಿಂದೂ ಪರಿಷತ್ ಮತ್ತು ಇತರ ಹಿಂದೂಪರ ಸಂಘಟನೆಗಳ ಕಾರ್ಯಕರ್ತರು ಡಿಸೆಂಬರ್ 4 ರಂದು ನಡೆಯುವ ದತ್ತ ಜಯಂತಿ ಸಂದರ್ಭದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಜಿಲ್ಲಾ ದಂಡಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳು ಆದ ಸಿ.ಎನ್.ಮೀನಾ ನಾಗರಾಜ್ ಅವರು ತಮಗೆ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ನಗರ ಸೇರಿದಂತೆ ನಗರ ಹೊರವಲಯದ ಕೆಲವು ಮಾರ್ಗಗಳಲ್ಲಿ ಹಾಗೂ ಕೆಲವು ಸೂಕ್ಷ್ಮ ಸ್ಥಳಗಳಲ್ಲಿ ಅಂಗಡಿ, ಮುಂಗಟ್ಟುಗಳನ್ನು ಮುಚ್ಚುವಂತೆ ಆದೇಶಿಸಿದ್ದಾರೆ.

ಭಕ್ತಾದಿಗಳು ಪೀಠಕ್ಕೆ ಆಗಮಿಸಿ, ನಿರ್ಗಮಿಸುವ ಮಾರ್ಗದಲ್ಲಿ ಡಿಸೆಂಬರ್ 4 ರಂದು ಬೆಳಗ್ಗೆ 4 ಗಂಟೆಯಿಂದ ರಾತ್ರಿ 12 ಗಂಟೆವರೆಗೆ ನಗರದ ರತ್ನಗಿರಿ ರಸ್ತೆ (ಆರ್.ಜಿ.ರಸ್ತೆ) ಮತ್ತು ಇಂದಿರಾನಗರ ರಸ್ತೆ (ಐ.ಜಿ.ರಸ್ತೆ), ಮೂಗ್ತೀಹಳ್ಳಿಯಿಂದ ಚಿಕ್ಕಮಗಳೂರು ನಗರದ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದವರೆಗೆ (ಕೆ.ಎಂ.ರಸ್ತೆ), ಐ.ಜಿ. ರಸ್ತೆ, ಆರ್.ಜಿ.ರಸ್ತೆ (ಕೆ.ಎಸ್. ಆರ್.ಟಿ.ಸಿ.ಬಸ್ ನಿಲ್ದಾಣದಿಂದ ರಾಮನಹಳ್ಳಿವರೆಗೆ, ಜಾಲಿಫ್ರೆಂಡ್ ಸರ್ಕಲ್‌ನಿಂದ ಅಲ್ಲಂಪುರ, ಹಾಲೇನಹಳ್ಳಿ, ಸಿರಿ ಕಾಫಿಶಾಪ್, ಹೋಂಸ್ಟೆ, ಕೈಮರ, ಅತ್ತಿಗುಂಡಿ ಮತ್ತು ಮಲ್ಲೇನಹಳ್ಳಿ ಗ್ರಾಮ, ಕೆ.ಎಂ.ರಸ್ತೆ (ಶೃಂಗಾರ್ ಸರ್ಕಲ್‌ನಿಂದ ಎ.ಐ.ಟಿ. ಸರ್ಕಲ್‌ವರೆಗೆ), ಬಸವನಹಳ್ಳಿ ಮುಖ್ಯ ರಸ್ತೆ (ಕೆ.ಇ.ಬಿ. ಈದ್ಗಾ ಮೈದಾನದಿಂದ ಹನುಮಂತಪ್ಪ ವೃತ್ತದವರೆಗೆ), ಆಲ್ದೂರು ಪಟ್ಟಣ ಹಾಗೂ ಹಾಂದಿಯಿಂದ ಭೂತನಕಾಡು ಮತ್ತು ಹಾಂದಿಯಿಂದ ವಸ್ತಾರೆವರೆಗೆ ಬಣಕಲ್ ಪಟ್ಟಣದಿಂದ ಕೊಟ್ಟಿಗೆಹಾರದವರೆಗಿನ (ಕೆ.ಎಂ.ರಸ್ತೆ) ಎಲ್ಲಾ ರೀತಿಯ ಅಂಗಡಿ ಮುಂಗಟ್ಟುಗಳನ್ನು ಮುಚ್ಚುವಂತೆ ಜಿಲ್ಲಾ ದಂಡಾಧಿಕಾರಿಗಳ ಆದೇಶದಲ್ಲಿ ಸೂಚಿಸಲಾಗಿದೆ.

ಡಿಸೆಂಬರ್ 4 ರಂದು ಬೆಳಗಿನ ಜಾವದಿಂದಲೇ ಜಿಲ್ಲೆ ಹಾಗೂ ಹೊರ ಜಿಲ್ಲೆಗಳಿಂದ ದತ್ತಜಯಂತಿಯ ಹಿನ್ನೆಲೆಯಲ್ಲಿ ಸುಮಾರು 25 ರಿಂದ 30 ಸಾವಿರ ಭಜರಂಗದಳ, ವಿಶ್ವ ಹಿಂದೂ ಪರಿಷತ್ ಹಾಗೂ ಇನ್ನಿತರೆ ಹಿಂದೂಪರ ಸಂಘಟನೆಗಳು ಹಾಗೂ ದತ್ತಮಾಲಾಧಾರಿಗಳು ಸೇರಲಿದ್ದು, ಈ ಕಾರ್ಯಕ್ರಮದಲ್ಲಿ ಹೋಮ, ಹವನ ಮತ್ತು ಇತರೆ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಅಂದೇ ರಾತ್ರಿ ವೇಳೆಗೆ ಹಿಂದಿರುಗಲಿದ್ದು, ಈ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ಮುಂಜಾಗ್ರತೆ ವಹಿಸುವುದು ಮತ್ತು ಸಾರ್ವಜನಿಕ ಶಾಂತಿ, ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಜಿಲ್ಲಾ ಪೊಲೀಸ್ ಅಧೀಕ್ಷಕರ ಪ್ರಸ್ತಾವನೆಯನ್ನು ಆಧರಿಸಿ ಈ ಕ್ರಮ ಕೈಗೊಂಡಿದ್ದಾರೆ.

## ಶಸ್ತಿ-ಪ್ರೋತ್ಸಾಹ ಧನಕ್ಕೆ ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಅರ್ಹ ಸಾಧಕ ಕ್ರೀಡಾಪಟುಗಳು ಹಾಗೂ ಇತರರಿಂದ ವಿವಿಧ ಪ್ರಶಸ್ತಿ ಮತ್ತು ವಿವಿಧ ಪ್ರೋತ್ಸಾಹಧನ ನೀಡುವ ಯೋಜನೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

2024 ನೇ ಸಾಲಿನ ಏಕಲವ್ಯ ಪ್ರಶಸ್ತಿ, ಜೀವಮಾನ ಸಾಧನೆ ಪ್ರಶಸ್ತಿ, ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ, ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ, 2023 ಮತ್ತು 2024ರ ಗುರಿ ಒಲಂಪಿಕ್ ಪದಕ, 2025ರ ಶೈಕ್ಷಣಿಕ ಶುಲ್ಕ ಮರುಪಾವತಿ, ಕ್ರೀಡಾ ವಿದ್ಯಾರ್ಥಿ ವೇತನಕ್ಕೆ ಡಿಸೆಂಬರ್ 3 ರೊಳಗೆ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸುವ ಅರ್ಹ ಕ್ರೀಡಾಪಟುಗಳು ಅಧಿಕೃತ ಜಾಲತಾಣ <https://sevasindhu.karnataka.gov.in/> ಮೂಲಕ ಡಿಸೆಂಬರ್ 3 ರೊಳಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಶತಮಾನೋತ್ಸವ ಕ್ರೀಡಾಂಗಣದಲ್ಲಿರುವ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪ ನಿರ್ದೇಶಕರ ಕಚೇರಿ (08262-295724 ಅಥವಾ 08262-155265) ಯನ್ನು ಸಂಪರ್ಕಿಸಬಹುದು ಎಂದು ಕ್ರೀಡಾ ಇಲಾಖೆಯ ಪ್ರಕಟಣೆ ತಿಳಿಸಿದೆ.

<u>ಬೇವೂರು ಪಿಎಸಿಎಸ್ ನಿರ್ದೇಶಕರ ಚುನಾವಣೆ:</u>

# ಕಾಂಗ್ರೆಸ್ ಬೆಂಬಲಿತ ಸಿಂಡಿಕೇಟ್‌ನ 9 ನಿರ್ದೇಶಕರು ಗೆಲುವು: ಕೈ ತೆಕ್ಕೆಗೆ ಆಡಳಿತ ಮಂಡಳಿ



**ಚನ್ನಪಟ್ಟಣ:** ತಾಲೂಕಿನ ಬೇವೂರು ವಿವಿದೋದ್ದೇಶ ಪ್ರಾಥಮಿಕ ಕೃಷಿ ಗ್ರಾಮೀಣ ಸಹಕಾರ ಸಂಘದ 2025-30 ನೇ ಸಾಲಿನ ಆಡಳಿತ ಮಂಡಳಿ ನಿರ್ದೇಶಕರ ಆಯ್ಕೆಗೆ ಭಾನುವಾರ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿತ ಸಿಂಡಿಕೇಟ್‌ನ 9 ನಿರ್ದೇಶಕರು ಗೆಲುವು ಸಾಧಿಸಿದ್ದಾರೆ.

ಹೌದು, ಸಂಘದ 12 ನಿರ್ದೇಶಕರ ಆಯ್ಕೆಗೆ ನಡೆಯಬೇಕಿರುವ ಚುನಾವಣೆಯಲ್ಲಿ ಎಸ್ಟಿ ಸಮುದಾಯದ ಸದಸ್ಯರು ಇಲ್ಲದ ಕಾರಣ ಸಂಘದಲ್ಲಿ ಉಳಿದ 11 ನಿರ್ದೇಶಕ ಸ್ಥಾನಕ್ಕೆ ಚುನಾವಣೆ ಘೋಷಣೆಯಾಗಿತ್ತು. ಮಹಿಳಾ ಮೀಸಲು ಕ್ಷೇತ್ರದ 2 ನಿರ್ದೇಶಕ ಸ್ಥಾನಕ್ಕೆ ಅವಿರೋಧ ಆಯ್ಕೆಯಾಗಿದ್ದರಿಂದ ಬಾಕಿ ಉಳಿದ 9 ನಿರ್ದೇಶಕ ಸ್ಥಾನದ ಆಯ್ಕೆಗೆ ಭಾನುವಾರ ಚುನಾವಣೆ ನಡೆದಿದ್ದು, ಕಾಂಗ್ರೆಸ್ ಮತ್ತು ಜೆಡಿಎಸ್ ಬೆಂಬಲಿತರು ಹಾಗೂ ಬಂಡಾಯದಿಂದ ಒಟ್ಟು 15 ಮಂದಿ ಅಭ್ಯರ್ಥಿಗಳು ಕಣದಲ್ಲಿ ಉಳಿದು ಚುನಾವಣೆ ಎದುರಿಸಿದ್ದು ಇದರಲ್ಲಿ ಕಾಂಗ್ರೆಸ್ ಬೆಂಬಲಿತ ಸಿಂಡಿಕೇಟ್‌ನ 9 ನಿರ್ದೇಶಕರು ಗೆಲುವು ಸಾಧಿಸುವ ಮೂಲಕ ಕಾಂಗ್ರೆಸ್ ಸಿಂಡಿಕೇಟ್‌ಗೆ ಬ್ಯಾಂಕ್‌ನ ಆಡಳಿತ ಮಂಡಳಿ ವಶವಾಗಿದೆ.

ಸಾಲಗಾರರ ಸಾಮಾನ್ಯ ಕ್ಷೇತ್ರದಿಂದ 5 ನಿರ್ದೇಶಕರು ಆಯ್ಕೆ : ಸಂಘದ ಸಾಲಗಾರರ ಸಾಮಾನ್ಯ ಕ್ಷೇತ್ರದ 5 ನಿರ್ದೇಶಕರ ಸ್ಥಾನಕ್ಕೆ ಒಟ್ಟು 7 ಮಂದಿ ಅಭ್ಯರ್ಥಿಗಳು ಕಣದಲ್ಲಿ ಸ್ಪರ್ಧೆ ಮಾಡಿದ್ದು ಇದರಲ್ಲಿ ಕಾಂಗ್ರೆಸ್ ಬೆಂಬಲಿತ ಸಿಂಡಿಕೇಟ್‌ನ ಅಭ್ಯರ್ಥಿಗಳಾದ ಬಿ.ಸಿ. ಯೋಗೀಶ್, ಬಿ. ಕೃಷ್ಣ, ದಯಾನಂದಸಾಗರ, ಬಿಎನ್‌ಎಸ್ ಕುಮಾರ್, ಬಿ.ಎಸ್. ರಾಜಶೇಖರ್‌ಸ್ವಾಮಿಅವರು ಜಯಗಳಿಸಿದ್ದಾರೆ.

ಸಾಲಗಾರರಲ್ಲದ ಕ್ಷೇತ್ರದಿಂದ ಓರ್ವ ನಿರ್ದೇಶಕರ ಆಯ್ಕೆ : ಸಂಘದ ಸಾಲಗಾರರಲ್ಲದ ಕ್ಷೇತ್ರದ 1 ನಿರ್ದೇಶಕ ಸ್ಥಾನಕ್ಕೆ ಒಟ್ಟು 3 ನಾಮಪತ್ರ ಸಲ್ಲಿಕೆ ಮಾಡಿದ್ದು, ಅದರಂತೆ ನಾಗಣ್ಣ ಅವರು ಚುನಾವಣೆ ಗೆಲುವು ಸಾಧಿಸಿದ್ದಾರೆ.

ಸಾಲಗಾರರ ಪರಿಶಿಷ್ಠ ಜಾತಿ ಮೀಸಲು ಕ್ಷೇತ್ರದಿಂದ ಓರ್ವ ನಿರ್ದೇಶಕ ಆಯ್ಕೆ: ಸಂಘದ ಸಾಲಗಾರರ ಪರಿಶಿಷ್ಟ ಜಾತಿ ಮೀಸಲು ಕ್ಷೇತ್ರದ 1 ನಿರ್ದೇಶಕ ಸ್ಥಾನಕ್ಕೆ ಬಿ.ಕೆ. ಅರ್ಜುನ, ಕೆ. ಅವರು ಆಯ್ಕೆಯಾಗಿದ್ದಾರೆ.

ಸಾಲಗಾರರ ಬಿಸಿಎಂ(ಎ) ಮೀಸಲು ಕ್ಷೇತ್ರದಿಂದ ಓರ್ವ ನಿರ್ದೇಶಕ ಆಯ್ಕೆ: ಸಂಘದ ಸಾಲಗಾರರ ಬಿಸಿಎಂ (ಎ) ಮೀಸಲು ಕ್ಷೇತ್ರದ 1 ನಿರ್ದೇಶಕ ಸ್ಥಾನಕ್ಕೆ ಬಿ.ಕೆ. ಪಂಚಲಿಂಗಯ್ಯ, ಅವರು ಗೆಲು ಸಾಧಿಸಿದ್ದಾರೆ.ಸಾಲಗಾರರ ಬಿಸಿಎಂ(ಎ) ಮೀಸಲು ಕ್ಷೇತ್ರದಿಂದ ಓರ್ವ ನಿರ್ದೇಶಕ ಆಯ್ಕೆ: ಸಂಘದ ಸಾಲಗಾರರ ಬಿಸಿಎಂ (ಎ) ಮೀಸಲು ಕ್ಷೇತ್ರದ 1 ನಿರ್ದೇಶಕ ಸ್ಥಾನಕ್ಕೆ ಬಿ.ಕೆ. ಪಂಚಲಿಂಗಯ್ಯ, ಅವರು ಗೆಲು ಸಾಧಿಸಿದ್ದಾರೆ.

ಸಾಲಗಾರರ ಬಿಸಿಎಂ(ಬಿ) ಮೀಸಲು ಕ್ಷೇತ್ರದಿಂದ ಓರ್ವ ನಿರ್ದೇಶಕರ ಆಯ್ಕೆ : ಸಂಘದ ಸಾಲಗಾರರ ಬಿಸಿಎಂ (ಬಿ) ಮೀಸಲು ಕ್ಷೇತ್ರದ 1 ನಿರ್ದೇಶಕ ಸ್ಥಾನಕ್ಕೆ ಬಿ.ಆರ್. ನಂದೀಶ್, ಅವರು ಗೆಲು ಸಾಧಿಸಿದ್ದಾರೆ.

ನಿರ್ದೇಶಕರ ಅವಿರೋಧ ಆಯ್ಕೆ: ಸಂಘದ ಸಾಲಗಾರರ ಮಹಿಳಾ ಮೀಸಲು ಮೀಸಲು ಕ್ಷೇತ್ರದ 2 ನಿರ್ದೇಶಕ ಸ್ಥಾನಕ್ಕೆ ಪುಟ್ಟಲಿಂಗಮ್ಮ, ಪ್ರಭಾವತಿ ಅವರು ಅವಿರೋಧವಾಗಿ ಆಯ್ಕೆಯಾಗಿದ್ದರು.

ಒಟ್ಟಾರೆ 11 ನಿರ್ದೇಶಕ ಸ್ಥಾನಕ್ಕೆ ಕಾಂಗ್ರೆಸ್ ಬೆಂಬಲಿತ ಸಿಂಡಿಕೇಟ್‌ನ ನಿರ್ದೇಶಕರು ಆಯ್ಕೆಯಾಗಿ ಆಡಳಿತ ಮಂಡಳಿಯನ್ನು ತೆಕ್ಕೆಗೆ ಪಡೆಯುವಲ್ಲಿ ಯಶಸ್ವಿಯಾಗಿವೆ.

ಈ ಸಂದರ್ಭದಲ್ಲಿ ಬಮೂಲ್ ನಿರ್ದೇಶಕರಾದ ಎಸ್.ಲಿಂಗೇಶ್‌ಕುಮಾರ್‌ರವರು ವಿಜೇತರಾದ ಅಭ್ಯರ್ಥಿಗಳನ್ನು ಅಭಿನಂದಿಸಿದರು.

ಕಾಂಗ್ರೆಸ್ ಮುಖಂಡರುಗಳಾದ ಅರಳಾಳುಸಂದ್ರ ಶಿವಪ್ಪ, ವಂದಾರಗುಪ್ಪೆ ವಿ.ಬಿ. ಚಂದ್ರು, ಚನ್ನಂಕೇಗೌಡನದೊಡ್ಡಿ ಸಿ.ಪಿ. ನಾಗೇಶ್, ಮುದಗೆರೆ ಜಯಕುಮಾರ್, ಮೈಲನಾಯಕನಹಳ್ಳಿ ಅಜಿತ್, ವಂದಾರಗುಪ್ಪೆ ರಾಜೇಶ್, ಮಾಜಿ ಗ್ರಾ.ಪಂ. ಸದಸ್ಯ ಮಧುಸೂದನ್, ಪಿ.ಎಲ್.ಡಿ. ಬ್ಯಾಂಕ್ ಮಾಜಿ ಅಧ್ಯಕ್ಷ ಕೆ.ಪಿ. ಪುಟ್ಟಸ್ವಾಮಿ, ಬಿ.ವಿ. ಅರುಣಾಚಲ, ಸುನಿಲ್‌ಕುಮಾರ್, ರೇವಣಸಿದ್ದಪ್ಪ, ಬಿ.ಕೆ. ಪುಟ್ಟಸ್ವಾಮಿ, ಚನ್ನಪ್ಪಾಜಿ, ಗ್ರಾ.ಪಂ. ಉಪಾಧ್ಯಕ್ಷ ಬಜ್ಜಯ್ಯ, ಕದರಮಂಗಲ ರಾಜು, ಬೇವೂರು ಮಂಡ್ಯ ಮಧು, ಬೊಮ್ಮನಾಯಕನಹಳ್ಳಿ ಸಂದೀಪ್, ಮಾಗನೂರು ಜಯರಾಮ್, ಗೌಡಗೆರೆ ಸಿದ್ದರಾಮು, ಭೈರನಾಯಕನಹಳ್ಳಿ ಗಿರೀಶ್, ಹಾರೋಹಳ್ಳಿದೊಡ್ಡಿ ಕೆ.ಟಿ. ಲಕ್ಷ್ಮಮ್ಮ, ಕೆಲಗೆರೆ ಸೂರಿ, ಕನ್ನಸಂದ್ರ ಸುರೇಂದ್ರ, ಮನು, ನವೀನ್, ಚೇತನ್, ಮೂಗೂರೇಗೌಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು

## 19, 20 ವಿಧಾನಸಭೆಯ ಅರ್ಜಿಗಳ ಸಮಿತಿಯ ಜಿಲ್ಲಾ ಪ್ರವಾಸ

**ಚಿಕ್ಕಮಗಳೂರು:** ಕರ್ನಾಟಕ ವಿಧಾನಸಭೆಯ ಅರ್ಜಿಗಳ ಸಮಿತಿಯ ಅಧ್ಯಕ್ಷರು ಹಾಗೂ ಮಾನ್ಯ ವಿಧಾನಸಭಾ ಉಪಸಭಾಧ್ಯಕ್ಷರು, ಮಾನ್ಯ ವಿಧಾನಸಭಾ ಸದಸ್ಯರು ಹಾಗೂ ಸಮಿತಿಯ ಸದಸ್ಯರು ಮತ್ತು ಅಧಿಕಾರಿಗಳು ನವೆಂಬರ್ 19 ಮತ್ತು 20 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ಜಿಲ್ಲಾಧಿಕಾರಿ ಕಚೇರಿಯಲ್ಲಿ ಸಭೆ ನಡೆಸಲಿದ್ದಾರಲ್ಲದೆ, ಕ್ಷೇತ್ರ ವೀಕ್ಷಣೆಯನ್ನೂ ನಡೆಸಲಿದ್ದಾರೆ.

ನವೆಂಬರ್ 19 ರಂದು ಚಿಕ್ಕಮಗಳೂರು ನಗರಕ್ಕೆ ಸಂಜೆ 4 ಗಂಟೆಗೆ ಆಗಮಿಸಲಿರುವ ಸಮಿತಿಯು ಅಂದು ರಾತ್ರಿ ವಾಸ್ತವ್ಯ ಮಾಡಲಿದೆ. ನವೆಂಬರ್ 20 ರಂದು ಬೆಳಿಗ್ಗೆ 11.30 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಸಭೆ ನಡೆಸಲಿರುವ ಸಮಿತಿಯು ಅನಂತರ ನಗರದ ವೈದ್ಯಕೀಯ ಕಾಲೇಜು ಕಟ್ಟಡ ಹಾಗೂ ನೂತನವಾಗಿ ನಿರ್ಮಾಣವಾಗುತ್ತಿರುವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಮತ್ತು ತಾಯಿ ಮಕ್ಕಳ ಆಸ್ಪತ್ರೆ ಕಟ್ಟಡಗಳು ಕಳಪೆ ಕಾಮಗಾರಿಯಿಂದ ಕೂಡಿದ್ದು, ಕಾಮಗಾರಿ ಪೂರ್ಣಗೊಳಿಸಲು ವಿಳಂಬ ಮಾಡುತ್ತಿರುವ ಕುರಿತು ಪರಿವೀಕ್ಷಣೆ ನಡೆಸಲಿದೆ. ಮಧ್ಯಾಹ್ನ 12.30ಕ್ಕೆ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಸಮಿತಿಯು ಸಭೆ ನಡೆಸಲಿದೆ. ನಂತರ ಮಧ್ಯಾಹ್ನ 3 ಗಂಟೆಗೆ ಚಿಕ್ಕಮಗಳೂರಿನಿಂದ ಬೆಂಗಳೂರಿಗೆ ತೆರಳಲಿದೆ.

## ನೇರ ಸಂದರ್ಶನ

**ಚಿಕ್ಕಮಗಳೂರು:** ನಗರದ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಕಚೇರಿಯಲ್ಲಿ ಖಾಸಗಿ ಕಂಪನಿಯಾದ ಬೆಂಗಳೂರಿನ ನವೋದಯ ಗ್ರಾಮ ವಿಕಾಸ ಚಾರಿಟಲ್ ಟ್ರಸ್ಟ್ ಮೂಡಿಗೆರೆ, ಶೃಂಗೇರಿ, ಕೊಪ್ಪ, ಕಡೂರು ಮತ್ತು ತರೀಕೆರೆ ತಾಲ್ಲೂಕುಗಳಲ್ಲಿ ನವೆಂಬರ್ 20 ರಂದು ಬೆಳಿಗ್ಗೆ 10.30 ಗಂಟೆಗೆ ನೇರ ಸಂದರ್ಶನವನ್ನು ಆಯೋಜಿಸಿದೆ. ಎಸ್‌ಎಸ್‌ಎಲ್‌ಸಿ, ಪಿಯುಸಿ, ಯಾವುದೇ ಪದವಿ ವಿದ್ಯಾರ್ಹತೆ (ಇಂಜಿನಿಯರಿಂಗ್ ವಿದ್ಯಾರ್ಹತೆ ಹೊರತುಪಡಿಸಿ) ಹೊಂದಿರುವ 18 ರಿಂದ 35 ವಯೋಮಿತಿಯ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಎರಡು ಸೆಟ್ ರೆಸ್ಯೂಮ್‌ನೊಂದಿಗೆ ಸಂದರ್ಶನದಲ್ಲಿ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಕಚೇರಿ (08262-295538,) ಯನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆಸ್ಕಾಂ ಜನ ಸಂಪರ್ಕ ಸಭೆ

**ಶಿವಮೊಗ್ಗ:** ಸಾಗರ ಮೆಸ್ಕಾಂ ನಗರ ಉಪವಿಭಾಗ ಕಛೇರಿಯಲ್ಲಿ ನ 20 ರಂದು ಬೆಳಿಗ್ಗೆ 11.00 ರಿಂದ 01.00 ರವರೆಗೆ ಜನಸಂಪರ್ಕ ಸಭೆ ನಡೆಯಲಿದೆ. ಈ ಸಭೆಯಲ್ಲಿ ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದ್ದು, ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

ಸಂಪರ್ಕಿಸಬಹುದಾದ ದೂರವಾಣಿಸಂಖ್ಯೆ:.9448289516.



ಶಾಸಕರ ಬರವಿಕೆಗಾಗಿ ಕಾಯುತ್ತಿರುವ ತಾಲೂಕು ಮಟ್ಟದ ಅಧಿಕಾರಿಗಳು.

# ಮಾಯಕೊಂಡ ಕೆಂಚಮಾರನಹಳ್ಳಿ ಕೆರೆಯ ಅಭಿವೃದ್ಧಿಗೆ ಪರಿಶೀಲನೆ

**ದಾವಣಗೆರೆ:** ಮಾಯಕೊಂಡ ಗ್ರಾಮದ ಸುಮಾರು 300 ಎಕರೆ ವಿಸ್ತೀರ್ಣ ಹೊಂದಿರುವ, ಬ್ರಿಟೀಷರ ಕಾಲದಲ್ಲಿ ಅಭಿವೃದ್ಧಿ ಪಡಿಸಲ್ಪಟ್ಟಿರುವ ಕೆಂಚಮಾರನಹಳ್ಳಿ ಕೆರೆಯು ಹೂಳು ತುಂಬಿದ್ದು ಇದನ್ನು ಪುನರುಜ್ಜೀವನಗೊಳಿಸಲು ಉದ್ದೇಶಿಸಲಾಗಿದೆ ಎಂದು ಶಾಸಕರಾದ ಕೆ.ಎಸ್.ಬಸವಂತಪ್ಪ ತಿಳಿಸಿದರು.

ಸೋಮವಾರ ಶಾಸಕರು, ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ ವಿಠ್ಠಲ್ ರಾವ್ ಅವರು ಕೆರೆಗೆ ಭೇಟಿ ನೀಡಿ ಪರಿಶೀಲಿಸಿದರು.



ಪರಿಶೀಲನಾ ವೇಳೆ, ಕೆರೆಯ ಹೂಳು ತೆಗೆಯುವುದು, ನೀರಿನ ಸಂಗ್ರಹ

ಸಾಮರ್ಥ್ಯವನ್ನು ಹೆಚ್ಚಿಸುವುದು, ಹಾಗೂ ಪರಿಸರ ಸುಧಾರಣೆ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಅಧಿಕಾರಿಗಳು ಚರ್ಚಿಸಿ ಅಗತ್ಯ ಸೂಚನೆಗಳನ್ನು ನೀಡಿದರು. ಕೆರೆಯ ಪುನಶ್ಚೇತನದಿಂದ ಕೃಷಿ ಕ್ಷೇತ್ರಕ್ಕೆ ಮಹತ್ವದ ನೆರವು ಲಭಿಸಲಿದೆ ಎಂಬ ಅಭಿಪ್ರಾಯ ಗ್ರಾಮಸ್ಥರಲ್ಲಿ ವ್ಯಕ್ತವಾಯಿತು.ದ್ವಿಪಥ ರಸ್ತೆ ಕಾಮಗಾರಿಯನ್ನು ತಕ್ಷಣ ಪುನರಾರಂಭಿಸಲು, ಹಾಗೆಯೇ ರಸ್ತೆ ಒತ್ತುವರಿ ತೆರವು ಕಾರ್ಯವನ್ನು ತ್ವರಿತಗೊಳಿಸಲು ಶಾಸಕರು ಹಾಗೂ ಅಧಿಕಾರಿಗಳವರು ಸ್ಪಷ್ಟ ನಿರ್ದೇಶನಗಳನ್ನು ನೀಡಿದರು.

## ಪಿಎಂ ಸ್ವನಿಧಿ ಯೋಜನೆಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಸಾಲಿನ ಕೇಂದ್ರ ಪುರಸ್ಕೃತ ಯೋಜನೆಯಾದ ಡೇ–ನಲ್ಮ್ ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನದ ಉಪಘಟಕವಾದ ಪಿ.ಎಂ. ಸ್ವನಿಧಿ ಯೋಜನೆಯಡಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಬೀದಿ ಬದಿ ವ್ಯಾಪಾರಸ್ಥರು, ಸಾರ್ವಜನಿಕ ಸ್ಥಳಗಳಲ್ಲಿ ಹಾಲು ಮಾರಾಟಗಾರರು, ದಿನಪತ್ರಿಕೆ ಹಾಕುವವರು, ಅಸಕ್ತ ಸಾರ್ವಜನಿಕರು ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಪುಸ್ತಕ, ಹಾಗೂ ಪಾನ್ ಕಾರ್ಡ್ ದಾಖಲಾತಿಗಳೊಂದಿಗೆ ಪಾಲಿಕೆಯ ನಗರ ಬಡತನ ನಿವಾರಣಾ ಕೋಶ, ನಲ್ಮ್ ಶಾಖೆ(ಎಸ್.ಜೆ.ಎಸ್.ಆರ್.ವೈ ಕೆಂಪು ಕಟ್ಟಡ) ಮಹಾಪಾಲಿಕೆ ದಾವಣಗೆರೆ ಇಲ್ಲಿಗೆ ಸಲ್ಲಿಸಬೇಕೆಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ.

## ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಸಾಲಿನ ಸಾಲಿನ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಉದ್ಯೋಗಿನಿ, ಚೇತನಾ, ಧನಶ್ರೀ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ ಹಾಗೂ ಮಾಜಿ ದೇವದಾಸಿ ಪುನರ್ವಸತಿ ಯೋಜನೆಗಳಡಿ ಮಹಿಳಾ ಫಲಾನುಭವಿಗಳಿಗೆ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ಗ್ರಾಮಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಸೇವಾ ಸಿಂಧು ಪೋರ್ಟಲ್ https://sevasindhu.karnataka.gov.in ಡಿಸೆಂಬರ್ 15 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಹಾಗೂ ಉಪನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಎಂ.ಸಿ.ಸಿ."ಬಿ" ಬ್ಲಾಕ್, ಕುವೆಂಪು ನಗರ, 14 ನೇ ಮುಖ್ಯರಸ್ತೆ, ದಾವಣಗೆರೆ ಸಂಪರ್ಕಿಸಲು ಇಲಾಖೆಯ ಉಪನಿರ್ದೇಶಕರಾದ ರಾಜಾನಾಯ್ಕ ತಿಳಿಸಿದ್ದಾರೆ.

## ಆಧುನಿಕ ಕೋಳಿ ಸಾಕಾಣಿಕೆ ತರಬೇತಿ

**ದಾವಣಗೆರೆ:** ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ನವಂಬರ್ 19 ಮತ್ತು 20 ರಂದು ಆಧುನಿಕ ಕೋಳಿ ಸಾಕಾಣಿಕೆ ತರಬೇತಿಯನ್ನು ಆಯೋಜಿಸಲಾಗಿದೆ.

ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್‌ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ತರಬೇತಿಯು ದಾವಣಗೆರೆ ಜಿಲ್ಲೆಯ ರೈತರಿಗೆ ಮಾತ್ರ ಸೀಮಿತವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192–233787 ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

## ನವಂಬರ್ ಮಾಹೆಯ ಆಹಾರ ಧಾನ್ಯ ಹಂಚಿಕೆ

**ದಾವಣಗೆರೆ :** ನವಂಬರ್ ಮಾಹೆಗೆ ನ್ಯಾಮತಿ ತಾಲ್ಲೂಕಿನ ಪಡಿತರ ಚೀಟಿದಾರರಿಗೆ ಪಡಿತರ ಹಂಚಿಕೆ ಮಾಡಲಾಗಿದೆ.

ಅಂತ್ಯೋದಯ ಕಾದಾರರಿಗೆ 1 ರಿಂದ 3 ಸದಸ್ಯರಿರುವ ಪ್ರತಿ ಕಾರ್ಡಿಗೆ 14 ಕೆ.ಜಿ ಅಕ್ಕಿ, 4 ಸದಸ್ಯರಿರುವ ಪ್ರತಿ ಕಾರ್ಡಿಗೆ 19 ಕೆ.ಜಿ ಅಕ್ಕಿ, 5 ಸದಸ್ಯರಿರುವ ಪ್ರತಿ ಕಾರ್ಡಿಗೆ 29 ಕೆ.ಜಿ ಅಕ್ಕಿ, 6 ಸದಸ್ಯರಿರುವ ಪ್ರತಿ ಕಾರ್ಡಿಗೆ 39 ಕೆ.ಜಿ ಅಕ್ಕಿ, 7 ಸದಸ್ಯರಿರುವ ಪ್ರತಿ ಕಾರ್ಡಿಗೆ 49 ಕೆ.ಜಿ ಅಕ್ಕಿ, 8 ಸದಸ್ಯರಿರುವ ಪ್ರತಿ ಕಾರ್ಡಿಗೆ 59 ಕೆ.ಜಿ ಅಕ್ಕಿ, 9 ಸದಸ್ಯರಿರುವ ಪ್ರತಿ ಕಾರ್ಡಿಗೆ 69 ಕೆ.ಜಿ ಅಕ್ಕಿ, 10 ಸದಸ್ಯರಿರುವ ಪ್ರತಿ ಕಾರ್ಡಿಗೆ 79 ಕೆ.ಜಿ ಅಕ್ಕಿಯನ್ನು ಉಚಿತವಾಗಿ ನೀಡಲಾಗುವುದು. ರಾಗಿಯನ್ನು ಪ್ರತಿ ಪಡಿತರ ಚೀಟಿಗೆ 21 ಕೆ.ಜಿ ನೀಡಲಾಗುವುದು.

ಆದ್ಯತಾ ಪಡಿತರ ಚೀಟಿದಾರರಿಗೆ ಪ್ರತಿಯೊಬ್ಬ ಸದಸ್ಯರಿಗೆ 10 ಕೆಜಿ ಅಕ್ಕಿ, ಮಾತ್ರ ನೀಡಲಾಗುತ್ತಿದ್ದು, ರಾಗಿ ಹಂಚಿಕೆ ಇರುವುದಿಲ್ಲ. ಪೋಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ಅಂತರ್ ರಾಜ್ಯ, ಜಿಲ್ಲೆಯ ಪಡಿತರ ಚೀಟಿಗಳಿಗೆ ಯಾವುದೇ ನ್ಯಾಯಬೆಲೆ ಅಂಗಡಿಗಳಲ್ಲಿ ಉಚಿತವಾಗಿ ಪಡೆಯಲು ಅವಕಾಶವಿರುತ್ತದೆ ಎಂದು ನ್ಯಾಮತಿ ತಹಶೀಲ್ದಾರ್ ತಿಳಿಸಿದ್ದಾರೆ.

**ನೊಂದವರಿಗೆ ನೆರವು – ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಮಹತ್ತರ ಪಾತ್ರ**

## ಜಿಲ್ಲಾ ಪಂಚಾಯತ್‌ನಲ್ಲಿ ಕಲಾಪ, ವಿವಿಧ ಸ್ಥಳಗಳಿಗೆ ಭೇಟಿ ಪರಿಶೀಲನೆ

**ದಾವಣಗೆರೆ:** ಮಾನವ ಹಕ್ಕುಗಳ ಸಂರಕ್ಷಣೆ ಹಾಗೂ ಮಾನವ ಹಕ್ಕುಗಳ ಉಲ್ಲಂಘನೆ ಪ್ರಕರಣಗಳಲ್ಲಿ ನೊಂದವರಿಗೆ ಸೂಕ್ತ ನೆರವನ್ನು ಒದಗಿಸುವ ನಿಟ್ಟಿನಲ್ಲಿ 1993ರ ಮಾನವ ಹಕ್ಕುಗಳ ಸಂರಕ್ಷಣಾ ಅಧಿನಿಯಮದ ಅಡಿಯಲ್ಲಿ ಸ್ಥಾಪಿತವಾಗಿದೆ.

ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗವು 2025 ನೇ ನವೆಂಬರ್ 20 ರಂದು ಮಧ್ಯಾಹ್ನ 12 ರಿಂದ 2 ಗಂಟೆಯವರೆಗೆ ದಾವಣಗೆರೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಗದಲ್ಲಿ ಬಾಕಿ ಇರುವ ಪ್ರಕರಣಗಳ ಕುರಿತು ಕಲಾಪ ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಂವಾದ ನಡೆಸಲಿದೆ.

ದಾವಣಗೆರೆ ಜಿಲ್ಲೆಗೆ ಸಂಬಂಧಿಸಿದಂತೆ ಆಯೋಗದಲ್ಲಿ ನೋಂದಣಿಯಾಗಿರುವ ಪ್ರಕರಣಗಳನ್ನು ಇಲ್ಲಿಯೇ ಇತ್ಯರ್ಥಪಡಿಸಿ, ವಿಲೇ ಮಾಡಿ ಕ್ರಮ ಜರುಗಿಸಲು ಉದ್ದೇಶಿಸಲಾಗಿದೆ. ದೂರುದಾರರು ಹಾಗೂ ಪ್ರತಿವಾದಿ ಪ್ರಾಧಿಕಾರಗಳು ಸದುಪಯೋಗಪಡಿಸಿಕೊಳ್ಳಬಹುದು.

ಸಾರ್ವಜನಿಕರು ಆಯೋಗದ ಮಾನ್ಯ ಅಧ್ಯಕ್ಷರಾದ ಟಿ.ಶಾಮ್ ಭಟ್ ಹಾಗೂ ಸದಸ್ಯರಾದ ಎಸ್.ಕೆ.ವಂಟಿಗೋಡಿ ಇವರನ್ನು ಜಿಲ್ಲಾ ಪಂಚಾಯತ್‌ನಲ್ಲಿ ಭೇಟಿ ಮಾಡಿ ದೂರುಗಳನ್ನು ಸಲ್ಲಿಸಬಹುದಾಗಿದೆ.

ದಾವಣಗೆರೆ ಪ್ರವಾಸಿ ಮಂದಿರಕ್ಕೆ ನ.19 ರಂದು ರಾತ್ರಿ 8 ಗಂಟೆಗೆ ಆಗಮಿಸಿ ವಾಸ್ತವ್ಯ ಹೂಡುವರು.20 ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 12 ಮತ್ತು ಮಧ್ಯಾಹ್ನ 3 ರಿಂದ ಸಂಜೆ 6 ರವರೆಗೆ ವಿವಿಧ ಸ್ಥಳೀಯ ಭೇಟಿ ನೀಡಿ ಸಂಜೆ 6 ಗಂಟೆಗೆ ಬೆಂಗಳೂರಿಗೆ ತೆರಳುವರು.

## ಪೂಜ್ಯ ಶ್ರೀಗಳಿಂದ ಶ್ರೀ ಸೋಮೇಶ್ವರ ಸ್ವಾಮಿಗೆ ಕಾರ್ತಿಕ ದೀಪೋತ್ಸವ



**ಶಿವಮೊಗ್ಗ:** ಶ್ರೀ ಆದಿಚುಂಚನ ಗಿರಿ ಶಿಕ್ಷಣ ಟ್ರಸ್ಟ್ ಶಿವಮೊಗ್ಗ ಶಾಖೆಯ ಹೊರವಲಯದ ಗುರುಪುರದ ಪುರಾತನ ಕಾಲದ"ಶ್ರೀ ವೀರಸೋಮೇಶ್ವರಸ್ವಾಮಿ ದೇವಾಲಯ" ದಲ್ಲಿ ಕಾರ್ತಿಕ ಮಾಸದ ಪ್ರಯುಕ್ತ ಆಯೋಜಿಸಲಾಗಿದ್ದ ಪಂಚಾಮೃತ ಅಭಿಷೇಕ, ವಿಶೇಷ ಪೂಜಾ ಕೈಂಕರ್ಯಗಳನ್ನು ಶ್ರೀ ಆದಿಚುಂಚನಗಿರಿ ಶಾಖಾ ಮಠದ ಪೂಜ್ಯಶ್ರೀ ಶ್ರೀ ನಾದಮಯಾನಂದನಾಥ ಸ್ವಾಮೀಜಿಯವರ ದಿವ್ಯ ಸಾನಿಧ್ಯದಲ್ಲಿ ನೆರವೇರಿತು.

ನಿನ್ನೆ ಸಂಜೆ ಕಾರ್ತಿಕ ದೀಪೋತ್ಸವ ಕಾರ್ಯಕ್ರಮವನ್ನು ಆಯೋಜಿಸಿದ್ದು ಕಾರ್ಯಕ್ರಮದಲ್ಲಿ ಪೂಜ್ಯರು, ಪತ್ರಕರ್ತರಾದ ಸಂತೋಷ್ ಕಾಚಿನಕಟ್ಟೆ ಯವರು ದೀಪ ಬೆಳಗಿಸುವುದರ ಮೂಲಕ ಕಾರ್ತಿಕೋತ್ಸವಕ್ಕೆ ಚಾಲನೆ ನೀಡಿದರು. ಈ ಪೂಜಾ ಕಾರ್ಯಕ್ರಮದಲ್ಲಿ ಗಣ್ಯರು, ಪ್ರಾಂಶುಪಾಲರು, ಸಿಬ್ಬಂದಿ ವರ್ಗದವರು, ಪೋಷಕರು,ಶ್ರೀಮಠದ ಸದ್ಭಕ್ತರು ಉಪಸ್ಥಿತರಿದ್ದರು.

## ಸಂತಾನಹರಣ ಶಸ್ತ್ರಚಿಕಿತ್ಸೆಗೆ ಒಳಪಡಿಸಿ ಬೀದಿನಾಯಿಗಳನ್ನು ಸೂಕ್ತ ಸ್ಥಳಕ್ಕೆ ಬಿಡಲು ಕ್ರಮ

**ಚಿಕ್ಕಮಗಳೂರು:** ಯಾವುದೇ ಸಂಸ್ಥೆಗಳ ಆವರಣದಲ್ಲಿ ಕಂಡು ಬರುವ ಪ್ರತಿಯೊಂದು ಬೀದಿ ನಾಯಿಗಳನ್ನು ಸಂತಾನಹರಣ ಚಿಕಿತ್ಸೆಗೆ ಒಳಪಡಿಸಿ ಅವುಗಳನ್ನು ಗೊತ್ತುಪಡಿಸಿದ ಪ್ರದೇಶಗಳಿಗೆ ಸ್ಥಳಾಂತರಿಸಬೇಕು; ಸಾರ್ವಜನಿಕ ಹಿತದೃಷ್ಟಿಯಿಂದ ಅಧಿಕಾರಿಗಳು ತಮ್ಮ ಕರ್ತವ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್ ತಿಳಿಸಿದರು.

ಇಂದು ನಗರದ ಜಿಲ್ಲಾ ಪಂಚಾಯಿತಿ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಬೀದಿ ನಾಯಿಗಳ ಹಾವಳಿ ತಡೆಗಟ್ಟುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ಆದೇಶಗಳ ಅನುಷ್ಠಾನ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸ್ವಚ್ಛತೆ ಮತ್ತು ನಾಯಿ ಪ್ರವೇಶ ತಡೆಗಟ್ಟುವಿಕೆಗೆ ನೋಡಲ್ ಅಧಿಕಾರಿಯನ್ನು ನೇಮಿಸಿ ಪ್ರವೇಶ ದ್ವಾರದಲ್ಲಿ ಸಂಪರ್ಕ ವಿವರ ಪ್ರದರ್ಶಿಸಿ ಮತ್ತು ಸ್ಥಳೀಯ ಸಂಸ್ಥೆಗೆ ತಿಳಿಸಬೇಕು. ಶಿಕ್ಷಣ ಇಲಾಖೆಯು ಆರೋಗ್ಯ ಇಲಾಖೆ ಹಾಗೂ ಪಶುಪಾಲನಾ ಇಲಾಖೆಯ ಸಹಯೋಗದೊಂದಿಗೆ ಶಾಲಾ ಕಾಲೇಜು ಹಾಗೂ ವಸತಿ ಶಾಲೆಗಳಲ್ಲಿ ರೇಬಿಸ್ ರೋಗದ ಕುರಿತು ಅರಿವು ಮೂಡಿಸಬೇಕು ಎಂದ ಅವರು, ನಾಯಿ ಕಡಿತಕ್ಕೆ ಪ್ರಥಮ ಚಿಕಿತ್ಸೆ ಒದಗಿಸುವ ಬಗ್ಗೆ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ಜಾಗೃತಿ ಮೂಡಿಸುವಂತೆ ಸೂಚಿಸಿದರು.

ಶಾಲಾ ಆವರಣ, ಅಂಗನವಾಡಿ ಆವರಣ, ಕ್ರೀಡಾ ಸಂಕೀರ್ಣ ಮತ್ತು ಕ್ರೀಡಾಂಗಣಗಳಲ್ಲಿ ಬೀದಿ ನಾಯಿಗಳ ಪ್ರವೇಶಿಸದಂತೆ ಎಚ್ಚರಿಕೆ ವಹಿಸಬೇಕು. ಭದ್ರತಾ ಸಿಬ್ಬಂದಿಯನ್ನು ನಿಯೋಜಿಸುವಂತೆ ತಿಳಿಸಿದ ಅವರು, ಬೇಲಿ, ಗಡಿ ಗೋಡೆಗಳು, ದ್ವಾರಗಳು ಮತ್ತು ಬೀದಿ ನಾಯಿಗಳ ಪ್ರವೇಶವನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳ ಕುರಿತು ಖಚಿತಪಡಿಸಿಕೊಂಡು ವರದಿ ನೀಡಬೇಕು. ಎಲ್ಲಾ ಕಡೆಗಳಲ್ಲಿ ರೇಬಿಸ್ ವಿರೋಧಿ ಲಸಿಕೆ ಮತ್ತು ಇಮ್ಯುನೊಗ್ಲೋಬಿನ್‌ನ ಕಡ್ಡಾಯ ದಾಸ್ತಾನು ಇರುವಂತೆ ನೋಡಿಕೊಳ್ಳಬೇಕು. ರಾಷ್ಟ್ರೀಯ, ರಾಜ್ಯ ಹೆದ್ದಾರಿಗಳು ಮತ್ತು ನಗರ ಪ್ರದೇಶಗಳಲ್ಲಿ ಬಿಡಾಡಿ ದನಗಳು ಮತ್ತು ಬೀದಿ ಪ್ರಾಣಿಗಳನ್ನು ಗಮನಿಸಿ ಅವುಗಳನ್ನು ರಕ್ಷಿಸಿ ಗೊತ್ತುಪಡಿಸಿದ ಸ್ಥಳಗಳಿಗೆ ಸ್ಥಳಾಂತರಿಸುವಂತೆ ತಿಳಿಸಿದರು.ಬಸ್ ನಿಲ್ದಾಣದಲ್ಲಿರುವ ಅಂಗಡಿಗಳ ಮಾಲೀಕರು ಮತ್ತು ಸಾರ್ವಜನಿಕರು ತಿಂಡಿ ಪ್ಯಾಕೇಟ್ ಮುಂತಾದವುಗಳನ್ನು ಕಸದ ಬುಟ್ಟಿಗೆ ಹಾಕಬೇಕು. ಜೊತೆಗೆ ಶಾಲೆಯಲ್ಲಿ ನೀಡುವ ಬಿಸಿ ಊಟವನ್ನು ವಿದ್ಯಾರ್ಥಿಗಳು ಎಸೆಯುವುದರಿಂದ ಶಾಲೆ ಆವರಣಗಳಲ್ಲಿ ಬೀದಿ ನಾಯಿಗಳು ಹೆಚ್ಚಾಗಿರಲು ಕಾರಣ. ಈ ಬಗ್ಗೆ ಶಿಕ್ಷಣ ಇಲಾಖೆ ಅಧಿಕಾರಿಗಳು ಗಮನ ಹರಿಸಿ ಪರ್ಯಾಯ ವ್ಯವಸ್ಥೆ ಕಲ್ಪಿಸಲು ಹೇಳಿದರು.



ಬೀದಿ ನಾಯಿಗಳಿಗೆ ಎಲ್ಲಿ ಬೇಕೆಂದರಲ್ಲಿ ಆಹಾರವನ್ನು ನೀಡಿದರೆ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು. ಕಸ ಸಂಗ್ರಹಣೆ ಇರುವ ಸ್ಥಳದಲ್ಲಿ ಬೀದಿ ನಾಯಿಗಳು ಇರುವುದು ಹೆಚ್ಚು, ರಸ್ತೆಯಲ್ಲಿರುವ ಕಸವನ್ನು ಆದಷ್ಟು ಬೇಗ ವಿಲೇವಾರಿ ಮಾಡುವಂತೆ ತಿಳಿಸಿದ ಅವರು. ಜನರಿಗೆ ಬೀದಿ ನಾಯಿಗಳ ಹಾವಳಿ ತಡೆಗಟ್ಟುವ ಸಂಬಂಧ ಅರಿವು ಮೂಡಿಸಬೇಕು. ಕಸವನ್ನು ಎಲ್ಲೆಂದರಲ್ಲಿ ಎಸೆಯದೆ ಕಸದ ವಾಹನಕ್ಕೆ ಹಾಕಲು ಸಾರ್ವಜನಿಕರಿಗೆ ತಿಳಿ ಹೇಳಬೇಕು ಎಂದರು.

ಸಭೆಯಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹೆಚ್.ಎಸ್. ಕೀರ್ತನಾ, ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಸಿ.ಟಿ.ಜಯಕುಮಾರ್, ಪಶುಪಾಲನಾ ಇಲಾಖೆಯ ಉಪನಿರ್ದೇಶಕ ಸಡಾ. ಮಹೇಶ್, ವಿವಿಧ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

## ದೇಶಿ ಮತ್ತು ಮಿಶ್ರ ಹೈನು ತಳಿಗಳ ವೈಜ್ಞಾನಿಕ ಪಾಲನೆ ಮತ್ತು ಪೋಷಣೆ ಕುರಿತಾದ ತರಬೇತಿ

**ಶಿವಮೊಗ್ಗ:** ಗ್ರಾಮೀಣ ಪ್ರದೇಶದ ರೈತರು / ರೈತ ಮಹಿಳೆಯರು / ನಿರುದ್ಯೋಗ ಯುವಕ ಯುವತಿಯರಿಗೆ, ಪಶು ವೈದ್ಯಕೀಯ ಮಹಾವಿದ್ಯಾಲಯ, ಶಿವಮೊಗ್ಗ ಇವರ ವತಿಯಿಂದ ನ. 21 ರಂದು ದೇಶಿ ಮತ್ತು ಮಿಶ್ರ ಹೈನು ತಳಿಗಳ ವೈಜ್ಞಾನಿಕ ಪಾಲನೆ ಮತ್ತು ಪೋಷಣೆ ಕುರಿತಾಗಿ 1 ದಿನದ ಉಚಿತ ತರಬೇತಿ ಕಾರ್ಯಕ್ರಮವನ್ನು ಮಲೆನಾಡು ಗಿಡ್ಡ ತಳಿ ಸಂಶೋದನ ಮತ್ತು ಮಾಹಿತಿ ಕೇಂದ್ರ, ಜಾನುವಾರು ಸಾಕಾಣಿಕ ಸಂಕೀರ್ಣ, ಪಶುವೈದ್ಯಕೀಯ ಮಹಾವಿದ್ಯಾಲಯದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.ಈ ತರಬೇತಿಯಲ್ಲಿ ದೇಶಿ ಹಸು ತಳಿಗಳು, ಹಸುಗಳ ಕೊಟ್ಟಿಗೆ ನಿರ್ಮಾಣ, ಹಸುಗಳ ಆಹಾರ ನಿರ್ವಹಣೆ, ಸಂತಾನೋತ್ಪತ್ತಿ, ರೋಗಗಳು, ಮಾರುಕಟ್ಟೆ ಮುಂತಾದ ವಿಷಯಗಳ ಬಗ್ಗೆ ಮಾಹಿತಿ ಪ್ರಧಾನ ಮತ್ತು ಪ್ರಾತ್ಯಕ್ಷತೆಯನ್ನು ಹಮ್ಮಿಕೊಳ್ಳಲಾಗುವುದು.ಆಸಕ್ತಿಯುಳ್ಳವರು ತಮ್ಮ ಹೆಸರನ್ನು ನ. 20 ರೊಳಗೆ ನೋಂದಾಯಿಸಿಕೊಳ್ಳುವುದು. ತರಬೇತಿಯಲ್ಲಿ 25 ಶಿಬಿರಾರ್ಥಿಗಳಿಗೆ ಅವಕಾಶವಿದ್ದು, ಮೊದಲು ಹೆಸರು ನೊಂದಾಯಿಸಿದವರಿಗೆ ಆದ್ಯತೆ ನೀಡಲಾಗುವುದು ಎಂದು ಕಾಲೇಜಿನ ಡೀನ್ ಡಾ. ಎನ್. ಪ್ರಕಾಶ್ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಸಾರ್ವಜನಿಕ ಸ್ಥಳಗಳಲ್ಲಿ ಬೀದಿ ನಾಯಿ ವಾಸವಿದ್ದರೆ ಮಾಹಿತಿ ಕೊಡಿ

**ದಾವಣಗೆರೆ :** ಹರಿಹರ ನಗರಸಭೆ ವ್ಯಾಪ್ತಿಯಲ್ಲಿನ ಬೀದಿ ನಾಯಿಗಳ ಉಪಟಳ ತಡೆಯಲು ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು, ಖಾಸಗಿ ಮತ್ತು ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣ, ಬಸ್ ನಿಲ್ದಾಣ, ರೈಲ್ವೇ ನಿಲ್ದಾಣಗಳಲ್ಲಿ ಯಾವುದೇ ಬೀದಿ ನಾಯಿಗಳು ವಾಸವಿದ್ದಲ್ಲಿ ಮಾಹಿತಿಯನ್ನು ಹರಿಹರ ಪೌರಾಯುಕ್ತರಿಗೆ ನೀಡಲು ತಿಳಿಸಲಾಗಿದೆ.

## ರಾಜ್ಯೋತ್ಸವ ಸಂಭ್ರಮ : ಆಸಕ್ತರಿಗೆ ಆಹ್ವಾನ

**ದಾವಣಗೆರೆ** : ತಿಂಗಳ ಅಂಗಳ ಸಾಹಿತ್ಯ – ಸಾಂಸ್ಕೃತಿಕ ಬಳಗ ಹಾಗೂ ದಾವಣಗೆರೆ ವಿ ಒನ್ ಕಾವ್ಯಧಾರೆಯ ಸಂಯುಕ್ತಾಶ್ರಯದಲ್ಲಿ

ದಿನಾಂಕ : 30.11.2025 ರ ಭಾನುವಾರ ಬೆಳಿಗ್ಗೆ 10 ಗಂಟೆಗೆ ತಿಂಗಳ ಅಂಗಳ ಕಾರ್ಯಕ್ರಮ " ರಾಜ್ಯೋತ್ಸವ ಸಂಭ್ರಮ " ಶೀರ್ಷಿಕೆಯಡಿ ನಡೆಯಲಿದೆ.

" ಕಾಳಿದಾಸ ವೃತ್ತದ ಹತ್ತಿರ. ಸರಸ್ವತಿ ನಗರದ ಬೀರೇಶ್ವರ ಬಡಾವಣೆಯ 14 ನೇ ಕ್ರಾಸ್ , 1 ನೇ ಮೇನ್ ನಲ್ಲಿರುವ " ಪ್ರತಿಕ್ಷ " ನಿಲಯ ದಲ್ಲಿ ನಡೆಯಲಿರುವ ಈ ಕಾರ್ಯಕ್ರಮ ವಿ ಒನ್ ಕಾವ್ಯಧಾರೆಯ ವಿಶೇಷ ಸಂಚಿಕೆಯಾಗಿ ಪ್ರಸಾರವಾಗಲಿದೆ. ದಿನಾಂಕ : 22.11.2025 ರ ಒಳಗೆ ಮೊ.ಸಂ : 8867702396 ಗೆ ವಾಟ್ಸಪ್ಪ್ ಮೂಲಕ ನಿಮ್ಮ ಹೆಸರು & ಪ್ರಕಾರ ನೋಂದಾಯಿಸಿಕೊಳ್ಳುವುದು ಕಡ್ಡಾಯ. ಸೂಚನೆ : ಈ ಕೆಳಗಿನ ಒಂದು ಅಂಶವನ್ನು ಮಾತ್ರ ಆಯ್ದುಕೊಳ್ಳಿ : 1. ಕನ್ನಡ ನಾಡು, ನುಡಿ, ವೈಭವ, ಕಲೆ, ವಾಸ್ತುಶಿಲ್ಪ, ಪರಂಪರೆ ಇತ್ಯಾದಿ ಕುರಿತು ಕವನ ವಾಚನ. ( 16 ರಿಂದ 18 ಸಾಲುಗಳು ಮಾತ್ರ )2. ಕೀರ್ತನೆ ಅಥವಾ ತತ್ವಪದ ಅಥವಾ ವಚನ ಗಾಯನ.3. ಕನ್ನಡ ನಾಡು – ನುಡಿ – ವೈಭವ ಸಾರುವ ಭಾವಗೀತೆ ( ಸಂಗೀತ ಗೊತ್ತಿರುವ ಅಥವಾ ರಾಗಬದ್ಧವಾಗಿ ಹಾಡುವವರು ಮಾತ್ರ ಆಯ್ದುಕೊಳ್ಳಿ )4. ಕನ್ನಡ ಜಾನಪದ, ಲಾವಣಿ, ಗೀಗಿ ಪದ ( ನಿರ್ದಿಷ್ಟವಾಗಿ ಈ ಪ್ರಕಾರಗಳ ಪರಿಚಯ ಇರುವವರಿಗೆ ಮಾತ್ರ )5. ಕವಿ – ಕಾವ್ಯ ಪರಿಚಯ ( ಒಬ್ಬ ಕವಿ ಬಗ್ಗೆ ಮಾತ್ರ )6. ಕನ್ನಡ ಗಾದೆ ಮಾತು, ಒಗಟು, ಒಡಪು, ನುಡಿಗಟ್ಟು ( 8 ರಿಂದ 10 ಮಾತ್ರ )7. ಗಜಲ್ ಅಥವಾ ಚುಟುಕು ಅಥವಾ ಹಾಯ್ಕುಗಳು ( ನಿರ್ದಿಷ್ಟವಾಗಿ ಈ ಪ್ರಕಾರಗಳ ಪರಿಚಯ ಇರುವವರು ಮಾತ್ರ ಭಾಗವಹಿಸಬಹುದು






## ಆನ್‌ಲೈನ್ ಪಾಡ್‌ಕಾಸ್ಟ್ ವಿಡಿಯೋ ಸಂವಾದ ಕಾರ್ಯಕ್ರಮ

**ಶಿವಮೊಗ್ಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ಸಹಯೋಗದೊಂದಿಗೆ ನ.14 ರಂದು ಇನ್‌ಸ್ಪೈರ್ ಎಂಬ ವಿನೂತನ ಕಾರ್ಯಕ್ರಮದಡಿ ಇಗ್ನೈಟ್ ಮೈಂಡ್ & ಇಗ್ನೈಟ್ ಪಾಸಿಟಿವಿಟಿ ಎಂಬ ಘೋಷವಾಕ್ಯದೊಂದಿಗೆ ಆನ್‌ಲೈನ್ ಪಾಡ್‌ಕಾಸ್ಟ್ ಕಾರ್ಯಕ್ರಮ ಏರ್ಪಡಿಸಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಜಿಲ್ಲೆಯ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಅಲ್ಪಸಂಖ್ಯಾತರ

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ 32 ಮುರಾರ್ಜಿ ದೇಸಾಯಿ ವಸತಿ ಶಾಲೆಗಳು ಮತ್ತು 150 ವಿದ್ಯಾರ್ಥಿ



ನಿಲಯಗಳ 5 ನೇ ತರಗತಿಯಿಂದ ಪದವಿ/ಇಂಜಿನಿಯರಿಂಗ್/ಸ್ನಾತಕೋತ್ತರ ಓದುತ್ತಿರುವ ಸುಮಾರು 20 ರಿಂದ 22 ಸಾವಿರ ವಿದ್ಯಾರ್ಥಿಗಳೊಂದಿಗೆ ವಿಡಿಯೋ ಸಂವಾದದ ಮೂಲಕ ಶ್ರೀನಾಥ ರತ್ನಕುಮಾರ್‌ರವರು ಉಪಗ್ರಹದ ಉಪಯೋಗಗಳು, ಬಾಹ್ಯಾಕಾಶ ಕಲ್ಪನೆ ಮತ್ತು ವಿಸ್ತಾರ, ಮಾನವಸಹಿತ ಬಾಹ್ಯಾಕಾಶ ಯಾನಕ್ಕೆ ಏನೆಲ್ಲಾ ಬೇಕು, ರಾಕೆಟ್ ವಿಜ್ಞಾನದ ಇತಿಹಾಸ, ಬಾಹ್ಯಾಕಾಶ ಉಡುಪುಗಳು ಮತ್ತು ಅಪಘಾತಗಳು, ದೇಹದ ಮೇಲೆ ಉಂಟಾಗುವ ಪರಿಣಾಮಗಳು, ಅಂತಿಕ್ಷ ಯಾನದ ಆಹಾರ, ಅಂತರಿಕ್ಷದ ಕೃಷಿ, ಯಾನದ ತರಬೇತಿ,

ನೌಕೆಗಳ ಅಭಿವೃದ್ಧಿ, ರಾಕೆಟ್‌ಗಳ ಮರುಬಳಕೆ, ಬಾಹ್ಯಾಕಾಶ ತಂತ್ರಜ್ಞಾನ ಬೆಳೆದು ಬಂದ ದಾರಿ, ಇಸ್ರೋ, ನಾಸಾ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನದ ಕುರಿತು ವಿವರಣೆ ನೀಡಿದರು.

ಈ ಆನ್‌ಲೈನ್ ಪಾಡ್‌ಕಾಸ್ಟ್ ವಿಡಿಯೋ ಸಂವಾದದಲ್ಲಿ ಜಿ.ಪಂ ಸಿಇಓ ಹೇಮಂತ್ ಎನ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶ್ರೀನಿವಾಸ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಮಲ್ಲೇಶಪ್ಪ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಶೋಭಾ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರೀತಿ ಭಾಗವಹಿಸಿದ್ದರು.

## ಚಿಕ್ಕಮಗಳೂರು ಸೇರಿ ಎಲ್ಲ ಜಿಲ್ಲೆಗಳಿಗೂ ಶೀಘ್ರದಲ್ಲೇ ಹೊಸ ಬಸ್‌ಗಳ ವ್ಯವಸ್ಥೆ

# ಚಿಕ್ಕಮಗಳೂರು-ಮೈಸೂರು ನಡುವೆ ಹೈಟೆಕ್ ಬಸ್ ವ್ಯವಸ್ಥೆ-ಸ್ಕೈವಾಕ್ ನಿರ್ಮಾಣ: ರಾಮಲಿಂಗಾರೆಡ್ಡಿ

**ಚಿಕ್ಕಮಗಳೂರು, ನ.18:** ಚಿಕ್ಕಮಗಳೂರು ಸೇರಿದಂತೆ ರಾಜ್ಯದ ಎಲ್ಲ ಜಿಲ್ಲೆಗಳಿಗೂ ಹೊಸ ಬಸ್‌ಗಳನ್ನು ಒದಗಿಸುವುದಲ್ಲದೆ, ಚಿಕ್ಕಮಗಳೂರು-ಮೈಸೂರು ನಡುವೆ ಎರಡು ವೋಲ್ವೋ ಬಸ್‌ಗಳ ವ್ಯವಸ್ಥೆ ಕಲ್ಪಿಸುವುದಾಗಿಯೂ, ಇಲ್ಲಿನ ಉಭಯ ಬಸ್ ನಿಲ್ದಾಣಗಳ ನಡುವೆ ಸ್ಕೈವಾಕ್ ವ್ಯವಸ್ಥೆಗೂ ಅನುಮೋದನೆ ನೀಡುವುದಾಗಿಯೂ ಸಾರಿಗೆ ಮತ್ತು ಮುಜರಾಯಿ ಖಾತೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.

ರಾಜ್ಯ ರಸ್ತೆ ಸಾರಿಗೆ ನಿಗಮದ ವತಿಯಿಂದ ನಗರದ ಗ್ರಾಮಾಂತರ ಬಸ್ ನಿಲ್ದಾಣದ ಆವರಣದಲ್ಲಿ ಇಂದು ಬೆಳಿಗ್ಗೆ ನೂತನ ಬಸ್ ನಿಲ್ದಾಣ ಶಂಕುಸ್ಥಾಪನೆ ಹಾಗೂ ನೂತನ ವಸತಿ ಗೃಹಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮೈಸೂರು ಹಾಗೂ ಚಿಕ್ಕಮಗಳೂರು ನಡುವೆ ವೋಲ್ವೋ ಬಸ್ ವ್ಯವಸ್ಥೆ ಕಲ್ಪಿಸಬೇಕು ಹಾಗೂ ಉಭಯ ಬಸ್ ನಿಲ್ದಾಣಗಳ ನಡುವೆ ಸ್ಕೈವಾಕ್ ನಿರ್ಮಿಸುವಂತೆ ಶಾಸಕ ಹೆಚ್.ಡಿ.ತಮ್ಮಯ್ಯ ಅವರ ಬೇಡಿಕೆಗೆ ಸ್ಪಂದಿಸಿದ ಸಚಿವರು, ಈ ಬಾರಿಯ ಬಜೆಟ್‌ನಲ್ಲಿ 2 ಸಾವಿರ ಬಸ್‌ಗಳನ್ನು ಒಟ್ಟಾರೆ ನಿಗಮಕ್ಕೆ ಒದಗಿಸಲಾಗಿದ್ದು, ಅವುಗಳಲ್ಲಿ 900 ಬಸ್‌ಗಳನ್ನು ಕೆ.ಎಸ್.ಆರ್.ಟಿ.ಸಿ.ಗೆ ನೀಡಲಾಗುವುದು. ಇನ್ನೂ ಎರಡು-ಮೂರು ತಿಂಗಳಲ್ಲಿ ಈ ಬೇಡಿಕೆ ಈಡೇರಲಿದೆ ಎಂದರು.

ಶಕ್ತಿ ಯೋಜನೆಯಡಿ ನವೆಂಬರ್ 17 ರವರೆಗೆ 600 ಕೋಟಿ ಮಹಿಳೆಯರು ಉಚಿತವಾಗಿ ಓಡಾಡಿದ್ದಾರೆ. ಇಷ್ಟೊಂದು ಕಡಿಮೆ ಅವಧಿಯಲ್ಲಿ ಇಷ್ಟೊಂದು ಪ್ರಮಾಣದಲ್ಲಿ ಮಹಿಳೆಯರು ಉಚಿತವಾಗಿ ಓಡಾಡಿದ ನಿದರ್ಶನ ಎಲ್ಲೂ ಇಲ್ಲ. ಇದಕ್ಕಾಗಿ ಅನೇಕ ಪ್ರಶಸ್ತಿಗಳು ಬಂದಿದ್ದು, ಸರ್ಕಾರದಿಂದ ಈ ವೆಚ್ಚವನ್ನು ಭರಿಸಲು 15,422 ಕೋಟಿ ರೂ.ಗಳನ್ನು ಖರ್ಚು ಮಾಡಲಾಗಿದೆ. ತಾವು ಸಚಿವರಾದ ಬಳಿಕ ಎರಡೂವರೆ ವರ್ಷಗಳ ಅವಧಿಯಲ್ಲಿ ನಿಗಮಕ್ಕೆ ಸುಮಾರು 5,800 ಬಸ್‌ಗಳನ್ನು ಖರೀದಿಸಲಾಗಿದೆ. ಹಿಂದೆ ನಾಲ್ಕು ವರ್ಷಗಳಲ್ಲಿ ನಾನಾ ಕಾರಣಗಳಿಂದ ಕೆಎಸ್‌ಆರ್‌ಟಿಸಿಯಿಂದ ಬಸ್ ಖರೀದಿಸಿರಲಿಲ್ಲ. ಈ ನಡುವೆ ನಿಗಮಕ್ಕೆ 9 ಸಾವಿರ ಸಿಬ್ಬಂದಿಯನ್ನು ಭರ್ತಿ ಮಾಡಲಾಗಿದೆ. ಒಂದು ಸಾವಿರ ಮಂದಿಯನ್ನು ಅನುಕಂಪದ ಆಧಾರದಲ್ಲಿ ನೇಮಕ ಮಾಡಲಾಗಿದೆ ಎಂದು ಹೇಳಿದರು.

ಇಲ್ಲಿನ ಒಂದೂವರೆ ಎಕರೆ ಪ್ರದೇಶದಲ್ಲಿ ಸುಮಾರು 20 ಕೋಟಿ ರೂ. ವೆಚ್ಚದಲ್ಲಿ ಹೈಟೆಕ್ ಬಸ್ ನಿಲ್ದಾಣ ನಿರ್ಮಾಣವಾಗುತ್ತಿದೆ. 14 ತಿಂಗಳಲ್ಲಿ ಈ ಕಾಮಗಾರಿ ಪೂರ್ಣಗೊಳ್ಳಲಿದೆ.



ಈ ನಿಲ್ದಾಣಕ್ಕೆ ಶಾಸಕರಾದ ಹೆಚ್.ಡಿ.ತಮ್ಮಯ್ಯ ಅವರು ಕಾರಣಕರ್ತರು. ಅಲ್ಲದೆ, ಸುಮಾರು 2.30 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಿದ 12 ವಸತಿಗೃಹಗಳನ್ನು ಉದ್ಘಾಟಿಸಲಾಗಿದೆ ಎಂದರು.

ಈಗಾಗಲೇ 9.15 ಕೋಟಿ ರೂ. ವೆಚ್ಚದಲ್ಲಿ ತರೀಕೆರೆ ಬಸ್ ನಿಲ್ದಾಣ ಹಾಗೂ 6 ಕೋಟಿ ರೂ. ವೆಚ್ಚದಲ್ಲಿ ಕಡೂರು ಬಸ್ ನಿಲ್ದಾಣ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಲಾಗಿದೆ. ಶೃಂಗೇರಿಯಲ್ಲಿ 8.82 ಲಕ್ಷ ರೂ. ವೆಚ್ಚದಲ್ಲಿ ಬಸ್ ನಿಲ್ದಾಣ ನಿರ್ಮಿಸಲು ಅನುದಾನ ಒದಗಿಸಲಾಗಿದ್ದು, ಈಗಾಗಲೇ ಕಾಮಗಾರಿ ಆರಂಭವಾಗಿದೆ. ಅಲ್ಲದೆ ಬೀರೂರಿನ ಬಸ್ ನಿಲ್ದಾಣವನ್ನು 2.5 ಕೋಟಿ ರೂ. ವೆಚ್ಚದ ಮೇಲ್ದರ್ಜೆಗೇರಿಸುವ ಕಾಮಗಾರಿಗೆ ಅನುಮೋದನೆ ನೀಡಲಾಗಿದೆ. ತರೀಕೆರೆಯಲ್ಲಿ ಬಸ್ ಘಟಕ ನಿರ್ಮಾಣಕ್ಕೆ 9 ಕೋಟಿ ರೂ.ಗಳ ಅನುಮೋದನೆ ನೀಡಲಾಗಿದೆ ಎಂದು ತಿಳಿಸಿದರು.

ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಜೆ.ಜಾರ್ಜ್ ಅವರು ಬಸ್ ನಿಲ್ದಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿ, ಮಾಜಿ ಪ್ರಧಾನಿ ಇಂದಿರಾಗಾಂಧಿಯವರಿಗೆ ರಾಜಕೀಯ ಮರುಜನ್ಮವನ್ನು ನೀಡಿದ ಜಿಲ್ಲೆ ಇದು. ಜೊತೆಗೆ ತಾವು ಕೂಡ ಈ ಜಿಲ್ಲೆಯವರೇ ಆಗಿದ್ದು, ಇನ್ನಷ್ಟು ಅಭಿವೃದ್ಧಿ ಕಾರ್ಯ ಕೈಗೊಳ್ಳಲು ತಾವು ಬದ್ಧರಾಗಿರುವುದಾಗಿ ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಹೆಚ್.ಡಿ.ತಮ್ಮಯ್ಯ ಅವರು ಮಾತನಾಡಿ, ಈ ನಗರಕ್ಕೆ ಹೈಟೆಕ್ ಬಸ್ ನಿಲ್ದಾಣದ ಅವಶ್ಯಕತೆ ಇದೆ ಎಂಬುದು ಚಿಕ್ಕಮಗಳೂರು ಜನತೆಯ ಆಶಯವಾಗಿತ್ತು. ರಾಜ್ಯ ಸರ್ಕಾರದ ಆಸಕ್ತಿಯಿಂದ 19.87 ಕೋಟಿ ರೂ.ಗಳ ವೆಚ್ಚದ ನೂತನ ಹೈಟೆಕ್ ಬಸ್ ನಿಲ್ದಾಣ ನಿರ್ಮಾಣ ಕಾರ್ಯಕ್ಕೆ ಚಾಲನೆ ದೊರಕಿದೆ ಎಂದು ತಿಳಿಸಿದರು.

ರಾಜ್ಯ ಸರ್ಕಾರ ಜಾರಿಗೊಳಿಸಿರುವ ವಾರ್ಷಿಕ 57 ಸಾವಿರ ಕೋಟಿ ರೂ.ಗಳ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಫಲವಾಗಿ ರಾಜ್ಯದ ಸಾರ್ವಜನಿಕರ ಬದುಕಿನ ತಲಾದಾಯದಲ್ಲಿ ಇಡೀ ದೇಶದಲ್ಲಿ ನಮ್ಮ ರಾಜ್ಯ ಮೊದಲನೇ ಸ್ಥಾನದಲ್ಲಿರುವಂತಾಗಿದೆ ಎಂದರು. ನಗರದಲ್ಲಿ ಗುಂಡಿ ಬಿದ್ದಿರುವ ರಸ್ತೆಗಳ ಅಭಿವೃದ್ಧಿಗೆ ಈಗಾಗಲೇ ನವೆಂಬರ್ 16 ರಂದು ಗುದ್ದಲಿಪೂಜೆ ನೆರವೇರಿಸಲಾಗಿದೆ. ಡಿಸೆಂಬರ್ ಒಂದರಿಂದ ಕಾಮಗಾರಿ ಆರಂಭವಾಗಲಿದ್ದು, ಮುಂದಿನ ಮಾರ್ಚ್ 31 ರೊಳಗೆ 22.5 ಕೋಟಿ ರೂ.ವೆಚ್ಚದಲ್ಲಿ ನಗರದ ಎಲ್ಲಾ ಪ್ರಮುಖ ರಸ್ತೆಗಳ ಡಾಂಬರೀಕರಣ ಕಾರ್ಯ ಕೈಗೊಳ್ಳುವುದಾಗಿ ತಿಳಿಸಿದರು. 35 ಕೋಟಿ ರೂ.ಗಳ ವೆಚ್ಚದಲ್ಲಿ ಗ್ರಾಮಾಂತರ ಭಾಗದ ಎಲ್ಲಾ ರಸ್ತೆಗಳನ್ನು ಕೂಡ ದುರಸ್ತಿಪಡಿಸಲಾಗುವುದು ಎಂದು ತಿಳಿಸಿದರು.

ನಗರಸಭೆ ಅಧ್ಯಕ್ಷೆ ಶೀಲಾ ದಿನೇಶ್ ಮಾತನಾಡಿದರು. ರಾಜ್ಯ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ನಾಗೇಂದ್ರ ಪ್ರಾಸ್ತಾವಿಕ ಮಾತನಾಡಿದರು.

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಟಿ.ಡಿ.ರಾಜೇಗೌಡ, ಭದ್ರಾ ಕಾಡಾ ಅಧ್ಯಕ್ಷರಾದ ಡಾ.ಕೆ.ಪಿ.ಅಂಶುಮಂತ್, ಕ.ರಾ.ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮದ ಅಧ್ಯಕ್ಷರಾದ ಬಿ.ಹೆಚ್.ಹರೀಶ್, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಎಂ.ಸಿ.ಶಿವಾನಂದಸ್ವಾಮಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮೊಹಮ್ಮದ್ ನಯಾಜ್, ಮುಖಂಡರಾದ ಕೆ.ಎಸ್.ಶಾಂತೇಗೌಡ, ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್, ಜಿ.ಪಂ.ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಕ್ರಮ್ ಅಮಟೆ ಕಾರ್ಯಕ್ರಮದಲ್ಲಿದ್ದರು.

## ಇಂದು ಉದ್ಯಮಿಗಳಿಗೆ ಅರಿವು ಮೂಡಿಸುವ ಕಾರ್ಯಕ್ರಮ

**ಚಿಕ್ಕಮಗಳೂರು, ನ.18:** ಜಿಲ್ಲಾ ಕೈಗಾರಿಕಾ ಕೇಂದ್ರ, ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ (ಕಾಸಿಯಾ) ಇವುಗಳ ಸಂಯುಕ್ತಾಶ್ರಯದಲ್ಲಿ ಎಂಎಸ್‌ಎಂಇಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಹಾಗೂ ವೇಗಗೊಳಿಸುವುದು(ಆರ್‌ಎಎಂಪಿ) ಯೋಜನೆಯಡಿಯಲ್ಲಿ ಲೀನ್ ಯೋಜನೆ ಮತ್ತು ಝೆಡ್‌ಇಡಿ ಹಾಗೂ ರಫ್ತು ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮವನ್ನು ನವೆಂಬರ್ 19 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಮಿಲನ್ ಚಿತ್ರಮಂದಿರ ಸಮೀಪದ ಹೋಟೇಲ್ ಆದ್ರಿಕಾದಲ್ಲಿ ಆಯೋಜಿಸಲಾಗಿದೆ. ಜಿಲ್ಲೆಯ ಉದ್ದಿಮೆದಾರರು ಭಾಗವಹಿಸಿ ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕೆಂದು ಈ ಮೂಲಕ ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೈಗಾರಿಕಾ ಕೇಂದ್ರ (ದೂರವಾಣಿ ಸಂಖ್ಯೆ:08262-295821)ವನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

## ಬ್ರಾಹ್ಮಣ ಸಮುದಾಯದ ವಿದ್ಯಾರ್ಥಿಗಳಿಗೆ ಶುಲ್ಕದ ನೆರವು

**ಚಿಕ್ಕಮಗಳೂರು, ನ.18:** ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯು ರಾಜ್ಯದ ಬ್ರಾಹ್ಮಣ ಸಮುದಾಯದ ಪ್ರತಿಭಾವಂತ ಪದವೀಧರರು ನಾಗರಿಕ ಸೇವೆಗಳಾದ ಐಎಎಸ್ ಅಥವಾ ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬರೆದು ಭಾರತದ ಆಡಳಿತಾತ್ಮಕ ಸೇವೆಗಳಲ್ಲಿ ತೊಡಗಿಸಿಕೊಳ್ಳಲು ಉತ್ತೇಜನ ನೀಡುವ ಸಲುವಾಗಿ 'ಚಾಣಕ್ಯ ಆಡಳಿತ ತರಬೇತಿ ಯೋಜನೆ' ಯನ್ನು ಹಮ್ಮಿಕೊಳ್ಳಲಾಗಿದ್ದು, ಈ ಯೋಜನೆಯಲ್ಲಿ ಬ್ರಾಹ್ಮಣ ಸಮುದಾಯದ ವಿದ್ಯಾರ್ಥಿಗಳು ಐಎಎಸ್ ಅಥವಾ ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ತರಬೇತಿ ಪಡೆಯುವ ಸಂಬಂಧ 2025-26ನೇ ಸಾಲಿನಲ್ಲಿ ಪ್ರವೇಶ ಪಡೆದು ಪಾವತಿಸಲಾದ ತರಬೇತಿ ಶುಲ್ಕದ ಮೊತ್ತದಲ್ಲಿ ಗರಿಷ್ಠ ರೂ. ಒಂದು ಲಕ್ಷಗಳಿಗೆ ಮಿತಿಗೊಳಿಸಿ ಡಿಬಿಟಿ ಮೂಲಕ ನೇರವಾಗಿ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಮಾಡಲಾಗುವುದು.

ಚಾಣಕ್ಯ ಆಡಳಿತ ತರಬೇತಿ ಯೋಜನೆಗೆ ಡಿಸೆಂಬರ್ 15ರ ಸಂಜೆ 5 ಗಂಟೆಯೊಳಗೆ ಅರ್ಜಿ ಸಲ್ಲಿಸಬಹುದು. ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದ ಪದವೀಧರರು https://ksbdb.co.in/las ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಲು ಹಾಗೂ ಹೆಚ್ಚಿನ ಮಾಹಿತಿಗೆ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಕಚೇರಿ (+918029605888, +918762249230) ಅಥವಾ ಚಿಕ್ಕಮಗಳೂರಿನಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಕಚೇರಿಯ (08262-295535) ಸಹಾಯವಾಣಿಯನ್ನು ಕಚೇರಿ ವೇಳೆಯಲ್ಲಿ (ಬೆಳಗ್ಗೆ 10 ರಿಂದ ಸಂಜೆ 5 ಗಂಟೆ) ಸಂಪರ್ಕಿಸಬಹುದೆಂದು ಪ್ರಕಟಣೆಯೊಂದರಲ್ಲಿ ತಿಳಿಸಲಾಗಿದೆ.

## ಇಂದು-ನಾಳೆ ವಿಧಾನಸಭೆ ಅರ್ಜಿಗಳ ಸಮಿತಿ ಜಿಲ್ಲಾ ಪ್ರವಾಸ

**ಚಿಕ್ಕಮಗಳೂರು, ನ.18:** ಕರ್ನಾಟಕ ವಿಧಾನಸಭೆಯ ಅರ್ಜಿಗಳ ಸಮಿತಿಯ ಅಧ್ಯಕ್ಷರು ಹಾಗೂ ಮಾನ್ಯ ವಿಧಾನಸಭಾ ಉಪಸಭಾಧ್ಯಕ್ಷರು, ಮಾನ್ಯ ವಿಧಾನಸಭಾ ಸದಸ್ಯರು ಹಾಗೂ ಸಮಿತಿಯ ಸದಸ್ಯರು ಮತ್ತು ಅಧಿಕಾರಿಗಳು ನವೆಂಬರ್ 19 ಮತ್ತು 20 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ.

ನವೆಂಬರ್ 19 ರಂದು ಚಿಕ್ಕಮಗಳೂರು ನಗರಕ್ಕೆ ಸಂಜೆ 4 ಗಂಟೆಗೆ ಆಗಮಿಸಲಿರುವ ಸಮಿತಿಯು ಅಂದು ರಾತ್ರಿ ವಾಸ್ತವ್ಯ ಮಾಡಲಿದೆ. ನವೆಂಬರ್ 20 ರಂದು ಬೆಳಿಗ್ಗೆ 11.30 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಸಭೆ ನಡೆಸಲಿರುವ ಸಮಿತಿಯು ಅನಂತರ ನಗರದ ವೈದ್ಯಕೀಯ ಕಾಲೇಜು ಕಟ್ಟಡ ಹಾಗೂ ನೂತನವಾಗಿ ನಿರ್ಮಾಣವಾಗುತ್ತಿರುವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಮತ್ತು ತಾಯಿ ಮಕ್ಕಳ ಆಸ್ಪತ್ರೆ ಕಟ್ಟಡಗಳು ಕಳಪೆ ಕಾಮಗಾರಿಯಿಂದ ಕೂಡಿದ್ದು, ಕಾಮಗಾರಿ ಪೂರ್ಣಗೊಳಿಸಲು ವಿಳಂಬ ಮಾಡುತ್ತಿರುವ ಕುರಿತು ಪರಿವೀಕ್ಷಣೆ ನಡೆಸಲಿದೆ. ಮಧ್ಯಾಹ್ನ 12.30ಕ್ಕೆ ಜಿಲ್ಲಾಧಿಕಾರಿಗಳ

# ಭಾರತದ ಅತ್ಯಂತ ವಿಶ್ವಾಸಾರ್ಹ ಹೂಡಿಕೆಯ ತಾಣ ಕರ್ನಾಟಕ: ಸಿಎಂ

**ಬೆಂಗಳೂರು:** ಸರ್ಕಾರದ ಸ್ಪಷ್ಟ ನೀತಿಗಳು, ಸುಗಮ ಅನುಮತಿಗಳು, ಕೌಶಲ್ಯ, ಮೂಲಸೌಕರ್ಯ ಹಾಗೂ ಪೂರಕ ವಾತಾವರಣಗಳು, ಕರ್ನಾಟಕವನ್ನು ಭಾರತದ ಅತ್ಯಂತ ವಿಶ್ವಾಸಾರ್ಹ ಹೂಡಿಕೆ ತಾಣವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ, ಸಾಫ್ಟ್‌ವೇರ್ ಟೆಕ್ನಾಲಜಿ ಪಾರ್ಕ್ಸ್ ಆಫ್ ಇಂಡಿಯಾ ವತಿಯಿಂದ ಆಯೋಜಿಸಿರುವ ಬೆಂಗಳೂರು ಟೆಕ್ ಸಮ್ಮಿಟ್ 28ನೇ ಆವೃತ್ತಿಯನ್ನು ಮಂಗಳವಾರ ಉದ್ಘಾಟಿಸಿ ಸಿಎಂ ಮಾತನಾಡಿದರು.

ಪ್ರಮುಖ ನೀತಿಗಳ ರಚನೆ-ಐತಿಹಾಸಿಕ ಹೆಜ್ಜೆ

ಈ ಶೃಂಗಸಭೆಯಲ್ಲಿ, ಕರ್ನಾಟಕ ಮಾಹಿತಿ ತಂತ್ರಜ್ಞಾನ ನೀತಿ 20252030, ಬಾಹ್ಯಾಕಾಶ ತಂತ್ರಜ್ಞಾನ ನೀತಿ 2025-2030, ಮತ್ತು ಸ್ಟಾರ್ಟಪ್ ನೀತಿ 2025-2030 ಗಳಂತಹ ಮೂರು ಪ್ರಮುಖ ನೀತಿಗಳನ್ನು ರಚಿಸುವ ಮೂಲಕ ಐತಿಹಾಸಿಕ ಹೆಜ್ಜೆಯನ್ನು ಇಡಲಾಗಿದೆ. ದತ್ತಾಂಶ ಚಾಲಿತ ಹಾಗೂ ಆಧುನಿಕ ತಂತ್ರಜ್ಞಾನಕ್ಕೆ ಪೂರಕವಾದ ಕರ್ನಾಟಕ ಮಾಹಿತಿ ತಂತ್ರಜ್ಞಾನ ನೀತಿಯಿಂದ, ರಾಜ್ಯವನ್ನು ನಾವೀನ್ಯತೆ ಮತ್ತು ಡೀಪ್‌ಟೆಕ್‌ಗಳಿಗೆ ಜಾಗತಿಕ ತಾಣವಾಗಿಸುವ ಗುರಿಯನ್ನು ಸರ್ಕಾರ ಹೊಂದಿದೆ. 2034ರ ವೇಳೆಗೆ ಕರ್ನಾಟಕವನ್ನು ಭಾರತದ ಪ್ರಮುಖ ಬಾಹ್ಯಾಕಾಶ ತಂತ್ರಜ್ಞಾನ ಕೇಂದ್ರವಾಗಿ ಪರಿವರ್ತಿಸುವ ನಮ್ಮ ಗುರಿಗೆ ಬಾಹ್ಯಾಕಾಶ ತಂತ್ರಜ್ಞಾ ನೀತಿ 2025-30 ಸಹಕಾರಿಯಾಗಲಿದೆ. ಹೊಸ ಸ್ಟಾರ್ಟ್‌ಅಪ್ ನೀತಿಯಿಂದ ಮುಂದಿನ ಐದು ವರ್ಷಗಳಲ್ಲಿ ಬಂಡವಾಳ ನೆರವು, ಮಾರುಕಟ್ಟೆ ಅವಕಾಶ, ಮೂಲಸೌಲಭ್ಯ, ಕೌಶಲ್ಯಾಭಿವೃದ್ಧಿಯಂತಹ




ಕ್ರಮಗಳ ಮೂಲಕ 25,000 ಸ್ಟಾರ್ಟ್‌ಅಪ್ಗಳ ಸ್ಥಾಪನೆಗೆ ನೆರವಾಗುವ ಗುರಿಯನ್ನು ಸರ್ಕಾರ ಹೊಂದಿದೆ ಎಂದು ತಿಳಿಸಿದರು.

ಕಳೆದ ಮೂರು ದಶಕಗಳಿಂದ ಬೆಂಗಳೂರಿನಲ್ಲಿ ಸಮಾವೇಶಗೊಳ್ಳುತ್ತಿರುವ ಬೆಂಗಳೂರು ತಂತ್ರಜ್ಞಾನ ಶೃಂಗಸಭೆಯು ಅಂತಾರಾಷ್ಟ್ರೀಯ ಸಹಭಾಗಿತ್ವದಲ್ಲಿ ನಾವೀನ್ಯತೆ ಮತ್ತು ತಂತ್ರಜ್ಞಾನದಲ್ಲಿ ಹೊಸ ಆವಿಷ್ಕಾರಗಳನ್ನು ಸಂಶೋಧಿಸಿ, ಸೃಷ್ಟಿಸಿ ಹೊಸ ದಿಕ್ಕಿನಲ್ಲಿ ಹೆಜ್ಜೆಗಳನ್ನಿಟ್ಟು ವಿಶ್ವದ ಗಮನವನ್ನು ಕರ್ನಾಟಕದತ್ತ ಸೆಳೆಯುತ್ತಿದೆ ಎಂದು ಹೆಮ್ಮೆಯಿಂದ ಹೇಳುತ್ತೇನೆ. ಈ ಸಮಾವೇಶದಲ್ಲಿ ಭಾಗವಹಿಸಿರುವ ಪ್ರತಿಯೊಬ್ಬ ಪರಿಣತರು ತಮ್ಮ ಜ್ಞಾನ, ಕೌಶಲ್ಯಗಳನ್ನು ಈ ವೇದಿಕೆಯಲ್ಲಿ ಹಂಚಿಕೊಂಡು ರಾಜ್ಯದ ಭವಿಷ್ಯವನ್ನು ರೂಪಿಸುವಲ್ಲಿ ಪರಿವರ್ತನೆಯ ಹರಿಕಾರರಾಗುತ್ತಾರೆಂದು ಎಂದರು. ಪರಿವರ್ತನೆಯ ಮನ್ವಂತರಕ್ಕೆ ವೇದಿಕೆ

ಬೆಂಗಳೂರು ತಂತ್ರಜ್ಞಾನ ಶೃಂಗಸಭೆಯು ಒಂದು ಸಮಾವೇಶಕ್ಕಿಂತಲೂ ಹೆಚ್ಚಾಗಿ ಹೊಸ ಹೊಸ ವಿಚಾರಗಳು, ಸಂವಾದಗಳು, ಬಂಡವಾಳ ಹೂಡಿಕೆ ಆವಿಷ್ಕಾರ ಮತ್ತು ಪರಿವರ್ತನೆಯ ಮನ್ವಂತರಕ್ಕೆ ವೇದಿಕೆಯಾಗಿದೆ. ಇಂದಿನಿಂದ ಮೂರು ದಿನಗಳ ಕಾಲ ನಡೆಯುವ ಈ ಸಮ್ಮೇಳನ ಹಲವು ಉತ್ತಮ ಅವಕಾಶಗಳಿಗೆ ಜಾಗತಿಕ ವೇದಿಕೆಯಾಗಿ ಹೊಸ ಮುನ್ನುಡಿ ಬರೆಯಲಿ ಎಂದು ಹಾರೈಸುತ್ತೇನೆ ಎಂದರು. ಈ ವರ್ಷದ ಧ್ಯೇಯವಾಕ್ಯ: "ಭವಿಷ್ಯೀಕರಣಗೊಳ್ಳಿ-ಅಜ್ಞಾತವನ್ನು ರೂಪಿಸುತ್ತಾ, ಊಹಿಸಿಲಾಗದ್ದನ್ನು ಅಳೆಯುತ್ತಾ , ಜಗತ್ತನ್ನು ಮುಂದೆ ಕೊಂಡೊಯ್ಯುವುದು" ಎಂಬುದಾಗಿದೆ. ಈ ಆಶಯ ನಮ್ಮ ಸಾಮೂಹಿಕ ಧ್ಯೇಯದ ಸಂಕಲ್ಪವನ್ನು ಎತ್ತಿ ಹಿಡಿಯುತ್ತದೆ. ಈ ಧ್ಯೇಯ ವಾಕ್ಯದ ಆಶಯದಂತೆ ಬೆಂಗಳೂರು ತಂತ್ರಜ್ಞಾನ ಶೃಂಗಸಭೆ- 2025, ಸಮಾವೇಶದಲ್ಲಿ ಪಾಲ್ಗೊಳ್ಳಲಿರುವ600ಕ್ಕೂ ಹೆಚ್ಚು ಜಾಗತಿಕ ಭಾಷಣಕಾರರು, 1200ಕ್ಕೂ ಹೆಚ್ಚು ಪ್ರದರ್ಶಕರು, 60ಕ್ಕೂ ಹೆಚ್ಚು ದೇಶದ ನಿಯೋಗಗಳು ಮತ್ತು ಸಾವಿರಾರು ಪರಿಣತರು ಮುಂದಿನ ದಶಕಗಳಲ್ಲಿ ತಂತ್ರಜ್ಞಾನದ ರೂಪುರೇಷೆಗಳನ್ನು , ಹೊಸ ಸಾಧ್ಯತೆಗಳನ್ನು ಇಲ್ಲಿ ಸಂವಾದಿಸಿ, ಕೇವಲ ಕರ್ನಾಟಕಕ್ಕಾಗಲಿ ಅಥವಾ ಭಾರತಕ್ಕೆ ಆಗಲಿ ಮಾತ್ರವಲ್ಲ, ಇಡೀ ಜಗತ್ತಿಗೇ ತೆರೆದಿಡುತ್ತಾರೆ .

ಬೆಂಗಳೂರು ತಂತ್ರಜ್ಞಾನ ಶೃಂಗಸಭೆ- 2025 ಪರಿವರ್ತನೆಯ ಹರಿಕಾರ ಎಂಬುದನ್ನು ಈಗಾಗಲೇ ಹೇಳಿದ್ದೇನೆ. ಇದು ಶೈಕ್ಷಣಿಕ ವಲಯವನ್ನು ಉದ್ಯಮಕ್ಕೆ ಬೆಸೆಯುತ್ತದೆ. ನವೋದ್ಯಮಗಳನ್ನು ಹೂಡಿಕೆದಾರರಿಗೆ ಪರಿಚಯಿಸುತ್ತದೆ. ಅನ್ಯ ದೇಶಗಳ ಪರಿಣಿತರನ್ನು ಸಂಶೋಧಕರನ್ನು, ನೀತಿ ನಿರೂಪಕರನ್ನು ಪರಸ್ಪರ ಬೆಸೆಯುವುದಲ್ಲದೇ , ಜಾಗತಿಕ ಮಾರುಕಟ್ಟೆಗಳನ್ನು ಸಂಪರ್ಕಿಸಲು ಬೃಹತ್ ವೇದಿಕೆಯಾಗಿದೆ ಎಂಬುದನ್ನು ಹೆಮ್ಮೆಯಿಂದ ಹೇಳುತ್ತೇನೆ ಎಂದರು.

ಸುಸ್ಥಿರ ಅಭಿವೃದ್ಧಿ ನಮ್ಮ ಧ್ಯೇಯ ಭವಿಷ್ಯೀಕರಣಗೊಳ್ಳಿ ಎನ್ನುವ ಆಶಯ ನುಡಿಯಂತೆ ತಂತ್ರಜ್ಞಾನವು ಸಾಮಾಜಿಕ ಒಳಿತನ್ನು, ಆರ್ಥಿಕ ನ್ಯಾಯವನ್ನು, ಸುಸ್ಥಿರ ಅಭಿವೃದ್ಧಿಯನ್ನು ಮತ್ತು ಸಮಾಜದ ಎಲ್ಲರಿಗೂ ಸಮೃದ್ಧಿಯನ್ನು ಒದಗಿಸಬೇಕು ಎಂಬ ನಮ್ಮ ನಂಬಿಕೆಯನ್ನು ನಾವು ಪುನರುಚ್ಚರಿಸುತ್ತೇವೆ. ಕೃತಕ ಬುದ್ಧಿಮತ್ತೆ, ಕ್ವಾಂಟಮ್, ಬಯೋಟೆಕ್, ಬಾಹ್ಯಾಕಾಶ ಮತ್ತು ಹಸಿರು ತಂತ್ರಜ್ಞಾನಗಳಿಂದ ಕೂಡಿರುವ ಡಿಜಿಟಲ್ ಯುಗದಲ್ಲಿ ನಾವು ನಿಂತಿದ್ದೇವೆ ಎಂದರು.

ಬೆಂಗಳೂರು ತಂತ್ರಜ್ಞಾನ ಶೃಂಗಸಭೆ-2025 ದಿಟ್ಟ, ಮಾನವೀಯ ಮತ್ತು ಪರಿವರ್ತನಾತ್ಮಕ ಭವಿಷ್ಯವನ್ನು ಸಹ-ಸೃಷ್ಟಿಸಲು ಇಡೀ ಜಗತ್ತಿಗೆ ಕರ್ನಾಟಕದ ಆಹ್ವಾನವಾಗಿದೆ. ದಶಕಗಳಿಂದ, ಬೆಂಗಳೂರನ್ನು ಭಾರತದ ಸಿಲಿಕಾನ್ ವ್ಯಾಲಿ ಎಂದು ಕರೆಯಲಾಗುತ್ತಿದೆ. ಆದರೆ ಇಂದು, ಅದು ಇನ್ನೂ ದೊಡ್ಡದಾಗಿ, ನಾವೀನ್ಯತೆ, ಪ್ರತಿಭೆ, ಸಂಶೋಧನೆ ಮತ್ತು ತಾಂತ್ರಿಕ ನಾಯಕತ್ವದ ಮುಂಚೂಣಿಯಲ್ಲಿ ಜಾಗತಿಕ ಕೇಂದ್ರವಾಗಿ ಬೆಳೆದು ನಿಂತಿದೆ ಎಂಬುದನ್ನು ಹೇಳಲು ಹೆಮ್ಮೆಯಾಗುತ್ತದೆ ಎಂದು ತಿಳಿಸಿದೆ.

ತಂತ್ರಜ್ಞಾನ ಶಕ್ತಿ ಕೇಂದ್ರವಾಗಿ ಕರ್ನಾಟಕದ ಬೆಳವಣಿಗೆ ಆಕಸ್ಮಿಕವಲ್ಲ; ಇದು ದೂರದೃಷ್ಟಿಯ ನೀತಿಗಳು, ಆಳವಾದ ಸಾಂಸ್ಥಿಕ ಶಕ್ತಿ ಮತ್ತು ಪ್ರತಿ ಹಂತದಲ್ಲೂ ಸೃಜನಶೀಲತೆ ಮತ್ತು ಶ್ರೇಷ್ಠತೆಯನ್ನು ಪೋಷಿಸುವ ಪರಿಸರ ವ್ಯವಸ್ಥೆಯ ಪರಿಣಾಮವಾಗಿದೆ.

ಕರ್ನಾಟಕವು ಜ್ಞಾನಕಾಶಿ ಎಂಬುದನ್ನು ಹೆಮ್ಮೆಯಿಂದ ಹೇಳುತ್ತೇನೆ. 85 ವಿಶ್ವವಿದ್ಯಾಲಯಗಳು, 243 ಎಂಜಿನಿಯರಿಂಗ್ ಕಾಲೇಜುಗಳು ಮತ್ತು ಸುಮಾರು 1,800 ಐಟಿಐಗಳಿಗೆ ಕರ್ನಾಟಕ ನೆಲೆಯಾಗಿದೆ. ರಾಜ್ಯದ ನಿರುದ್ಯೋಗ ಪ್ರಮಾಣ 4.3% ರಷ್ಟು ಮಾತ್ರ ಇದ್ದು, ಇದು ರಾಜ್ಯದ ಸಮರ್ಥ ಉತ್ಪಾದಕತೆ ಮತ್ತು ಉದ್ಯೋಗಾವಕಾಶಗಳನ್ನು ಎತ್ತಿ ತೋರಿಸುತ್ತದೆ.


# ದೆಹಲಿ ಬಾಂಬ್‌ಸ್ಫೋಟಕ್ಕೂ ಮುನ್ನ 'ಆತ್ಮಾಹುತಿ ಬಾಂಬ್ ದಾಳಿ' ಬಗ್ಗೆ ಮಾತಾಡಿದ ಡಾ. ಉಮರ್

**ನವದೆಹಲಿ:** ದೆಹಲಿಯ ಐತಿಹಾಸಿಕ ಕೆಂಪು ಕೋಟೆ ಬಳಿ ಸಂಭವಿಸಿದ ಕಾರು ಸ್ಫೋಟದಲ್ಲಿ 15 ಜನ ಸಾವನ್ನಪ್ಪಿದ ಒಂದು ವಾರದ ನಂತರ, ಬಾಂಬರ್ ಡಾ. ಉಮರ್ ಮೊಹಮ್ಮದ್ ಅಲಿಯಾಸ್ ಉಮರ್-ಉನ್-ನಬಿ ಸ್ವತಃ ಮಾತನಾಡಿದ ಮತ್ತು ದಿನಾಂಕವಿಲ್ಲದ ವಿಡಿಯೋ ಈಗ ಹೊರಬಿದ್ದಿದೆ.

ದೆಹಲಿ ಬಾಂಬರ್ ಡಾ. ಉಮರ್ ಮೊಹಮ್ಮದ್ ಅಲಿಯಾಸ್ ಉಮರ್-ಉನ್-ನಬಿ ಕಾರು ಸ್ಫೋಟಕ್ಕೂ ಮುನ್ನ ಆತ್ಮಹುತಿ ಬಾಂಬ್ ದಾಳಿ ಬಗ್ಗೆ ಮತ್ತು "ಹುತಾತ್ಮತೆ" ಬಗ್ಗೆ ಮಾತನಾಡಿರುವುದು ವಿಡಿಯೋದಲ್ಲಿ ದಾಖಲಾಗಿದೆ.

ಈ ವಿಡಿಯೋದಲ್ಲಿ, ಭಯೋತ್ಪಾದಕ ಉಮರ್ ಆತ್ಮಹುತಿ ಬಾಂಬ್ ದಾಳಿಯನ್ನು ನೀವು ಸರಿಯಾಗಿ ಅರ್ಥಮಾಡಿಕೊಂಡಿಲ್ಲ ಎಂದು ಹೇಳುತ್ತಾನೆ. ಜನರು ಮಾಡುವ ದೊಡ್ಡ ತಪ್ಪು ಎಂದರೆ ಬಾಂಬ್ ದಾಳಿ ಅಥವಾ ಆತ್ಮಹುತಿ ಬಾಂಬ್ ದಾಳಿಯ ಕಲ್ಪನೆ ನಿಜವಾಗಿಯೂ ಏನೆಂದು ಅರ್ಥಮಾಡಿಕೊಳ್ಳಲು ವಿಫಲವಾಗಿರುವುದು ಎಂದು ಹೇಳಿದ್ದಾನೆ.

ಬಹಳ ತಪ್ಪಾಗಿ ಅರ್ಥೈಸಿಕೊಳ್ಳಲಾದ ಪರಿಕಲ್ಪನೆಗಳಲ್ಲಿ ಒಂದು ಆತ್ಮಹತ್ಯಾ ಬಾಂಬ್ ದಾಳಿಯಾಗಿದ್ದು, ಇದು ಇಸ್ಲಾಂನಲ್ಲಿ ತಿಳಿದಿರುವ ಹುತಾತ್ಮ ಕಾರ್ಯಾಚರಣೆಯಾಗಿದೆ. ಈಗ, ಬಹು ವಿರೋಧಾಭಾಸಗಳಿವೆ; ಅದರ ವಿರುದ್ಧ ಹಲವಾರು ವಾದಗಳನ್ನು ತರಲಾಗಿದೆ" ಎಂದು ಯುವ ವೈದ್ಯ ವಿಡಿಯೋದಲ್ಲಿ ಹೇಳಿದ್ದಾರೆ.



"ಹುತಾತ್ಮತೆ" ಕಾರ್ಯಾಚರಣೆ ಎಂದರೆ ಒಬ್ಬ ವ್ಯಕ್ತಿಯು ಒಂದು ನಿರ್ದಿಷ್ಟ ಸ್ಥಳ ಮತ್ತು ಸಮಯದಲ್ಲಿ ತಾನು ಸಾಯುತ್ತೇನೆ ಎಂದು ಗೊತ್ತಿರುತ್ತದೆ. ಆದರೆ ಯಾರೂ ಯಾವಾಗ ಅಥವಾ ಎಲ್ಲಿ ಸಾಯುತ್ತಾರೆ ಎಂಬುದನ್ನು ನಿಖರವಾಗಿ ಊಹಿಸಲು ಸಾಧ್ಯವಿಲ್ಲ ಮತ್ತು ಅದು ಯಾವಾಗ ಬೇಕಾದರೂ ಸಂಭವಿಸುತ್ತದೆ ಎಂದು ಉಮರ್ ಹೇಳುತ್ತಾರೆ. ಅಲ್ಲದೆ "ಸಾವಿಗೆ ಭಯಪಡಬೇಡಿ" ಎಂದು ಸಹ ವೈದ್ಯ ಹೇಳುತ್ತಾರೆ.

ಇಸ್ಲಾಂನಲ್ಲಿ ಆತ್ಮಹತ್ಯೆಯನ್ನು ನಿಷೇಧಿಸಲಾಗಿದೆ. ಆದರೆ ಆತ್ಮಹತ್ಯಾ ಬಾಂಬ್ ದಾಳಿಯನ್ನು "ಹುತಾತ್ಮತೆ"ಯ ಕೃತ್ಯವೆಂದು ಉಮರ್ ವಿಡಿಯೋದಲ್ಲಿ ಸಮರ್ಥಿಸುತ್ತಿರುವಂತೆ ತೋರುತ್ತದೆ.

ಈ ವಿಡಿಯೋದಲ್ಲಿ, ಉಮರ್ ಇಂಗ್ಲಿಷ್‌ನಲ್ಲಿ ಮಾತನಾಡಿದ್ದು, ಸಾಕಷ್ಟು ಸ್ಪಷ್ಟವಾಗಿ ಹೇಳುವುದರಿಂದ ಅವರು ಆತ್ಮಹತ್ಯಾ ಬಾಂಬ್ ದಾಳಿ ಮತ್ತು "ಹುತಾತ್ಮತೆ" ಯಂತಹ ವಿಷಯಗಳ ಬಗ್ಗೆ ಆಳವಾಗಿ ಯೋಚಿಸಿದ್ದಾರೆಂದು ತಿಳಿಯುತ್ತದೆ. ಇದು ಅವರನ್ನು ಸಂಪೂರ್ಣವಾಗಿ ಮೂಲಭೂತೀಕರಣಗೊಳಿಸಲಾಗಿದೆ ಎಂದು ಸೂಚಿಸುತ್ತದೆ. ಈ ವಿಡಿಯೋ ಶಾಂತ, ಸಂಯಮದ ವ್ಯಕ್ತಿಯೊಬ್ಬರು ಘೋರ ಕೃತ್ಯವನ್ನು ಸಮರ್ಥಿಸಿಕೊಳ್ಳುವುದನ್ನು ತೋರಿಸುತ್ತದೆ. ವಿಡಿಯೋ ಭಾರತದಲ್ಲಿ

# ಬಿಡದಿ ಬಳಿ ನೂತನ ಐಟಿ ನಗರ ನಿರ್ಮಾಣದ ಆಲೋಚನೆ: ಡಿಕೆಶಿ

**ಬೆಂಗಳೂರು:** ಬೆಂಗಳೂರು ದಕ್ಷಿಣದ ಬಿಡದಿಯಲ್ಲಿ ನೂತನ ಐಟಿ ನಗರ ನಿರ್ಮಾಣಕ್ಕೆ ಆಲೋಚಿಸಲಾಗಿದೆ. ಬೆಂಗಳೂರಿನಲ್ಲಿ ಬಿಲಿಯನ್ ಡಾಲರ್ ಗಟ್ಟಲೆ ಬಂಡವಾಳ ಹೂಡಿಕೆಗೆ ನಾನಾ ದೇಶದ ನಾಯಕರುಗಳು ಮುಂದೆ ಬಂದಿದ್ದಾರೆ ಎಂದು ಡಿಸಿಎಂ ಡಿ. ಕೆ.ಶಿವಕುಮಾರ್ ಅವರು ತಿಳಿಸಿದರು.

ಸದಾಶಿವನಗರದ ನಿವಾಸದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಪ್ರತಿಕ್ರಿಯೆ ನೀಡಿದರು.ಬೆಂಗಳೂರಿನಲ್ಲಿ ಟೆಕ್ ಸಮ್ಮಿಟ್ ನಡೆಯುತ್ತಿರುವ ಬಗ್ಗೆ ಕೇಳಿದಾಗ ಜಗತ್ತಿನ ನಾನಾ ದೇಶದ ನಾಯಕರುಗಳು ಪ್ರತಿದಿನ ನನ್ನನ್ನು ಭೇಟಿ ಮಾಡುತ್ತಿರುತ್ತಾರೆ. ಅನೇಕರು ಬೆಂಗಳೂರಿನಲ್ಲಿ ಉದ್ದಿಮೆ ಆರಂಭಕ್ಕೆ ಉತ್ಸುಕರಾಗಿದ್ದಾರೆ. ನಾವು ಎಷ್ಟು ಸಾಧ್ಯವೋ ಅಷ್ಟು ಅವರೆಲ್ಲರ ಬೆಂಬಲಕ್ಕೆ ನಿಂತಿದ್ದೇವೆ. 60 ದೇಶಗಳ ಪ್ರತಿನಿಧಿಗಳು, ದೇಶದ ಎಲ್ಲಾ ರಾಜ್ಯಗಳ ಪ್ರಮುಖರು ಸುಮಾರು 50 ಸಾವಿರ ಮಂದಿ ಇದರಲ್ಲಿ ಭಾಗವಹಿಸಲಿದ್ದಾರೆ. 1,500 ದೊಡ್ಡ ಕಂಪೆನಿಗಳು ಭಾಗವಹಿಸುತ್ತಿವೆ. ಇವರುಗಳು ಉದ್ಯೋಗ ನೀಡಬೇಕು, ಸಂಪಾದನೆ ಮಾಡಬೇಕು. ಅದಕ್ಕೆ ನಮ್ಮ ಪ್ರೋತ್ಸಾಹ ಎಂದರು. ಪ್ರೋತ್ಸಾಹ ನೀಡಿದರೆ ಇಲ್ಲಿನ ಪ್ರತಿಭೆಗಳು, ಹೊಸ ಆವಿಷ್ಕಾರ, ತಂತ್ರಜ್ಞಾನ, ಸ್ಟಾರ್ಟ್ ಅಪ್ ಗಳು ಕರ್ನಾಟಕವನ್ನು ಹೊಸ ದಿಕ್ಕಿನೆಡೆಗೆ ಕೊಂಡೊಯ್ಯಲಿವೆ. ನೀವು ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸಬೇಕು ಎಂದು ನಮ್ಮ ಮುಂದಿನ ಪೀಳಿಗೆಗೆ ನಾನು ಸದಾ ಹೇಳುತ್ತಿರುತ್ತೇನೆ. ಹೊಸ ಆಲೋಚನೆಗಳು ಬಂದರೆ ಸ್ಟಾರ್ಟ್ ಅಪ್ ಮೂಲಕ ಬೆಳೆಯಲು ಸರ್ಕಾರ ಅವಕಾಶ ಕಲ್ಪಿಸಿ ನಿಮ್ಮ ಜೊತೆಗಿದೆ ಎಂದು ಹೇಳುತ್ತಿರುತ್ತೇನೆ. ನಮ್ಮನ್ನು ನಂಬಿ ಬಂದವರಿಗೆ ಉತ್ತಮ ಅವಕಾಶ ನೀಡುವುದು



ನಮ್ಮ ಕೆಲಸ. ಉದ್ಯಮಸ್ನೇಹಿ ವಾತಾವರಣ ನಿರ್ಮಿಸಲಾಗುವುದು ಎಂದರು.

ಐಟಿ ಸಚಿವರಾದ ಪ್ರಿಯಾಂಕ್ ಖರ್ಗೆ ಹಾಗೂ ಕಿಯೋನಿಕ್ಸ್ ಜವಾಬ್ದಾರಿ ಹೊತ್ತಿರುವ ಶರತ್ ಬಚ್ಚೇಗೌಡರು ಅತ್ಯುತ್ತಮವಾಗಿ ಕೆಲಸ ಮಾಡುತ್ತಿದ್ದಾರೆ. ಅವರ ಜೊತೆ ನಾವೆಲ್ಲರೂ ಇದ್ದೇವೆ. ಬೆಂಗಳೂರಿನ ವಾತಾವರಣವೇ ಎಲ್ಲದಕ್ಕೂ ಅನುಕೂಲಕರವಾಗಿದೆ. 25 ಲಕ್ಷ ಐಟಿ ಪರಿಣಿತರು ಇಲ್ಲಿದ್ದಾರೆ. ನಮ್ಮಲ್ಲಿರುವ ಮಾನವ ಸಂಪನ್ಮೂಲಗಳು ಬೇರೆ ಎಲ್ಲೂ ಇಲ್ಲ. ಈ ಸಮ್ಮೇಳನ ಮೂಲಕ ಮೂರು ದಿನಗಳ ಕಾಲ ಭವಿಷ್ಯದ ಬಗ್ಗೆ ಚರ್ಚೆ ಮಾಡಲಾಗುವುದು ಎಂದರು. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಮೊದಲ ದಿನದಿಂದ ಎಲ್ಲಾ ಕ್ಷೇತ್ರಗಳಿಗೆ ಅದರದೇ ಆದ ನೀತಿ ರೂಪಿಸಿ, ಪ್ರೋತ್ಸಾಹ ನೀಡುತ್ತಿದೆ. ರಸ್ತೆಗಳ ದುರಸ್ತಿ ಕಾರ್ಯಕ್ಕೆ ಹಲವಾರು ಕಂಪೆನಿಗಳು ಮೆಚ್ಚುಗೆ ವ್ಯಕ್ತಪಡಿಸುತ್ತಿರುವ ಬಗ್ಗೆ ಕೇಳಿದಾಗ, ನಾವು ನಮ್ಮ ಕೆಲಸ ಮಾಡಿದ್ದೇವೆ. ಟೀಕೆ ಮಾಡಿದರೂ ಸ್ವಾಗತ, ಹೊಗಳಿದರೂ ಸ್ವಾಗತ. ಜನಸೇವೆ ಮಾಡುವುದೇ ಮೊದಲ ಆದ್ಯತೆ ಎಂದರು.

# ದೆಹಲಿಯ ಕೆಂಪು ಕೋಟೆ ಸ್ಫೋಟ: 25 ಕಡೆ ಇಡಿ ದಾಳಿ

**ನವದೆಹಲಿ:** ಕೆಂಪು ಕೋಟೆ ಸ್ಫೋಟದ ತನಿಖೆಗೆ ಸಂಬಂಧಿಸಿದಂತೆ ಹರಿಯಾಣದಲ್ಲಿರುವ ಅಲ್-ಫಲಾಹ್ ವಿಶ್ವವಿದ್ಯಾಲಯ ಮತ್ತು ಅದರ ಜೊತೆ ಸಂಬಂಧ ಹೊಂದಿದ ವ್ಯಕ್ತಿಗಳಿಗೆ ಸಂಬಂಧಿಸಿದಂತೆ ದೆಹಲಿ ಹಾಗೂ ಫರಿದಾಬಾದ್‌ನ 25 ಸ್ಥಳಗಳಲ್ಲಿ ಜಾರಿ ನಿರ್ದೇಶನಾಲಯ (ಇಡಿ)ದ ಅಧಿಕಾರಿಗಳು ಶೋಧ ನಡೆಸಿದ್ದಾರೆ.

ವೈಟ್ ಕಾಲರ್ ಫರಿದಾಬಾದ್ ಭಯೋತ್ಪಾದಕ ಘಟಕದಲ್ಲಿ ಆರೋಪಿಗಳಾಗಿದ್ದ ಇತರರು ಕೆಲಸ ಮಾಡಿದ ವಿಶ್ವವಿದ್ಯಾಲಯ ಮತ್ತು ಸಂಸ್ಥೆಯ ಮಾಲೀಕರನ್ನು ಒಳಗೊಂಡಂತೆ ಹಣಕಾಸಿನ ಅಕ್ರಮಗಳಿಗೆ ಸಂಬಂಧಿಸಿದಂತೆ ಇಡಿ ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆಯ (ಪಿಎಂಎಲ್‌ಎ) ಅಡಿ ಪ್ರಕರಣವನ್ನು ದಾಖಲಿಸಿ ತನಿಖೆ ನಡೆಸುತ್ತಿದೆ.

ದೆಹಲಿಯಲ್ಲಿರುವ ವಿಶ್ವವಿದ್ಯಾಲಯದ ಪ್ರಧಾನ ಕಚೇರಿ ಮತ್ತು ಸಂಸ್ಥೆಯ ಟ್ರಸ್ಟಿಗಳ ಕಚೇರಿ ಮನೆಗಳ ಮೇಲೆ ಇಂದು ಮುಂಜಾನೆ ದಾಳಿ ನಡೆಸಲಾಗಿದೆ. ವಿಶ್ವವಿದ್ಯಾಲಯದ ಅಧ್ಯಕ್ಷ ಜಾವೇದ್ ಅಹ್ಮದ್ ಸಿದ್ದಿಕಿ ಅವರನ್ನು ಅವರ ನಿವಾಸದ ಮೇಲೂ ದಾಳಿ ನಡೆಸಿ ಪರಿಶೀಲನೆ ನಡೆಸಲಾಗುತ್ತಿದೆ.

ಭಯೋತ್ಪಾದಕ ಘಟಕಗಳ ಕೊತೆ ಸಂಪರ್ಕ ಹೊಂದಿರುವ ವಿಚಾರ ಬೆಳಕಿಗೆ ಬಂದ ನಂತರ ಭಾರತೀಯ ವಿಶ್ವವಿದ್ಯಾಲಯಗಳ ಸಂಘ (ಎಐಯು) ಅಲ್-ಫಲಾಹ್ ವಿಶ್ವವಿದ್ಯಾಲಯದ ಸದಸ್ಯತ್ವವನ್ನು ಈಗಾಗಲೇ ರದ್ದುಗೊಳಿಸಿದೆ. ವಿಶ್ವವಿದ್ಯಾಲಯದ ವಿರುದ್ಧ ದೆಹಲಿ ಪೊಲೀಸರು ಎರಡು ಪ್ರತ್ಯೇಕ ಎಫ್‌ಐಆರ್‌ಗಳನ್ನು ದಾಖಲಿಸಿದ ಕೆಲ ದಿನಗಳ ನಂತರ ಇಡಿ ದಾಳಿ ನಡೆಸಿ ಪರಿಶೀಲನೆ ನಡೆಸುತ್ತಿದೆ. ಒಂದು ಎಫ್‌ಐಆರ್ ವಂಚನೆ ಆರೋಪಗಳಿಗೆ ಸಂಬಂಧಿಸಿದ್ದಾಗಿದ್ದರೆ, ಎರಡನೆಯದನ್ನು ನಕಲಿ ದಾಖಲೆಗಳಿಗೆ ಸಂಬಂಧಿಸಿದ ವಿಭಾಗಗಳ ಅಡಿಯಲ್ಲಿ ದಾಖಲಾಗಿದೆ.

ಕೆಂಪುಕೋಟೆ ಬಳಿಯ ಸ್ಫೋಟಕ್ಕೆ ಕಾರಣನಾದ ಡಾ. ಉಮರ್ ಅಲ್ ನಬಿ ?ಸುಸೈಡ್ ಬಾಂಬ್ ದಾಳಿ ಬಗ್ಗೆ ಸಾರ್ವಜನಿಕರಿಗೆ ತಪ್ಪು ತಿಳುವಳಿಕೆ? ಇದೆ ಎಂದು ಹೇಳುವ ವೀಡಿಯೊ ಬೆಳಕಿಗೆ ಬಂದಿದೆ. ಈ ವೀಡಿಯೊವನ್ನು ಬೇರೆಯವರಲ್ಲಿ ಗೊಂದಲ ಸೃಷ್ಟಿಸಲು ಬಳಸಿದ್ದಾನೆ. ಎಂದು ತನಿಖಾಧಿಕಾರಿಗಳು ಹೇಳಿದ್ದಾರೆ. ಸ್ಪಷ್ಟವಾದ ಇಂಗ್ಲಿಷ್‌ನಲ್ಲಿ ಮಾತನಾಡುವ ಡಾ. ಉಮರ್, ಸುಸೈಡ್ ಬಾಂಬಿಂಗ್ ಎಂದು ಲೇಬಲ್ ಮಾಡಲ್ಪಟ್ಟಿರುವುದು ನಿಜವಾಗಿ ಇಸ್ಲಾಂನಲ್ಲಿ ಶಹೀದ್ ಕಾರ್ಯಾಚರಣೆ (ಮಾರ್ಟೈರ್‌ಡಮ್ ಆಪರೇಶನ್) ಎಂದು ವಿವರಿಸಿದ್ದಾನೆ. ಇದರ ವಿರುದ್ಧ ಬಹಳಷ್ಟು ವಾದಗಳು ಮತ್ತು ವಿರೋಧಾಭಾಸಗಳಿವೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**